ಸಂಪುಟ: 04 ಸಂಚಿಕೆ: 36 ಪುಟಗಳು: 08 ಶನಿವಾರ 20 ಏಪ್ರಿಲ್ 2024 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ನಮ್ಮ ಬದುಕು ಪೈಪೋಟಿ ನಡೆಸೋದಕ್ಕೆ ಇರುವುದಲ್ಲ. ಅದನ್ನು ನಾವೇ ಅನುಭವಿಸುತ್ತ. ನಿತ್ಯ ಸುಧಾರಿಸುತ್ತ ಸಾಗಬೇಕೇ ಹೊರತು. ಇನ್ನೊಬ್ಬರ ಬದುಕಿಗೆ ಹೋಲಿಸಿಕೊಂಡು ಕೊರಗಬಾರದು.

## ಯುವತಿ ಕೊಲೆ ಆರೋಪಿ ರಕ್ಷಣೆಗೆ ಕಾಣದ ಕೈಗಳ ಪ್ರಯತ್ನ

• ಉದಯವಾಹಿನಿ, ಬೆಂಗಳೂರು

ಪ್ರೀತಿ ನಿರಾಕರಿಸಿದ ಕಾಲೇಜು ವಿದ್ಯಾರ್ಥಿನಿಯನ್ನು ಕಾಲೇಜು ಆವರಣದಲ್ಲಿಯೇ ಬರ್ಬರವಾಗಿ ಕೊಲೆ ಮಾಡಿದ ಆರೋಪಿಯನ್ನು ರಕ್ಷಣೆ ಮಾಡಲು ಕಾಣದ ಕೈಗಳು ಪ್ರಯತ್ನಿಸುತ್ತಿವೆ ಎಂದು ಜಾತ್ಯತೀತ ಜನತಾದಳ ಆರೋಪಿಸಿದೆ.

ಈ ಬಗ್ಗೆ ತನ್ನ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿರುವ ಪಕ್ಷವು; ಲವ್ ಜಿಹಾದ್ ಮೋಹದ ಪಾಶವನ್ನು ಸಮರ್ಥನೆ ಮಾಡಿಕೊಂಡಿದ್ದ ಇದೇ ಕಾಣದ ಕೈಗಳು, ಈಗ ಹುಬ್ಬಳ್ಳಿ ವಿದ್ಯಾರ್ಥಿನಿ ಕುಮಾರಿ ನೇಹಾ ಹಿರೇಮಠ ಅವರನ್ನು ಹಾಡುಹಗಲೇ ಕಾಲೇಜು ಆವರಣದಲ್ಲಿಯೇ ಬರ್ಬರವಾಗಿ ಕೊಲೆ ಮಾಡಿದ ವಿಕೃತ ಪಾಪಿಯನ್ನು ರಕ್ಷಿಸಲು ಹೊಂಚು ಹಾಕುತ್ತಿವೆ ಎಂದು ದೂರಿದೆ.

ಈ ಘಟನೆ ಅತ್ಯಂತ ಆಘಾತಕಾರಿ. ಕಾನೂನು ಸುವ್ಯವಸ್ಥೆ ಹಳಿತಪ್ಪಿದೆ ಎನ್ನುವುದಕ್ಕೆ ಇದೇ ಜ್ವಲಂತ ಉದಾಹರಣೆ. ರಾಜ್ಯ ಕಾಂಗ್ರೆಸ್ ಸರಕಾರದ ಅತಿಯಾದ ತುಷ್ಟೀಕರಣವು ಅಪರಾಧ ಮನೋಭಾವದ ಕಿಡಿಗೇಡಿಗಳಿಗೆ ಅಫೀಮಿನಂತಾಗಿದೆ. ಕೆಲವರಿಗಂತೂ ಈ ನೆಲದ ಕಾನೂನು ಕಟ್ಟಳೆ ಅನ್ವಯ ಆಗುತ್ತಿಲ್ಲವೇನೋ ಎಂಬ ಅನುಮಾನವೂ ಕಾಡುತ್ತಿದೆ. ಈ ಸರಕಾರವೂ ಹಾಗೆಯೇ ವರ್ತಿಸುತ್ತಿದೆ ಎಂದು ಜೆಡಿಎಸ್ ಟೀಕಿಸಿದೆ.ಪ್ರೀತಿ ನಿರಾಕರಿಸಿದ ಕಾರಣಕ್ಕೆ ಜೀವ ತೆಗೆದ ಪರಮ ಪಾಪಿಯನ್ನು ಸುಮ್ಮನೆ ಬಿಡಬಾರದು. ಮುಂದೆ ಇಂತಹ ಘಟನೆಗಳು ನಡೆಯದಂತೆ ಸರಕಾರ ಕಟ್ಟೆಚ್ಚರ ವಹಿಸಬೇಕು. ಆ ನತದೃಷ್ಟ ವಿದ್ಯಾರ್ಥಿನಿಯ ಆತ್ಮಕ್ಕೆ ಚಿರಶಾಂತಿ ಸಿಗಲಿ ಎಂದು ಪ್ರಾರ್ಥಿಸುತ್ತೇವೆ ಎಂದು ಜೆಡಿಎಸ್ ತಿಳಿಸಿದೆ.

## ನೇಹಾ ಹಂತಕನಿಗೆ ಗಲ್ಲು ಶಿಕ್ಷೆಯಾಗಲಿ ಶಾಸಕ ಪ್ರಸಾದ್ ಅಬ್ಬಯ್ಯ

• ಉದಯವಾಹಿನಿ, ಹುಬ್ಬಳ್ಳಿ

ಹುಬ್ಬಳ್ಳಿಯಲ್ಲಿ ಕಾಂಗ್ರೆಸ್ ಕಾರ್ಪೊರೇಟರ್ ನೇಹಾ ಹಿರೇಮಠ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಹುಬ್ಬಳ್ಳಿ ಧಾರವಾಡ ಪೂರ್ವ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಶಾಸಕರಾದ ಪ್ರಸಾದ್ ಅಬ್ಬಯ್ಯ ಪ್ರತಿಕ್ರಿಯೆ ನೀಡಿದ್ದು, ಯಾವುದೇ ಕಾರಣಕ್ಕೂ ಹೆಣದ ಮೇಲೆ ರಾಜಕಾರಣ ಮಾಡುವುದು ಸರಿಯಲ್ಲ.ಆರೋಪಿ ಫಯಾಜ್‌ನಿಗೆ ಗಲ್ಲು ಶಿಕ್ಷೆ ಆಗಬೇಕು ಎಂದು ಪ್ರಸಾದ್ ಅಬ್ಬಯ್ಯ ಒತ್ತಾಯಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನೇಹಾ ಹಂತಕ ಫಯಾಜ್ಗೆ ಗಲ್ಲು ಶಿಕ್ಷೆ ಆಗಬೇಕೆಂದು ಬಯಸುತ್ತೇನೆ. ಹುಬ್ಬಳ್ಳಿ ಧಾರವಾಡ ಪೂರ್ವ ಕ್ಷೇತ್ರದ ಶಾಸಕ ಪ್ರಸಾದ್ ಅಬ್ಬಯ್ಯ ಹೇಳಿಕೆ ನೀಡಿದ್ದು, ಈ ಘಟನೆಯನ್ನು ಬಿಜೆಪಿ ರಾಜಕೀಯವಾಗಿ ಬಳಸಿಕೊಳ್ಳುತ್ತಿದೆ ಎನ್ನುವುದರ ಬಗ್ಗೆ ಮಾತನಾಡುವುದಿಲ್ಲ ಹೆಣದ ಮೇಲೆ ಯಾರು ಕೂಡ ರಾಜಕಾರಣವನ್ನ ಮಾಡಬಾರದು ಎಂದರು.

ಪೊಲೀಸ್ ಇಲಾಖೆ ಮಾಹಿತಿಯಂತೆ ಗೃಹ ಸಚಿವರು ಹೇಳಿಕೆ ನೀಡಿದ್ದಾರೆ. ನೇಹಾ ಹಂತಕನಿಗೆ ಗಲ್ಲು ಶಿಕ್ಷೆ ಆಗಬೇಕು ಎಂದು ನಾನು ಒತ್ತಾಯಿಸುತ್ತೇನೆ. ಇಂತಹ ಪ್ರಕರಣದಲ್ಲಿ ಯಾವುದೇ ಜಾತಿ ಧರ್ಮವನ್ನು ನೋಡಬಾರದು ಆರೋಪಿಗಳಿಗೆ ಕಠಿಣ ಶಿಕ್ಷೆ ಆದರೆ ಮಾತ್ರ ನ್ಯಾಯ ಕೊಡಿಸಿದಂತೆ ಆಗುತ್ತದೆ ಎಂದು ಹುಬ್ಬಳ್ಳಿ ಧಾರವಾಡ ಪೂರ್ವ ಕ್ಷೇತ್ರದ ಕಾಂಗ್ರೆಸ್ ಶಾಸಕ ಪ್ರಸಾದ ಅಬ್ಬಯ್ಯ ಹೇಳಿಕೆ ನೀಡಿದರು.

## ಲವ್ ಜಿಹಾದ್ ಅಲ್ಲ ಕೊಲೆ ಪ್ರಕರಣದ ಬಗ್ಗೆ ಸಚಿವ ಸ್ಪಷ್ಟನೆ

• ಉದಯವಾಹಿನಿ, ಬೆಂಗಳೂರು

ಹುಬ್ಬಳ್ಳಿಯಲ್ಲಿ ಮಾಜಿ ಕಾರ್ಪೊರೇಟರ್ ಪುತ್ರಿಯ ಬರ್ಬರ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸ್ಪಷ್ಟನೆ ನೀಡಿದ್ದಾರೆ. ಕೋಮು ಕೋನವನ್ನು ಸೂಚಿಸುವ ಊಹಾಪೋಹಗಳಿಗೆ ವ್ಯತಿರಿಕ್ತವಾಗಿ, ಈ ಘಟನೆಯು ಯಾವುದೇ ಧಾರ್ಮಿಕ ಅಥವಾ ರಾಜಕೀಯ ಉದ್ದೇಶಕ್ಕಿಂತ ಹೆಚ್ಚಾಗಿ ಹದಗೆಟ್ಟ ಸಂಬಂಧದಿಂದ ಉಂಟಾಗಿದೆ ಎಂದು ಪರಮೇಶ್ವರ್ ಹೇಳಿದ್ದಾರೆ.

ಮಾಧ್ಯಮಗಳನ್ನುದ್ದೇಶಿಸಿ ಮಾತನಾಡಿದ ಪರಮೇಶ್ವರ್, ಇದು ಸಂತ್ರಸ್ತೆ ಮತ್ತು ಅಪರಾಧಿಯ ನಡುವಿನ ಪರಸ್ಪರ ಪ್ರೀತಿಯ ಪ್ರಕರಣ ಎಂದು ಹೇಳಿದ್ದಾರೆ . ಹುಡುಗಿ ಸಂಬಂಧವನ್ನು ಕೊನೆಗೊಳಿಸಿ ದೂರ ಸರಿಯಲು ನಿರ್ಧರಿಸಿದಾಗ, ಆರೋಪಿ ಈ ಕೆಲಸ ಮಾಡಿದ್ದಾರೆ ಅಂಥ ಹೇಳಿದರು. ಘಟನೆಯಲ್ಲಿ ಧಾರ್ಮಿಕ ಪಾತ್ರವಿದೆ ಎಂಬ ಹೇಳಿಕೆಗಳನ್ನು ತಳ್ಳಿಹಾಕಿದರು.

## ಡಿ.ಕೆ ಶಿವಕುಮಾರ್ ಪರಮನೀಚ: ಹೆಚ್.ಡಿ. ಕುಮಾರಸ್ವಾಮಿ

• ಉದಯವಾಹಿನಿ, ಬೆಂಗಳೂರು

ಖಾಸಗಿ ಕಾರ್ಯಕ್ರಮವೊಂದರಲ್ಲಿ ಡಿಸಿಎಂ ಶಿವಕುಮಾರ್ ಅವರು ಹೇಳಿದ್ದ ಹೇಳಿಕೆಗೆ ಸಂಬಂಧಪಟ್ಟತೆ ಹೇಳಿರುವ ಹೇಳಿಕೆಗೆ ಹೆಚ್‌ಡಿಕೆ ವ್ಯಾಪಕ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಅವರು ನಗರದಲ್ಲಿ ಸುದ್ದಿಗಾರರ ಜೊತೆಗೆ ಮಾತನಾಡುತ್ತ ತಾಯಿಯ ಮೇಲೆ ಕಣ್ಣಿಡಬೇಕು ಅಂಥ ಹೇಳಿರುವ ಪರಮನೀಚನ ಬಗ್ಗೆ ನಾನು ಯಾಕೆ ಚರ್ಚೆ ಮಾಡಬೇಕು ಅಂತ ಹೇಳಿದರು. ಖಾಸಗಿ ವಾಹಿನಿಯೊಂದರಲ್ಲಿ ಭಾಗವಹಿಸಿದ್ದ ಮಾತನಾಡಿದ್ದ ಡಿಕೆಶಿ ತಾಯಿ, ಹೆಂಡ್ತಿ ಮಕ್ಕಳ ಮೂರು ಜನರಲ್ಲಿ ಯವ್ವನ ಇದ್ದರೇ ಅವರ ಮೇಲೆ ಕಣ್ಣು ಇಡಬೇಕು ಅಂತ ಹೇಳಿದ್ದರು. ಇದು ಈಗ ಮತ್ತೆ ವೈರಲ್ ಆಗಿದ್ದು, ವಿವಾದಕ್ಕೆ ಕಾರಣವಾಗಿದೆ.









4627 ಫ್ಲೈಯಿಂಗ್ ಸ್ಕ್ವಾಡ್‌ಗಳು, 5208 ಅಂಕಿ-ಅಂಶಗಳ ಕಣ್ಗಾವಲು ತಂಡಗಳು, 2028 ವೀಡಿಯೊ ಕಣ್ಗಾವಲು ತಂಡಗಳು ಮತ್ತು 1255 ವೀಡಿಯೋ ವೀಕ್ಷಣೆ ತಂಡಗಳನ್ನು ಒಳಗೊಂಡಂತೆ ವ್ಯಾಪಕ ಕಣ್ಗಾವಲು ಹಾಕಲಾಗಿದೆ.1374 ಅಂತರ ರಾಜ್ಯ ಮತ್ತು 162 ಅಂತಾರಾಷ್ಟ್ರೀಯ ಗಡಿ ಚೆಕ್ ಪೋಸ್ಟ್‌ಗಳ ಕಾರ್ಯಾಚರಣೆ ತಂಡ ನಿಯೋಜಿಸಲಾಗಿದೆ. ಮದ್ಯ, ಮಾದಕವಸ್ತುಗಳು, ನಗದು ಮತ್ತು ಇತರ ಪ್ರೋತ್ಸಾಹಕಗಳ ಅಕ್ರಮ ಸಾಗಣೆಯನ್ನು ತಡೆಯಲು. ಬಿಗಿ ಕ್ರಮ ಕೈಗೊಳ್ಳಲಾಗಿದೆ

■ ಮೊದಲ ಹಂತದ ಭರ್ಜರಿ ಮತದಾನ ■ ಲೋಕಸಭೆಗೆ ಮೊದಲ ಹಂತದ ಚುನಾವಣೆ: 1625 ಅಭ್ಯರ್ಥಿಗಳ ಭವಿಷ್ಯ ನಿರ್ಧಾರ

# ಮೊದಲ ಮತ ಯಾರಿಗೆ ಹಿತ

• ಉದಯವಾಹಿನಿ, ನವದೆಹಲಿ

ದೇಶದಲ್ಲಿ ಶುಕ್ರವಾರ ನಡೆದಿರುವ ಮೊದಲ ಹಂತದ ಲೋಕಸಭಾ ಚುನಾವಣೆಯ ಮತದಾನ ಚುರುಕಿನಿಂದ ನಡೆದಿದ್ದು, ಪಶ್ಚಿಮ ಬಂಗಾಳ, ಮಣಿಪುರ. ಛತ್ತೀಸ್‌ಘಡ ಹೊರತುಪಡಿಸಿ ಉಳಿದ ರಾಜ್ಯಗಳಲ್ಲಿ ಮತದಾನ ಬಹುತೇಕ ಶಾಂತಿಯುತವಾಗಿದೆ. ಪ್ರಜಾಪ್ರಭುತ್ವ ಹಬ್ಬವಾದ ಲೋಕಸಭಾ ಚುನಾವಣೆಗೆ ಶಕ್ರವಾರ ದೇಶದ 21 ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶದ 102 ಕ್ಷೇತ್ರಗಳಲ್ಲಿ ಮೊದಲ ಹಂತದ ಚುನಾವಣೆಯ ಮತದಾನ ಬೆಳಿಗ್ಗೆ ಆರಂಭವಾಗಿದ್ದು, ಮತದಾನ ಬಿರುಸಿನಿಂದ ನಡೆಸಿದೆ. ಪಶ್ಚಿಮ ಬಂಗಾಳ ಕೆಲವೆಡೆ ಹಿಂಸಾಚಾರ ನಡೆದಿರುವುದು ಸೇರಿದಂತೆ ಹಲವು ಘಟನೆಗಳ ಮಧ್ಯೆ 21 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ 102 ಕ್ಷೇತ್ರಗಳನ್ನು ಒಳಗೊಂಡ ಲೋಕಸಭಾ ಚುನಾವಣೆಯ ಮೊದಲ ಹಂತದ ಮತದಾನ ಏಪ್ರಿಲ್ 19ಕ್ಕೆ ಪೂರ್ಣಗೊಂಡಿತು. ಸಂಜೆ 5 ಗಂಟೆಯವರೆಗೆ ಸುಮಾರು ಶೇ.60ರಷ್ಟು ಮತದಾನವಾಗಿದೆ ಎಂದು ಚುನಾವಣಾ ಆಯೋಗ ಹೇಳಿದೆ. ಪಶ್ಚಿಮ ಬಂಗಾಳ ಮತ್ತು ಮಣಿಪುರದಲ್ಲಿ ಚುನಾವಣಾ ಹಿಂಸಾಚಾರಗಳು ನಡೆದಿದ್ದು, ಪಶ್ಚಿಮ ಬಂಗಾಳದ ಕೂಚ್‌ಬಿಹಾರ್‌ನ ಎರಡು ಮತಗಟ್ಟೆ ಬಳಿ ಕಚ್ಚಾ ಬಾಂಬ್ ದಾಳಿ ನಡೆಸಲಾಗಿದೆ. ಈ ಮೂಲಕ ಮತದಾನಕ್ಕೆ ಅಡ್ಡಿಪಡಿಸುವ ಕೆಲಸ ನಡೆದಿದೆ. ಮಣಿಪುರದಲ್ಲಿ ಮತಗಟ್ಟೆ ಬಳಿ ಬಂದೂಕಿನಿಂದ ಗುಂಡು ಹಾರಿಸಿ ಮತದಾನಕ್ಕೆ ಅಡ್ಡಿಪಡಿಸಲು ಕೆಲ ದುಷ್ಕರ್ಮಿಗಳು ಪ್ರಯತ್ನ ನಡೆಸಿದ್ದಾರೆ. ಈ ಎರಡೂ ರಾಜ್ಯಗಳನ್ನು ಹೊರತುಪಡಿಸಿದರೆ ಮತದಾನ ನಡೆದಿರುವ ಉಳಿದ ರಾಜ್ಯಗಳಲ್ಲಿ ಮತದಾನ ಬಹುತೇಕ ಶಾಂತಿಯುತವಾಗಿ ಸಾಗಿದೆ. ಪಶ್ಚಿಮ ಬಂಗಾಳದ 3 ಲೋಕಸಭಾ ಕ್ಷೇತ್ರಗಳಲ್ಲಿ ಮತದಾನ ನಡೆದಿದ್ದು, ಮತದಾನಾ ಆರಂಭಕ್ಕೂ ಮುನ್ನವೇ ಪಶ್ಚಿಮ ಬಂಗಾಳದ ಕೂಚ್‌ಬಿಹಾರ್‌ನಲ್ಲಿ ಸಶಸ್ತ್ರಧಾರಿ ದುಷ್ಕರ್ಮಿಗಳು ಮತದಾನಕ್ಕೆ ಅಡ್ಡಿಪಡಿಸುವ ಕಾರ್ಯ ನಡೆದಿದ್ದು, ಇಲ್ಲಿ ತೃಣಮೂಲ ಕಾಂಗ್ರೆಸ್ ಹಾಗೂ ಬಿಜೆಪಿ ಕಾರ್ಯಕರ್ತರ ನಡುವೆ ಸಂಘರ್ಷ ನಡೆದು ಚುನಾವಣಾ ಹಿಂಸಾಚಾರ ನಡೆದಿದೆ ಎಂದು ಹೇಳಲಾಗಿದೆ. ಟಿಎಂಸಿ ಮತ್ತು ಬಿಜೆಪಿ ನಡುವಿನ ಘರ್ಷಣೆಯಿಂದಾಗಿ ಪಶ್ಚಿಮ ಬಂಗಾಳದ ಚಂದಮಾರಿ ಗ್ರಾಮದಲ್ಲಿ ಭಾರೀ ಕಲ್ಲು ತೂರಾಟ ನಡೆದಿದೆ ಇದರಿಂದ ಸ್ಥಳದಲ್ಲಿ ಬಾರಿ ಬಿಗುವಿನ ವಾತಾವರಣ ಸೃಷ್ಠಿಯಾಗಿದ್ದು ಪೊಲೀಸರು ಪರಿಸ್ಥಿತಿ ತಿಳಿಗೊಳಿಸಲು ಹರಸಾಹಸ ನಡೆಸಿದ್ದಾರೆ. ಛತ್ತೀಸ್‌ಗಢದ ಬಿಜಾಪುರದಲ್ಲಿ ಐಇಡಿ ಸ್ಫೋಟದ ಪರಿಣಾಮ ಸಿಆರ್‌ಪಿಎಫ್‌ನ ಸಹಾಯಕ ಕಮಾಂಡೆಂಟ್ ಗಾಯಗೊಂಡಿದ್ದಾರೆ. ಬೈರಾಮ್ ಗಢದ ಚಿಹ್ಕಾ ಗ್ರಾಮದ ಬಳಿ ಈ ಘಟನೆ ವರದಿಯಾಗಿದೆ. ಗಾಯಗೊಂಡ ಕಮಾಂಡೆಂಟ್ ಅನ್ನು ಚಿಕಿತ್ಸೆಗಾಗಿ ಬೈರಾಮ್‌ಗಢ ಆಸ್ಪತ್ರೆಗೆ ಕರೆತರಲಾಗಿದೆ ಎಂದು ಬಿಜಾಪುರ ಪೊಲೀಸರು ತಿಳಿಸಿದ್ದಾರೆ. ಶುಕ್ರವಾರ ನಡೆದಿರುವ ಮೊದಲಹಂತದ ಮತದಾನದಲ್ಲಿ ಚಿತ್ರನಟರಾದ ಸೂಪರ್ ಸ್ಟಾರ್ ರಜನಿಕಾಂತ್, ಕಮಲ್‌ಹಾಸನ್, ಅಜಿತ್‌ಕುಮಾರ್, ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್‌ಭಾಗವತ್, ತಮಿಳುನಾಡಿನ ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್, ಹಿರಿಯ ಕಾಂಗ್ರೆಸ್ ನಾಯಕ ಪಿ.ಚಿದಂಬರಂ, ಅವರ ಪುತ್ರ ಕಾರ್ತಿಕ್‌ಚಿದಂಬರಂ, ತಮಿಳುನಾಡು ಬಿಜೆಪಿ ಮುಖ್ಯಸ್ಥ ಅಣ್ಣಾಮಲೈ, ಎಐಎಡಿಎಂಕೆ ನಾಯಕ ಪಳನಿಸ್ವಾಮಿ, ಮಧ್ಯಪ್ರದೇಶದ ಮಾಜಿ ಮುಖ್ಯಮಂತ್ರಿ ಕಮಲ್‌ನಾಥ್ ಮತ್ತು ಅವರ ಪುತ್ರ ನಕುಲ್‌ನಾಥ್, ಸದ್ಗುರು ಜಗ್ಗಿವಾಸುದೇವ್, ಕೇಂದ್ರ ಸಚಿವರಾದ ನಿತಿನ್ ಗಡ್ಕರಿ, ಮಾಜಿ ಸಚಿವ ರಾಜವರ್ಧನ ರಾಥೋಡ್, ಉತ್ತರಖಂಡ್‌ನ ಮುಖ್ಯಮಂತ್ರಿ ಪುಷ್ಕರ್‌ಸಿಂಗ್ ಸೇರಿದಂತೆ ಹಲವು ಗಣ್ಯರು ಶಕ್ರವಾರ ನಡೆದಿರುವ ಮೊದಲ ಹಂತದ ಚುನಾವಣೆಯಲ್ಲಿ ಮತದಾನ ಮಾಡಿದರು. ದೇಶದಲ್ಲಿ ಮೊದಲ ಹಂತದ ಮತದಾನ ನಡೆಯುತ್ತಿರುವ ಪ್ರಯುಕ್ತ ಗೂಗಲ್‌ನಲ್ಲಿ ಶಾಹಿ ಹಂಚಿದ ತೋರುಬೆರಳಿನ ಚಿತ್ರ ಹಾಕಿದೆ. ಮತದಾನ ಬೆಳಗ್ಗೆ 7 ಗಂಟೆ ಸಂಜೆ 6 ಗಂಟೆಯವರೆಗೆ ಮತದಾನ ನಡೆಯುತ್ತಿದೆ.



**ಬಿರು ಬಿಸಿಲಿನಲ್ಲೂ ಮತದಾನ ಬಿರುಸು**

**ಬಿಹಾರದಲ್ಲಿ ಕಡಿಮೆ ಮತದಾನ**

ಬಿಹಾರದ ನಾಲ್ಕು ಲೋಕಸಭಾ ಕ್ಷೇತ್ರಗಳಲ್ಲಿ 75 ಲಕ್ಷ ಮತದಾರರ ಪೈಕಿ ಶೇ.46.32ರಷ್ಟು ಮಂದಿ ಸಂಜೆ 5 ಗಂಟೆಯವರೆಗೆ ತಮ್ಮ ಹಕ್ಕು ಚಲಾಯಿಸಿದ್ದಾರೆ. ಜಮ್ಮು ಮತ್ತು ಕಾಶ್ಮೀರದ ಉಧಂಪುರ ಸಂಸದೀಯ ಕ್ಷೇತ್ರದಲ್ಲಿ ಮತದಾನದ ಮೊದಲ ಆರು ಗಂಟೆಗಳಲ್ಲಿ ಶೇಕಡಾ 65.08 ರಷ್ಟು ಮತದಾರರು ತಮ್ಮ ಆಯ್ಕೆಯನ್ನು ಚಲಾಯಿಸಿದ್ದಾರೆ. ರಾಜಸ್ಥಾನದಲ್ಲಿ ಸಂಜೆ 5 ಗಂಟೆಯವರೆಗೆ ಶೇ.50.27 ರಷ್ಟು ಮತದಾನವಾಗಿದ್ದರೆ, ಉತ್ತರಾಖಂಡದಲ್ಲಿ ಶೇ.53.56 ರಷ್ಟು ಮತದಾನವಾಗಿದೆ.

**ಪ್ರಧಾನಿ ಮೋದಿ ಮನವಿ**



ಮೊದಲ ಹಂತದಲ್ಲಿ 102 ಕ್ಷೇತ್ರಗಳಿಗೆ ಮತದಾನ ನಡೆಯುತ್ತಿದ್ದು, ದಾಖಲೆ ಪ್ರಮಾಣದಲ್ಲಿ ಮತದಾನ ಮಾಡುವಂತೆ ಮೋದಿ ಮತದಾರರಲ್ಲಿ ಮನವಿ ಮಾಡಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ವಿಶೇಷವಾಗಿ ಯುವಕರು ಮತ್ತು ಪ್ರಥಮ ಬಾರಿಗೆ ಮತ ಚಲಾಯಿಸುತ್ತಿರುವವರು ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಮಾಡುವಂತೆ ಕರೆ ನೀಡಿದ್ದಾರೆ. ಪ್ರಜಾಪ್ರಭುತ್ವದ ಅತಿದೊಡ್ಡ ಹಬ್ಬ ಆರಂಭವಾಗಿದೆ. 102 ಕ್ಷೇತ್ರಗಳಲ್ಲಿ ತಮ್ಮ ಹಕ್ಕು ಚಲಾಯಿಸುವ ಮೂಲಕ ದಾಖಲೆ ಸೃಷ್ಟಿಸಬೇಕೆಂದು ಮನವಿ ಮಾಡಿದ್ದಾರೆ.

**ಮಹಾರಾಷ್ಟ್ರ ವರದಿ**

ಮಹಾರಾಷ್ಟ್ರದಲ್ಲಿ ಸಂಜೆ 5 ಗಂಟೆಯವರೆಗೆ ಶೇ.54.85 ರಷ್ಟು ಮತದಾನವಾಗಿದ್ದರೆ, ಮಧ್ಯಪ್ರದೇಶದ ಆರು ಲೋಕಸಭಾ ಕ್ಷೇತ್ರಗಳಲ್ಲಿ ಶೇ.63.50 ರಷ್ಟು ಮತದಾನವಾಗಿದೆ. ಉತ್ತರ ಪ್ರದೇಶದಲ್ಲಿ ಶೇ.57.54, ಮಿಜೋರಾಂನಲ್ಲಿ ಶೇ.56.68, ನಾಗಾಲ್ಯಾಂಡ್ನಲ್ಲಿ ಶೇ.50.41, ಪುದುಚೇರಿಯಲ್ಲಿ ಶೇ.72.8 ಮತ್ತು ಸಿಕ್ಕಿಂನಲ್ಲಿ ಶೇ.67.95ರಷ್ಟು ಮತದಾನವಾಗಿದೆ. ಮೊದಲ ಹಂತದಲ್ಲಿ 16.63 ಕೋಟಿ ಜನರು ಮತ ಚಲಾಯಿಸಲು ಅರ್ಹರಾಗಿದ್ದರು. ಮೊದಲ ಹಂತದಲ್ಲಿ 35.67 ಲಕ್ಷ ಮೊದಲ ಬಾರಿಗೆ ಮತದಾರರು, 20-29 ವರ್ಷ ವಯಸ್ಸಿನ 3.51 ಕೋಟಿ

**ಮತದಾರರ ಉತ್ಸಾಹ**

ಚುನಾವಣೆ ನಡೆದಿರುವ 102 ಕ್ಷೇತ್ರಗಳಲ್ಲಿಯೂ ಮತದಾರರು ಉತ್ಸಾಹದಿಂದ ಮತ ಚಲಾಯಿಸಿದ್ದು, ಹಲವೆಡೆ ಸರದಿ ಸಾಲಿನಲ್ಲಿ ನಿಂತು ಮತ ಹಾಕಿದರು. ಈ ಚುನಾವಣೆಯಲ್ಲಿ ಕೇಂದ್ರ ಸಚಿವರಾದ ನಿತಿನ್‌ಗಡ್ಕರಿ, ಸರ್ಬಾನಂದ ಸೋನಾವಾಲ್, ಭೂಪೇಂದ್ರಯಾಧವ್, ಕಿರಣ್ ರಿಜಿಜು, ಸಂಜೀವ್‌ಬಲಿಯಾನ್, ಜಿತೇಂದ್ರಸಿಂಗ್, ಅರ್ಜುನ್‌ರಾಮ್ ಮೇಘಾವಾಲ್,ಎಲ್. ಮುರುಘನ್ ಸೇರಿದಂತೆ ಕೇಂದ್ರ ಸಚಿವರುಗಳ ರಾಜಕೀಯ ಹಣೆಬರಹವನ್ನು ಮತದಾರ ನಿರ್ಧರಿಸಲಿದ್ದಾನೆ. ಹಾಗೆಯೇ ತಮಿಳುನಾಡಿನ ಬಿಜೆಪಿ ಮುಖ್ಯಸ್ಥ ಅಣ್ಣಾಮಲೈ, ತೆಲಂಗಾಣದ ಮಾಜಿ ರಾಜ್ಯಪಾಲೆ ತಮಿಳ್‌ಇಸೈ ಸೌಂದರ್‌ರಾಜನ್, ಡಿಎಂಕೆಯ ಕನಿಮೊಳಿ ಸೇರಿದಂತೆ ಹಲವು ಘಟಾನುಘಟಿ ನಾಯಕರುಗಳ ರಾಜಕೀಯ ಭವಿಷ್ಯವು ನಿರ್ಧಾರವಾಗಲಿದೆ.



| ರಾಜ್ಯ | ಶೇಕಡ |
|---|---|
| ತಮಿಳುನಾಡು | 62.19 |
| ಮಧ್ಯಪ್ರದೇಶ | 63.33 |
| ಮಹಾರಾಷ್ಟ್ರ | 55.29 |
| ಬಿಹಾರ | 47.49 |
| ಅಸ್ಸಾಂ | 71.49 |
| ಅರುಣಾಚಲ ಪ್ರದೇಶ | 65.46 |
| ಮಣಿಪುರ | 68.62 |
| ಮೇಘಾಲಯ | 70.26 |
| ಮಿಜೋರಾಂ | 54.18 |
| ನಾಗಾಲ್ಯಾಂಡ್ | 56.77 |
| ರಾಜಸ್ಥಾನ | 50.95 |
| ಉತ್ತರ ಪ್ರದೇಶ | 57.61 |
| ಉತ್ತರ ಖಂಡ | 53.64 |
| ಸಿಕ್ಕಿಂ | 68.06 |
| ತ್ರಿಪುರಾ | 79.90 |
| ಪಶ್ಚಿಮ ಬಂಗಾಳ | 77.57 |
| ಜಮ್ಮು, ಕಾಶ್ಮೀರ | 65.08 |
| ಲಕ್ಷದ್ವೀಪ | 59.02 |
| ಪುದುಚೆರಿ | 73.25 |
| ಛತ್ತೀಸ್‌ಗಢ | 63.41 |
| ಅಂಡಮಾನ್ ನಿಕೋಬಾರ್ | 56.87 |

- ಮೊದಲ ಹಂತದ ಚುನಾವಣೆಯಲ್ಲಿ ವಿವಿಧ ರಾಜ್ಯಗಳ 102 ಲೋಕಸಭೆ ಕ್ಷೇತ್ರಗಳಿಗೆ ಮತದಾನ
- ಶುಕ್ರವಾರ ನಡೆಯಲಿರುವ ಮತದಾನಕ್ಕೆ 1.87 ಲಕ್ಷ ಮತಗಟ್ಟೆ, 18 ಲಕ್ಷ ಸಿಬ್ಬಂದಿ ನಿಯೋಜನೆ
- ಸೂಕ್ಷ್ಮ ಮತಗಟ್ಟೆಗಳಲ್ಲಿ ಭಾರಿ ಭದ್ರತೆ, 41 ಹೆಲಿಕಾಪ್ಟರ್, 84 ವಿಶೇಷ ರೈಲುಗಳ ಬಳಕೆ
- ಚ್ಚಿನ ಆರ್ಥಿಕ ಸ್ವಾಯತ್ತತೆಯೊಂದಿಗೆ ಪ್ರತ್ಯೇಕ ಆಡಳಿತಕ್ಕೆ ಆಗ್ರಹಿಸುತ್ತಿದೆ ಈಸ್ಟರ್ನ್ ನಾಗಾಲ್ಯಾಂಡ್ ಪೀಪಲ್ಸ್ ಆರ್ಗನೈಸೇಷನ್
- ಸಾರ್ವಜನಿಕ ತುರ್ತು ಪರಿಸ್ಥಿತಿ' ಘೋಷಿಸಿ, ಈ ಚುನಾವಣೆಯನ್ನು ಬಹಿಷ್ಕರಿಸುವಂತೆ ಕರೆ

## ಬಿಜೆಪಿಯವರು ಕೊಟ್ಟಿರುವುದು ಬರೀ ಚೊಂಬು ಅಲ್ಲ ಖಾಲಿ ಚೊಂಬು: ಸಿಎಂ ವಾಗ್ದಾಳಿ

• ಉದಯವಾಹಿನಿ, ಹಾಸನ

ಕೇಂದ್ರ ಸರ್ಕಾರದ ವಿರುದ್ಧ ಸಾಮಾಜಿಕ ಜಾಲತಾಣದಲ್ಲಿ ಕಾಂಗ್ರೆಸ್ ಚೊಂಬು ಜಾಹೀರಾತು ವಿಚಾರಕ್ಕೆ ಸಂಬಂಧಿಸಿದಂತೆ ಸಿದ್ದರಾಮಯ್ಯ ಪ್ರತಿಕ್ರಿಯೆ ನೀಡಿದ್ದು, ವಿರೋಧ ಪಕ್ಷದ ನಾಯಕ ಆರ್. ಅಶೋಕಗೆ ಕೇಳಿ 15 ಲಕ್ಷ ಹಣ ಪ್ರತಿಯೊಬ್ಬ ನಾಗರೀಕನ ಅಕೌಂಟಿಗೆ ಹಾಕುತ್ತೇವೆ ಎಂದಿದ್ದರು ಹಾಕಿದ್ದೀರಾ ಎಂದು ಪ್ರಶ್ನಿಸಿದರು.

ಹಾಸನ ಜಿಲ್ಲೆ ಸಕಲೇಶಪುರದಲ್ಲಿ ಸಿಎಂ ಸಿದ್ದರಾಮಯ್ಯ ಮಾತನಾಡಿದ್ದು, ಪ್ರತಿಯೊಬ್ಬರ ಖಾತೆಗೆ 15 ಲಕ್ಷ ಹಾಕ್ತಿವಿ ಅಂದ್ರಲ್ಲ ಹಾಕಿದ್ರಾ, ವರ್ಷಕ್ಕೆ ಎರಡು ಕೋಟಿ ಉದ್ಯೋಗ ಸೃಷ್ಟಿ ಮಾಡುತ್ತೇವೆ ಅಂದಿದ್ದರು ಮಾಡಿದ್ರ, ಅಲ್ಲದೆ ರೈತರ ಆದಾಯ ದುಪ್ಪಟ್ಟು ಮಾಡ್ತೀವಿ ಅಂತ ಹೇಳಿದರು ಅದೆಲ್ಲವನ್ನು ಮಾಡಿದ್ರಾ, ಅಗತ್ಯ ವಸ್ತುಗಳ ಬೆಲೆ ಇಳಿಸುತ್ತೇವೆ ಅಂದ್ರು, ಇಳಿಸಿದ್ದಾರಾ ಬಿಜೆಪಿಯವರು ಅಚ್ಚೆದಿನ್ ಬರುತ್ತೆ ಅಂತ ಹೇಳಿದರು ಬಂತಾ ಅದಕ್ಕೆ ಕಾಲಿ ಚೆಂಬು ಅಂತಿರೋದು ಎಂದು ಸಿದ್ದರಾಮಯ್ಯ ವಾಗ್ದಾಳಿ ನಡೆಸಿದರು.

ಸರ್ಕಾರ ವಜಾ ಮಾಡಬೇಕೆಂದು ಡಾಕ್ಟರ್ ಅಶ್ವತ್ ನಾರಾಯಣ ಹೇಳಿಕೆ ವಿಚಾರವಾಗಿ ಮಾತನಾಡಿದ ಅವರು ಯಾರು ಹೇಳುತ್ತಾರೆ ಮೊದಲು ಅವರನ್ನು ವಜಾ ಮಾಡಿ. ನಮಗೆ ಜನ ಆಶೀರ್ವಾದ ಮಾಡಿರೋದು ಇವರ್ಯಾರು ಹೇಳುವುದಕ್ಕೆ. 66 ಸ್ಥಾನ ಕೊಟ್ಟು ವಿರೋಧ ಪಕ್ಷದಲ್ಲಿ ಕುಳಿತುಕೊಳ್ಳಿ ಎಂದು ಜನರು ಹೇಳಿದ್ದಾರೆ ಎಂದು ಅಶ್ವಥ್ ನಾರಾಯಣ ವಿರುದ್ಧ ಆಕ್ರೋಶ ಹೊರ ಹಾಕಿದರು.

## ಪಾಕಿಸ್ತಾನ್ ಕೀ ಜೈ ಘೋಷಣೆ ರಾಜ್ಯದಲ್ಲಿ ಮತ್ತೆ ಮೊಳಗಿದೆ

• ಉದಯವಾಹಿನಿ, ರಾಮನಗರ

ರಾಜ್ಯಸಭಾ ಚುನಾವಣೆಯ ವೇಳೆಯಲ್ಲಿ ರಾಜ್ಯದ ಶಕ್ತಿ ಸೌಧ ವಿಧಾನಸೌಧದಲ್ಲೇ ಪಾಕಿಸ್ತಾನ ಪರ ಘೋಷಣೆ ಕೂಗಲಾಗಿತ್ತು. ಇದು ಎಫ್‌ಎಸ್‌ಎಲ್ ವರದಿಯಲ್ಲೂ ದೃಢಪಟ್ಟಿತ್ತು. ಈ ಬಳಿಕ ರಾಜ್ಯದಲ್ಲಿ ಮತ್ತೆ ಪಾಕಿಸ್ತಾನ್ ಕೀ ಜೈ ಘೋಷಣೆ ಮೊಳಗಿದೆ. ರಾಮನಗರ ಜಿಲ್ಲೆಯ ಮಾಗಡಿ ತಾಲ್ಲೂಕಿನ ಕುದೂರಿನಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಂಸದ ಡಿ.ಕೆ ಸುರೇಶ್ ಮತಯಾಚನೆಯ ವೇಳೆಯಲ್ಲೇ ಪಾಕಿಸ್ತಾನ್ ಕೀ ಜೈ ಘೋಷಣೆ ಕೂಗಿದಾಗಿ ಕೇಳಿ ಬಂದಿದೆ. ಈ ವೀಡಿಯೋವನ್ನು ಇಟ್ಕೊಂಡು ಬಿಜೆಪಿ-ಜೆಡಿಎಸ್ ಪಕ್ಷದ ಮೈತ್ರಿ ನಾಯಕರು ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಮಾಡುತ್ತಿರೋದಾಗಿ ಹೇಳಲಾಗುತ್ತಿದೆ.ರಾಮನಗರ ಜಿಲ್ಲೆಯ ಮಾಗಡಿ ತಾಲ್ಲೂಕಿನ ಕುದೂರಲ್ಲಿ ಮತಯಾಚನೆ ವೇಳೆಯಲ್ಲಿ ಪಾಕಿಸ್ತಾನ್ ಕೀ ಜೈ ಎಂಬುದಾಗಿ ಘೋಷಣೆ ಕೂಗಿದ್ದಾರೆ ಎಂಬುದಾಗಿ ಹೇಳಲಾಗುತ್ತಿದೆ. ಆದ್ರೇ ಕಾಂಗ್ರೆಸ್ ಪಕ್ಷದವರು ಮಾತ್ರ ಅದು ಪಾಕಿಸ್ತಾನ್ ಕೀ ಜೈ ಅಲ್ಲ. ಬಾಲಕೃಷ್ಣ ಕೀ ಜೈ ಎಂದಿದ್ದಾರೆ ಅಂತ ಸ್ಪಷ್ಟಪಡಿಸುತ್ತಿದ್ದಾರೆ ಎನ್ನಲಾಗುತ್ತಿದೆ. ಈ ಬಗ್ಗೆ ಮತ್ತಷ್ಟು ಮಾಹಿತಿ ನಿರೀಕ್ಷಿಸಲಾಗಿದೆ.

## ಕನಸಿನಲ್ಲಿಯೂ ಕೂಡ ಗ್ಯಾರಂಟಿ ಯೋಜನೆಗಳನ್ನ ನಿಲ್ಲಿಸುವುದಿಲ್ಲ : ಡಿಸಿಎಂ ಡಿ.ಕೆ.ಶಿವಕುಮಾರ್

• ಉದಯವಾಹಿನಿ, ಹಾಸನ

ಲೋಕಸಭೆ ಚುನಾವಣೆ ಬಳಿಕ ಕಾಂಗ್ರೆಸ್ ಸರ್ಕಾರ ಜಾರಿ ಮಾಡಿರುವ ಗ್ಯಾರಂಟಿ ಯೋಜನೆಗಳು ನಿಲ್ಲುತ್ತವೆ ಎಂದು ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ, ಬಿ ವೈ ವಿಜಯೇಂದ್ರ, ವಿಪಕ್ಷ ನಾಯಕ ಆರ್. ಅಶೋಕ್ ಹೇಳಿಕೆಗೆ ಡಿಸಿಎಂ ಡಿಕೆ ಶಿವಕುಮಾರ್ ತಿರುಗೇಟು ನೀಡಿ ದ್ದು ಕನಸಿನಲ್ಲಿಯೂ ಕೂಡ ಯಾವುದೇ ಕಾರಣಕ್ಕೂ ಗ್ಯಾರಂಟಿ ಯೋಜನೆಗಳು ನಿಲ್ಲಿಸುವುದಿಲ್ಲ ಎಂದು ತಿಳಿಸಿದರು.

ಹಾಸನ ಜಿಲ್ಲೆಯ ಅರಕಲಗೂರು ತಾಲ್ಲೂಕಿನಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾತನಾಡಿದ್ದು, ಗ್ಯಾರಂಟಿಗಳು ಶಾಶ್ವತವಲ್ಲ ತಾತ್ಕಾಲಿಕ ಎಂದು ಹೇಳಿದ್ದಾರೆ. ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ, ಆರ್. ಅಶೋಕ್ ಗೆ ಹೇಳುತ್ತಿದ್ದೇನೆ ಕನಸಿನಲ್ಲಿಯೂ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸಲಾಗುವುದಿಲ್ಲ ಎಂದು ತಿಳಿಸಿದರು.

ಲೋಕಸಭಾ ಚುನಾವಣೆಯ ಬಳಿಕ ಜೆಡಿಎಸ್ ಪಕ್ಷ ಉಳಿಯುವುದಿಲ್ಲ. ರಾಜ್ಯದಲ್ಲಿ ಮುಂದೆ ಹಸ್ತ ಕಮಲ ಪಕ್ಷಗಳು ಎರಡೇ ಉಳಿಯುವುದು. ಲೋಕಸಭಾ ಚುನಾವಣೆಯ ಬಳಿಕ ಜೆಡಿಎಸ್ ಪಕ್ಷ ಇರುವುದಿಲ್ಲ. ಗ್ಯಾರೆಂಟಿಯಿಂದ ಹೆಣ್ಣು ಮಕ್ಕಳು ದಾರಿ ತಪ್ಪಿದ್ದಾರೆಂದು ಎಚ್ ಡಿ ಕುಮಾರಸ್ವಾಮಿ ಅವರು ಹೇಳುತ್ತಾರೆ.ಎಚ್ ಡಿ ಕುಮಾರಸ್ವಾಮಿಗೆ ನೀವೇ ತಕ್ಕ ಉತ್ತರ ನೀಡಬೇಕೆಂದು ಡಿಕೆಶಿ ತಿಳಿಸಿದರು.

# ಜಿಹಾದಿಗಳಿಗೆ ಪಾಸ್‌ಪೋರ್ಟ್ ಗಲಭೆಕೋರರಿಗೆ ವೀಸಾ ನೀಡುವ ಕಾಂಗ್ರೆಸ್

• ಕರ್ನಾಟಕವನ್ನು ಡಾನ್‌ಗಳು ನಡೆಸುತ್ತಿರುವಂತಹ ಪರಿಸ್ಥಿತಿ ಇದ್ದು, ಸರ್ಕಾರ ಕಾನೂನನ್ನು ಗೂಂಡಾಗಳಿಗೆ ನೀಡಿದೆ: ಆರ್. ಅಶೋಕ್

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೇ ಸ್ ಸರ್ಕಾರ ಬಂದ ನಂತರ ಜಿಹಾದಿ ಕರ್ನಾಟಕ ಸೃಷ್ಟಿಯಾಗಿದೆ. ಹಿಂದೂಗಳ ರಕ್ತಕ್ಕೆ ಬೆಲೆಯೇ ಇಲ್ಲ ಎಂದು ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್.ಅಶೋಕ ಆಕ್ರೋಶ ವ್ಯಕ್ತಪಡಿಸಿದರು. ಶುಕ್ರವಾರ ಬಿಜೆಪಿ ಕಚೇರಿಯಲ್ಲಿ ಕಾಂಗ್ರೆಸ್ ದುರಾಡಳಿತದ ಆರೋಪ ಪಟ್ಟಿ ಬಿಡುಗಡೆ ಮಾಡಿ ಅವರು ಮಾತನಾಡಿದರು. ರಾಜ್ಯದಲ್ಲಿ ಹಿಂದೂಗಳ ಕಗ್ಗೊಲೆ, ಲವ್ ಜಿಹಾದ್, ಹಿಂದೂಗಳ ಮೇಲೆ ದಾಳಿ ನಡೆಯುತ್ತಿದೆ. ಲವ್ ಜಿಹಾದ್‌ಗೆ ಕಾಂಗ್ರೆಸ್‌ನವರು ಕೂಡ ಒಳಗಾಗಿದ್ದಾರೆ. ಹುಬ್ಬಳ್ಳಿಯಲ್ಲಿ ನಡೆದ ಲವ್ ಜಿಹಾದ್‌ನಲ್ಲಿ ಹಿಂದೂ ಯುವತಿ ಬರ್ಬರ ಕೊಲೆಗೀಡಾಗಿರುವುದನ್ನು ಬಿಜೆಪಿ ಉಗ್ರವಾಗಿ ವಿರೋಧಿಸುತ್ತದೆ. ಕರ್ನಾಟಕವನ್ನು ಡಾನ್‌ಗಳು ನಡೆಸುತ್ತಿರುವಂತಹ ಪರಿಸ್ಥಿತಿ ಇದ್ದು, ಸರ್ಕಾರ ಕಾನೂನನ್ನು ಗೂಂಡಾಗಳಿಗೆ ನೀಡಿದೆ ಎಂದು ವಾಗ್ದಾಳಿ ನಡೆಸಿದರು. ಇದನ್ನು ಲವ್ ಪ್ರಕರಣ, ಕುಟುಂಬದ ಸಮಸ್ಯೆ ಎಂದು ಹೇಳುವ ಕಾಂಗ್ರೇ ಸ್ ನಾಯಕರಿಗೆ ನಾಚಿಕೆಯಾಗಬೇಕು. ಇದು ಲವ್ ಜಿಹಾದ್ ಎಂದು ಯುವತಿಯ ತಂದೆ, ಕಾಂಗ್ರೇ ಸ್ ಕಾರ್ಪೊರೇಟರ್ ಹೇಳುತ್ತಿದ್ದಾರೆ. ಕುಟುಂಬದವರು ಕಣ್ಣೀರು ಹರಿಸುವಾಗ ಕೊಲೆಯಾದ ಯುವತಿಯ ಬಗ್ಗೆ ಹೀನಾಯವಾಗಿ ಮಾತಾಡುತ್ತಿದ್ದಾರೆ. ಚುನಾವಣೆಯಲ್ಲಿ ಇದು ಚರ್ಚೆಯಾದರೆ ಕಾಂಗ್ರೆಸ್ ಮುಖಕ್ಕೆ ಮಂಗಳಾರತಿಯಾಗಲಿದೆ ಎಂಬ ಕಾರಣಕ್ಕೆ ಸಿದ್ದರಾಮಯ್ಯನವರೇ ಈ ರೀತಿ ಮಾತಾಡುತ್ತಿದ್ದಾರೆ. ಹಿಂ ದೂಗಳ ರಕ್ತಕ್ಕೆ ಬೆಲೆ ಇಲ್ಲದಂತೆ ಸರ್ಕಾರ ನಡೆದುಕೊಳ್ಳುತ್ತಿದೆ ಎಂದರು. ಲವ್ ಜಿಹಾದ್ ಮಾಡುವವರಿಗೆ ಪಾಸ್‌ಪೋರ್ಟ್, ಕೊಲೆ, ಗಲಭೆ ಮಾಡುವವರಿಗೆ ವೀಸಾ ನೀಡಲಾಗಿದೆ.

**ಹಿಂದೂಗಳ ರಕ್ತಕ್ಕೆ ಬೆಲೆಯೇ ಇಲ್ಲ**



ಬೆಳಗಾವಿಯಲ್ಲಿ ದಲಿತ ಮಹಿಳೆಯನ್ನು ಬೆತ್ತಲೆ ಮಾಡಿದ್ದಕ್ಕೆ ಆ ಪ್ರಕರಣವನ್ನೇ ಮುಚ್ಚಿಹಾಕುವ ಪ್ರಯತ್ನ ನಡೆದಿತ್ತು.

ಶಿವಮೊಗ್ಗದಲ್ಲಿ ಕೋಮು ಗಲಭೆ ನಡೆದಾಗ ಪೊಲೀಸರು ಏನೂ ಮಾಡಲಿಲ್ಲ. ಬಾಂಬ್ ಸ್ಫೋಟವನ್ನು ಸಚಿವರೇ ವ್ಯಾಪಾರದ ವ್ಯಾಜ್ಯ ಎಂದರು. ರಾಮೋತ್ಸವದಲ್ಲಿ ಜೈ ಶ್ರೀ ರಾಮ್ ಎಂದಾಗ ಮುಸ್ಲಿಮರು ಹಲ್ಲೆ ಮಾಡಿದ್ದರು. ಹನುಮಾನ್ ಚಾಲೀಸಾ ಹಾಕಿದ್ದಕ್ಕೆ ಮುಸ್ಲಿಮರು ಥಳಿಸಿದ್ದಾರೆ. ಗದಗದಲ್ಲಿ ಒಂದೇ ಕುಟುಂಬದ ಕೊಲೆ ಯಾಗಿದೆ.

> ದೇಶ ಆಳಿದ, ರಾಜ್ಯವನ್ನು ಆಳುತ್ತಿರುವ ಕಾಂಗ್ರೆಸ್ ಸರ್ಕಾರ ಏನು ಕೊಡುಗೆ ನೀಡಿದೆ ಎನ್ನುವುದನ್ನು ತಿಳಿಸಲಿ. ಈ ಬಾರಿ ಕರ್ನಾಟಕದ ಜಿಡಿಪಿ ದೇಶದ ಜಿಡಿಪಿಗಿಂತ ಕಡಿಮೆಯಾಗಿದೆ. ರಾಜ್ಯದ ಆರ್ಥಿಕ ಸ್ಥಿತಿ ಏನು ಎನ್ನುವುದನ್ನು ಬಜೆಟ್‌ನಲ್ಲಿ ತಿಳಿಸಿಲ್ಲ. ಈ ಬಾರಿಯ ಆದಾಯ ತೀವ್ರವಾಗಿ ಇಳಿಕೆಯಾಗಿದೆ. ಅಭಿವೃದ್ಧಿ ಕಾರ್ಯಗಳು ಇಲ್ಲವಾಗಿರುವುದರಿಂದ ಜಿಡಿಪಿ ಬೆಳೆಯುವುದಿಲ್ಲ
> – ಆರ್.ಅಶೋಕ, ಪ್ರತಿಪಕ್ಷ ನಾಯಕ

ಕುಣಿಗಲ್‌ನಲ್ಲಿ ಬಿಜೆಪಿ ಬೆಂಬಲಿಗನ ತೋಟಕ್ಕೆ ಬೆಂಕಿ ಹಚ್ಚಲಾಗಿದೆ. ಚಿತ್ರನಟಿಯ ಮೇಲೆ ಹಲ್ಲೆ ಮಾಡಲಾಗಿದೆ.

**5 ರೂಪಾಯಿ ನೀಡಿಲ್ಲ**

ಕಾಂಗ್ರೆಸ್ ಕೋಟ್ಯಂತರ ಜನರಿಗೆ ಚೊಂಬು ನೀಡಿದೆ. 10 ಕೆಜಿ ಅಕ್ಕಿ ಎಂದು ಹೇಳಿ ಒಂದು ಕೆಜಿ ಕೂಡ ನೀಡಿಲ್ಲ. ಸರ್ವ ಜನಾಂಗದ ಶಾಂತಿಯ ತೋಟ ಎಂದು ಹೇಳಿ ಕೊಲೆ, ಸುಲಿಗೆ ಅರಾಜಕತೆ ನಡೆಯುತ್ತಿದೆ. ಇವೆಲ್ಲದರಲ್ಲೂ ಜನರಿಗೆ ಚೊಂಬು ನೀಡಲಾಗಿದೆ. ಕೃಷ್ಣೆಯ ಕಣ್ಣೀರು ಒರೆಸಲು 50 ಸಾವಿರ ಕೋಟಿ ರೂ. ಎಂದು 5 ರೂಪಾಯಿ ನೀಡಿಲ್ಲ.

ಕೋಲಾರದಲ್ಲಿ ಶ್ರೀರಾಮನ ಫ್ಲೆಕ್ಸ್ ಕಿತ್ತುಹಾಕುವ ಕೆಲಸ ನಡೆದಿದೆ. ಇಷ್ಟಾದರೂ ಸಿಎಂ ಸಿದ್ದರಾಮಯ್ಯ ಏನೂ ಮಾಡಿಲ್ಲ. ಓಲೈಕೆ ರಾಜಕಾರಣ ಪರಾಕಾಷ್ಠೆಗೆ ತಲುಪಿದೆ ಎಂದು ದೂರಿದರು. ನ್ಯಾಷನಲ್ ಹೆರಾಲ್ಡ್ ಪತ್ರಿಕೆಯಲ್ಲೂ ಹಗರಣ ಮಾಡಲಾಗಿದೆ. ಭೂಮಿ, ಆಕಾಶ, ಪತ್ರಿಕಾ ರಂಗದಲ್ಲೂ ಕಾಂಗ್ರೆಸ್ ಲೂಟಿ ಮಾಡಿದೆ. ಜನರಿಗೆ ಒಂದು ಚೊಂಬು ನೀರು ಕೂಡ ನೀಡಿಲ್ಲ ಎಂದರು.

ಮಾರ್ಗಸೂಚಿ ದರ ಹೆಚ್ಚಳ ಮಾಡಿದ್ದು, ಒಬ್ಬ ಬಿಲ್ಡರ್ 7-8 ಕೋಟಿ ರೂ. ಕಾಂಗ್ರೆಸ್‌ಗೆ ಕೊಡಬೇಕಿದೆ. ಇದೇ ಕಾಂಗ್ರೆಸ್‌ನ ಹೊಸ ತೆರಿಗೆ. ಸರ್ಕಾರ ನೀಡುತ್ತಿರುವ ಗ್ಯಾರಂಟಿಗಳನ್ನು ತೆರಿಗೆಯ ಮೂಲಕವೇ ನೀಡಲಾಗುತ್ತಿದೆ. ಯಾವುದೇ ಯೋಜನೆಯನ್ನು ಜೇಬಿನಿಂದ ನೀಡುತ್ತಿಲ್ಲ. ಇದರಿಂದ ಸಂಗ್ರಹವಾದ ಹಣವನ್ನು ಬೇರೆ ರಾಜ್ಯಗಳಿಗೆ ಕಳುಹಿಸಲಾಗುತ್ತಿದೆ. ಜೆಸಿಬಿಯಲ್ಲಿ ಅಗೆಯುವಂತೆ ಹಣ ಲೂಟಿ ಮಾಡಲಾಗುತ್ತಿದೆ ಎಂದು ಹೇಳಿದರು.



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ತನುವಿದಾನೆಂದಲ್ಲಿ ವಿಶ್ವನೆನಿಸಿ

ನಿಜಗುಣರ ಪರಮಾನುಭವ ಬೋಧೆಯ ಮಾತು. ಜೀವನು ಶರೀರಾಂತರ್ಗತ ಚೈತನ್ಯ. ಶರೀರವನ್ನು ಅರಿಯುವ ವನು. ಶರೀರವು ಸ್ಥೂಲ ಸೂಕ್ಷ್ಮ ಕಾರಣ ಎಂದು ಮೂರು ವಿಧ. ಪಂಚಭೂತಗಳ ಸಮ್ಮಿಶ್ರಾತ್ಮಕ ಪಂಚ ಜ್ಞಾನೇಂದ್ರಿಯ ಪಂಚ ಕರ್ಮೇಂದ್ರಿಯ ಪಂಚ ಪ್ರಾಣ ಪಂಚ ವಿಷಯ ಪಂಚ ಅಂತಃಕರಣ ಎಂಬ ಇಪ್ಪತ್ತೈದು ತತ್ತ್ವಾತ್ಮಕ ದೇಹ ಸ್ಥೂಲ ಶರೀರ. ಈ ಸ್ಥೂಲ ಶರೀರವೇ ತಾನೆನ್ನುವುದರಿಂದ ಜೀವನು ವಿಶ್ವ ಎನಿಸುತ್ತಾನೆ. ಪಂಚ ಜ್ಞಾನೇಂದ್ರಿಯ ಪಂಚ ಪ್ರಾಣ ಪಂಚ ವಿಷಯ ಮನಸ್ಸು ಹಾಗೂ ಬುದ್ಧಿ ಎಂಬ ಹದಿನೇಳು ತತ್ತ್ವಾತ್ಮಕ ದೇಹ ಸೂಕ್ಷ್ಮ ಶರೀರ. ಈ ಸೂಕ್ಷ್ಮ ದೇಹ ತಾನೆನ್ನುವುದರಿಂದ ಜೀವ ತೈಜಸ ಎನಿಸುವನು. ವಾಸನಾಯುಕ್ತ ಅಂತಃಕರಣಾವಚ್ಛಿನ್ನ ಚೈತನ್ಯ ಕಾರಣ ಶರೀರ. ಈ ಕಾರಣ ಶರೀರ ತಾನೆನ್ನುವುದರಿಂದ ಜೀವ ಪ್ರಾಜ್ಞ ಎನಿಸುವನು.

## ಮಗಳ ಹತ್ಯೆ ಬಗ್ಗೆ ತಂದೆ ನಿರಂಜನ್ ಹಿರೇಮಠ ಪ್ರತಿಕ್ರಿಯೆ

■ ಒಂದು ಟ್ವೀಟ್‌ಗೆ ಸಿಎಂ ಜವಾಬ್ದಾರಿ ಮುಗಿಯಿತೇ: ಮಾಜಿ ಸಿಎಂ ■ ತಂದೆಯ ಆಕ್ರಂದನ ಮುಗಿಲು

• ಉದಯವಾಹಿನಿ, ಬೆಂಗಳೂರು

ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆ ಸದಸ್ಯ ನಿರಂಜನ್ ಹಿರೇಮಠ ಅವರ ಮಗಳು ನೇಹಾ ಹಿರೇಮಠರನ್ನು ಮುಸ್ಲಿಂ ಸಮುದಾಯದ ವ್ಯಕ್ತಿ ಚಾಕುವಿನಿಂದ ಚುಚ್ಚಿ ಕೊಲೆ ಮಾಡಿದ್ದಾನೆ. ಈ ಕುರಿತು ಸ್ವತಃ ಮೃತಳ ತಂದೆ ಪ್ರತಿಕ್ರಿಯಿಸಿದ್ದಾರೆ. ಮಗಳು ಕಳೆದುಕೊಂಡ ತಂದೆಯ ಆಕ್ರಂದನ ಮುಗಿಲು ಮುಟ್ಟಿದೆ.

ಈ ನೋವಿನಲ್ಲೇ ಮಗಳ ಕುರಿತು ಮಾತನಾಡಿರುವ ಅವರು, ನನ್ನ ಮಗಳ ಕೊಲೆ ಹಿಂದೆ ಲವ್ ಜಿಹಾದ್ ಇದೆ. ಕೊಲೆಗಾರನ ಜೊತೆಗೆ ನಾಲ್ಕೈದು ಅದೇ ಸಮುದಾಯದವರು ಇರುತಿದ್ದರು.ಅನೇಕ ಬಾರೀ ಮಗಳ ಜೊತೆಗೆ ಮಾತನಾಡುವುದನ್ನು ನಾನು ನೋಡಿದ್ದೇನೆ ಎಂದರು. ತುಂಬಾ ದಿನದ ಹಿಂದೆ ಆ ವ್ಯಕ್ತಿ ನನ್ನ ಮಗಳ ಹಿಂದೆ ಬಿದ್ದಿದ್ದ. ಲವ್ ಮಾಡುವಂತೆ ಪಿಡಿಸಿ ಬೆದರಿಕೆ ಹಾಕಿದ್ದ.

ನಾನು ಸಹ ಎಚ್ಚರಿಕೆ ಕೊಟ್ಟಿದ್ದೆ. ನನ್ನ ಮಗಳು ಆತನ ಪ್ರೀತಿಗೆ ಒಪ್ಪದೇ ನಿರಾಕರಿಸಿ ಎಲ್ಲರಂತೆ ಸುಮ್ಮನಿದ್ದಳು, ಕಾಲೇಜಿಗೆ ಹೋಗುತ್ತಿದ್ದರು. ಆತನ ಸ್ನೇಹಿತರ ಜತೆ ಮೂರು ನಾಲ್ಕು



ಉದಯವಾಹಿನಿ ಚಿತ್ರ

ಲವ್ ಜಿಹಾದ್ ಪ್ರಕರಣ

ದಿನದಿಂದ ಪ್ಲಾನ್ ಮಾಡಿದ್ದು, ಗುರುವಾರ ಬಂದು ಆರೋಪಿ ಕೊಲೆ ಮಾಡಿದ್ದಾನೆ ಎಂದು ಅವರು ವಿವರಿಸಿದರು. ಕಾಲೇಜು ಕ್ಯಾಂಪಸ್‌ನಲ್ಲಿ, ಅದೂ ಹಾಡಹಗಲೇ ಘಟನೆ ಹುಬ್ಬಳ್ಳಿಯಲ್ಲಂತೂ ನಡೆದಿದ್ದಿಲ್ಲ .ಇದು ಸಮಾಜದಲ್ಲಿ ಆಗುತ್ತಿರೋ ಕ್ಷೋಭೆಯನ್ನು ಎತ್ತಿ ತೋರಿಸುತ್ತದೆ. ಇಂಥ ಘಟನೆಗಳಿಂದ ಸಮಾಜದಲ್ಲಿ ಸಾಮರಸ್ಯದ ಕೊರತೆಯಾಗುತ್ತದೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕುಸಿದಿದ್ದು. ಎಲ್ಲಾ ಕಡೆ ಮಾಸ್ ಮರ್ಡರ್ ಕಾಮನ್ ಆಗಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದರು. ಗದಗ ನಲ್ಲಿ ಗುರುವಾರ

**ಒಂದು ಟ್ವೀಟ್‌ಗೆ ಸಿಎಂ ಜವಾಬ್ದಾರಿ ಮುಗಿಯಿತೇ? ಹುಬ್ಬಳ್ಳಿಯ ಕಿಮ್ಸ್‌ಗೆ ಭೇಟಿ ನೀಡಿದ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅವರು, ಕಿಮ್ಸ್‌ಗೆ ಭೇಟಿ ನೀಡಿ ಪ್ರಕರಣ ಮಾಹಿತಿ ಪಡೆದರು. ನೇಹಾ ಕೊಲೆ ಅತ್ಯಂತ ದುಃಖಕರ, ಆಘಾತಕರ ಘಟನೆಯಾಗಿದ್ದು, ಇದನ್ನು ಯಾರೂ ಊಹಿಸಿರಲಿಲ್ಲ. ನೇಹಾ ಹತ್ಯೆ ಪ್ರಕರಣದಲ್ಲಿ ಆ ಮಗುವಿನ ತಪ್ಪಿಲ್ಲ. ತಮ್ಮ ಮಕ್ಕಳು ಎಷ್ಟು ಸುರಕ್ಷರಿದ್ದಾರೆ ಅನ್ನೋ ಆತಂಕ ಪಾಲಕರಿಗೆ ಶುರುವಾಗಿದೆ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಒಂದು ಒಂದು ಟ್ವೀಟ್ ಮಾಡಿದರೆ ಅವರ ಜವಾಬ್ದಾರಿ ಮುಗಿದಂತಲ್ಲ. ಅವರು ಹಾಗೇ ಅಂದುಕೊಂಡಿದ್ದಾರೆ. ಮೊದಲು ಇಂಥಹ ಶಕ್ತಿಗಳಿಗೆ ಬೆಂಬಲ ಕೊಡುವುದನ್ನು ನಿಯಂತ್ರಿಸಬೇಕು ಎಂದು ಆಗ್ರಹಿಸಿದರು.**

ನಾಲ್ವರ ಕೊಲೆಯಾಗಿದೆ. ಬೆಂಗಳೂರಿನಲ್ಲಿಯೂ ನಿನ್ನೆ ಮಾಸ್ ಮರ್ಡರ್ ಆಗಿದೆ. ಹಲವಾರು ತಿಂಗಳಿನಿಂದ ಇಂಥ ಘಟನೆ ನಡೆಯುತ್ತಲೇ ಇವೆ. ರೌಡಿಗಳಿಗೆ ಪೊಲೀಸರ ಹೆದರಿಕೆ ಇಲ್ಲ

**ಸರ್ಕಾರ, ಪೊಲೀಸರು ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ತನಿಖೆ ನಡೆಸಬೇಕು. ನನ್ನ ಮಗಳಿಗೆ ಆದ ಅನ್ಯಾಯ ಬೇರೆ ಹೆಣ್ಣು ಮಕ್ಕಳಿಗೆ ಆಗಬಾರದು. ನನ್ನ ಮಗಳು ಬಹಳ ಮುಗ್ಧೆ. ಯಾರೊಂದಿಗೂ ಜಗಳ ಆಡುವ ಸ್ವಭಾವದವಳಲ್ಲ. ಅವಳು ಪ್ರತಿಭಾವಂತೆ ತಂದೆ ತಿಳಿಸಿದ್ದಾರೆ.**

**ನಿರಂಜನ್ ಹಿರೇಮಠ್**

ದಂತಾಗಿದೆ. ರೌಡಿಗಳಿಗೆ, ಗೂಂಡಾಗಳಿಗೆ ರಾಜ ಮರ್ಯಾದೆ ಸಿಗುತ್ತಿದೆ. ನಾವು ಏನು ಮಾಡಿದರೂ ದಕ್ಕಿಸಿಕೊಳ್ಳಬಹುದು ಎಂಬಂತಾಗಿದೆ ಎಂದರು. ಈ ಘಟನೆಯ ಉನ್ನತ ಮಟ್ಟದ ತನಿಖೆಯಾಗಿಬೇಕು. ಇದು ಸ್ಥಳೀಯ ಪೊಲೀಸರಿಂದ ಅಂತಹ ತನಿಖೆ ಆಗುವುದಿಲ್ಲ. ಪೊಲೀಸರು ನಿಷ್ಕ್ರಿಯ ಆಗಿದ್ದಾರೆ ಅದಕ್ಕಾಗಿ ಒಂದು ಎಸ್ ಐ ಟಿ ಮಾಡಬೇಕು. ರಾಜ್ಯದಲ್ಲಿ ರಾತ್ರೋರಾತ್ರಿ ನಾಲ್ಕಾರು ಜನರು ಮರ್ಡರ್ ಆಗುತ್ತಾರೆ ಅಂದರೆ ಏನಿದು ರಾಜ್ಯದ ಪರಿಸ್ಥಿತಿ? ಎಂದು ಪ್ರಶ್ನಿಸಿದರು.ಪೊಲೀಸರು ಸರಿಯಾಗಿ ಕಾರ್ಯ ನಿರ್ವಹಿಸಬೇಕು. ಇಲ್ಲವಾದರೆ ಕರ್ನಾಟಕ ಬಿಹಾರ್ ರಾಜ್ಯವಾಗುತ್ತದೆ ಎಂದು ಎಚ್ಚರಿಸಿದರು.

### ವಿಶೇಷ ಸಂಗೀತ ಕಾರ್ಯಕ್ರಮ

• ಉದಯವಾಹಿನಿ, ಬೆಂಗಳೂರು

ನಾದಜ್ಯೋತಿ ಸಂಗೀತ ಸಭಾ ಟ್ರಸ್ಟ್ ವತಿಯಿಂದ ಸಂಸ್ಥೆಯ ವಜ್ರಮಹೋತ್ಸವ 2024-25ರ ಪ್ರಯುಕ್ತ ಮಲ್ಲೇಶ್ವರಂ ಈಸ್ಟ್ ಪಾರ್ಕ್ ರಸ್ತೆಯಲ್ಲಿರುವ ಶ್ರೀ ರಾಮ ಮಂದಿರದಲ್ಲಿ ಏಪ್ರಿಲ್ 20, ಶನಿವಾರ ಸಂಜೆ 6-00 ಗಂಟೆಗೆ ವಿ|| ಐಶ್ವರ್ಯ ನಿತ್ಯಾನಂದ ಮತ್ತು ವಿ|| ಅನುರಾಧ ಬದರಿ ಇವರುಗಳಿಂದ ಯುಗಳ ಗಾಯನ (ಸಂಗೀತ ಕಾರ್ಯಕ್ರಮ) ಏರ್ಪಡಿಸಲಾಗಿದೆ. ಇವರ ಗಾಯನಕ್ಕೆ ವಿ|| ಎಂ.ಎಸ್. ಗೋವಿಂದಸ್ವಾಮಿ ಪಿಟೀಲು ವಾದನದಲ್ಲಿ, ವಿ|| ಬಿ.ಎಸ್. ಆನಂದ್ ಮೃದಂಗ ವಾದನದಲ್ಲಿ ಮತ್ತು ವಿ|| ಜಿ. ಲಕ್ಷ್ಮೀನಾರಾಯಣ ಮೋರ್ಚಿಂಗ್ ವಾದನದಲ್ಲಿ ಸಾಥ್ ನೀಡಲಿದ್ದಾರೆ. ಕೃತಿಗಳ ರಚನೆ ಮತ್ತು ನಿರೂಪಣೆ ವಿ|| ವಸಂತಮಾಧವಿ ಅವರದ್ದು. ಈ ಕಾರ್ಯಕ್ರಮದಲ್ಲಿ ಸಂಗೀತಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಕಲಾವಿದರನ್ನು ಪ್ರೋತ್ಸಾಹಿಸಬೇಕೆಂದು ಸಂಸ್ಥೆಯ ಪದಾಧಿಕಾರಿಗಳು ವಿನಂತಿಸಿದ್ದಾರೆ.

### ಮಹಾವೀರ ಜಯಂತಿ ಹಬ್ಬದ ಪ್ರಯುಕ್ತ ಪ್ರಾಣಿ ವಧೆ, ಮಾಂಸ ಮಾರಾಟ ನಿಷೇಧ

• ಉದಯವಾಹಿನಿ, ಬೆಂಗಳೂರು

ದಿನಾಂಕ: 21.04.2024ರ ಭಾನುವಾರ ಮಹಾವೀರ ಜಯಂತಿ ಹಬ್ಬದ ಪ್ರಯುಕ್ತ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಕಸಾಯಿಖಾನೆಯಲ್ಲಿ ಪ್ರಾಣಿವಧೆ ಹಾಗೂ ಮಾರಾಟ ಮಳಿಗೆಗಳಲ್ಲಿ ಮಾಂಸ ಮಾರಾಟವನ್ನು ಸಂಪೂಣ ರ್ವಾಗಿ ನಿಷೇಧಿಸಲಾಗಿದೆ ಎಂದು ಜಂಟಿ ನಿರ್ದೇಶಕರು(ಪಶುಪಾಲನೆ) ರವರು ತಿಳಿಸಿದ್ದಾರೆ.

### 4 ಕೋಟಿ ಮೌಲ್ಯದ ಮಾದಕ ವಸ್ತು ಜಪ್ತಿ, ವಿದೇಶಿ ಡ್ರಗ್ ಪೆಡ್ಲರ್ ಬಂಧನ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ನಗರ ದಿನದಿಂದ ದಿನಕ್ಕೆ ಬೆಳೆಯುತ್ತಿದ್ದು ಅದರಂತೆ ಅಪರಾಧ ಚಟುವಟಿಕೆಗಳು ಕೂಡ ಹೆಚ್ಚಾಗುತ್ತಿವೆ. ಮಾದಕ ವಸ್ತು ಮಾರಾಟ ಪ್ರಕರಣಗಳು ಹೆಚ್ಚಾಗಿ ಕಂಡುಬರುತ್ತಿದ್ದು, ಇದೀಗ ಬೆಂಗಳೂರಿನಲ್ಲಿ ಸಿಸಿಬಿ ಅಧಿಕಾರಿಗಳು ಭರ್ಜರಿ ಕಾರ್ಯಾಚರಣೆ ನಡೆಸಿದ್ದು ವಿದೇಶಿ ಡ್ರಗ್ ಪೆಡ್ಲರನ್ನು ಬಂಧಿಸಿದ್ದು ಆತನಿಂದ ನಾಲ್ಕು ಕೋಟಿ ಮೌಲ್ಯದ ಮಾದಕ ವಸ್ತು ಮಾರಿಕೊಂಡಿದ್ದಾರೆ. ಬೆಂಗಳೂರಿನ ಶೆಟ್ಟಿಹಳ್ಳಿಯಲ್ಲಿ ನೈಜಿರಿಯಾ ಮೂಲದ ಅಕ್ರಮ ವಾಸಿ ಹೆನ್ರಿ ಚುಕ್ವುಮೆಕಾ ಎಂಬಾತ ಬಂಧಿತ ಆರೋಪಿ. ಇತನಿಂದ ಬರೋಬ್ಬರಿ 4 ಕೋಟಿ ಮೌಲ್ಯದ 4ಕೆಜಿ NDMA ಕ್ರಿಸ್ಟಲ್‌ನ್ನು ಜಪ್ತಿ ಮಾಡಿದ್ದಾರೆ. ಸಿಸಿಬಿ ಪಿಎಸ್ಐ ಕೇಶವಮೂರ್ತಿ ನೇತೃತ್ವದಲ್ಲಿ ಈ ದಾಳಿ ನಡೆಸಲಾಗಿದೆ. ಆರೋಪಿ ಪ್ರತಿಷ್ಠಿತ ಕಾಲೇಜ್ ಹಾಗೂ ಐಟಿಬಿಟಿ ಸಿಬ್ಬಂದಿಗಳಿಗೆ ಹೆಚ್ಚಿನ ಹಣಕ್ಕೆ ಡ್ರಗ್ ಮಾರುತ್ತಿದ್ದ. ಈ ಕುರಿತು ಬಾಗಲಗುಂಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಲಾಗಿದೆ.

### ಚೀಟಿ ಹಾಕುವ ಮುನ್ನ ಎಚ್ಚರ : ಹೆಸರಿನಲ್ಲಿ ಹಣ ಪಡೆದು ಪರಾರಿಯಾದ ದಂಪತಿ!

• ಉದಯವಾಹಿನಿ, ಬೆಂಗಳೂರು

ಚೀಟಿ ಹೆಸರಿನಲ್ಲಿ ಹಣ ಪಡೆದು ವಂಚಿಸಿರುವ ಆರೋಪ ಪ್ರಕರಣದಲ್ಲಿ ದಂಪತಿಯನ್ನು ಬೆಂಗಳೂರು ಪೊಲೀಸರು ಬಂಧಿಸಿದ್ದಾರೆ. ಸಿದ್ದಲಿಂಗಯ್ಯ ಹಾಗೂ ಪ್ರೇಮಾ ಕುಮಾರಿ ಬಂಧಿತ ದಂಪತಿಯಾಗಿದ್ದರು, ಪ್ರಕೃತಿನಗರದಲ್ಲಿ ಕೆಲವು ವರ್ಷಗಳಿಂದ ಶ್ರೀ ಸಾಯಿಲಕ್ಷ್ಮೀ ಕೃಪೆ ಚಿಟ್ (ರಿ) ಹೆಸರಿನಲ್ಲಿ ಬಂಧಿತ ದಂಪತಿ ಚೀಟಿ ನಡೆಸುತ್ತಿದ್ದರು ಎನ್ನಲಾಗಿದೆ. ಈ ನಡುವೆ ಇತ್ತೀಚಿಗೆ ಚೀಟಿ ಹಣ ನೀಡದೇ ನಾಪತ್ತೆಯಾಗಿದ್ದು ಬ್ಯಾಡರಹಳ್ಳಿ ಠಾಣೆಗೆ ಈ ಬಗ್ಗೆ ದೂರುಗಳು ಬಂದಿದ್ದ ಹಿನ್ನಲೆಯಲ್ಲಿ ಪ್ರಕರಣ ದಾಖಲಿಸಿಕೊಂಡಿದ್ದರು, ಇದೀಗ ಪೊಲೀಸರು ಆರೋಪಿ ದಂಪತಿಯ ವಿಚಾರಣೆ ನಡೆಸುತ್ತಿದ್ದಾರೆ.

### ವಿಮಾನ ನಿಲ್ದಾಣಕ್ಕೆ ಜಾಗತಿಕ ಪ್ರಶಸ್ತಿ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣವು 2024 ರ ಸ್ಕೈಟ್ರಾಕ್ಸ್ ವಿಶ್ವ ವಿಮಾನ ನಿಲ್ದಾಣ ಪ್ರಶಸ್ತಿಗಳಲ್ಲಿ 'ಭಾರತ ಮತ್ತು ದಕ್ಷಿಣ ಏಷ್ಯಾದ ಅತ್ಯುತ್ತಮ ಪ್ರಾದೇಶಿಕ ವಿಮಾನ ನಿಲ್ದಾಣ' ಎಂಬ ಬಿರುದನ್ನು ಗೆದ್ದಿದೆ. ಗ್ರಾಹಕರ ತೃಪ್ತಿ ಸಮೀಕ್ಷೆಯಲ್ಲಿ ದಾಖಲಾದ ಪ್ರತಿಕ್ರಿಯೆಯನ್ನು ಆಧರಿಸಿ ಈ ಪ್ರಶಸ್ತಿಯನ್ನು ನೀಡಲಾಗಿದೆ.

ವಿಮಾನ ನಿಲ್ದಾಣದ ಟರ್ಮಿನಲ್ 2 'ವಿಶ್ವದ ಅತ್ಯುತ್ತಮ ಹೊಸ ವಿಮಾನ ನಿಲ್ದಾಣ ಟರ್ಮಿನಲ್' ವಿಭಾಗದಲ್ಲಿ ಎರಡನೇ ಸ್ಥಾನವನ್ನುಗಳಿಸಿದೆ, ಪ್ರಶಸ್ತಿಗಳಿಗೆ ಮೊದಲು ಕಳೆದ 18 ತಿಂಗಳಲ್ಲಿ ತೆರೆಯಲಾದ ಟರ್ಮಿನಲ್ ಗಳನ್ನು ಗುರುತಿಸಿದೆ. ಈ ಪ್ರಶಸ್ತಿಯು ವಿಮಾನ ನಿಲ್ದಾಣ ಸೌಲಭ್ಯಗಳು, ಸಿಬ್ಬಂದಿ ಸೇವೆಗಳು ಮತ್ತು ಗ್ರಾಹಕರ ಅನುಭವದ ಮೌಲ್ಯಮಾಪನವನ್ನು ಒಳಗೊಂಡಿದೆ ಎಂದು ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಲಿಮಿಟೆಡ್ (ಬಿಐಎಎಲ್) ಹೇಳಿಕೆಯಲ್ಲಿ ತಿಳಿಸಿದೆ. ಪ್ರಶಸ್ತಿ ಪ್ರದಾನ ಸಮಾರಂಭವು ಏಪ್ರಿಲ್ 17 ರಂದು ಜರ್ಮನಿಯ ಫ್ರಾಂಕ್ಫರ್ಟ್‌ನಲ್ಲಿ ನಡೆದ ಪ್ಯಾಸೆಂಜರ್ ಟರ್ಮಿನಲ್ ಎಕ್ಸ್ಪೋದಲ್ಲಿ ನಡೆಯಿತು. ಬಿಎಲ್‌ಆರ್ ವಿಮಾನ ನಿಲ್ದಾಣದಲ್ಲಿ ಪ್ರಯಾಣಿಕರ ಅನುಭವವನ್ನು ಮತ್ತಷ್ಟು ಹೆಚ್ಚಿಸಲು ಈ ಪ್ರಶಂಸೆಗಳು ಪ್ರೇರಕ ಶಕ್ತಿಯಾಗಿ ಕಾರ್ಯನಿರ್ವಹಿಸಿವೆ ಎಂದು ಬಿಐಎಎಲ್ ಸಿಇಒ ಹರಿ ಮರಾರ್ ಹೇಳಿದ್ದಾರೆ. ಸ್ಕೈಟ್ರಾಕ್ಸ್ ಸಿಇಒ ಎಡ್ವರ್ಡ್ ಪ್ಲೈಸ್ಟೆಡ್ ಮಾತನಾಡಿ, ಬೆಂಗಳೂರು ವಿಮಾನ ನಿಲ್ದಾಣದ ಜಾಗತಿಕ ಗುಣಮಟ್ಟದ ಖ್ಯಾತಿಯು ಬೆಳೆಯುತ್ತಲೇ ಇದೆ, 2023 ರಲ್ಲಿ ಟಿ 2 ತೆರೆಯುವುದರೊಂದಿಗೆ ಗ್ರಾಹಕರ ಅನುಭವದಲ್ಲಿ ಗಮನಾರ್ಹ ಪ್ರಗತಿ ಯನ್ನು ಪ್ರತಿನಿಧಿಸುತ್ತದೆ ಎಂದರು.


ಉದಯವಾಹಿನಿ ಚಿತ್ರ

## ಮತ ಚಲಾಯಿಸಿ ಪ್ರಜಾಪ್ರಭುತ್ವವನ್ನು ಗೆಲ್ಲಿಸೋಣ

• ಉದಯವಾಹಿನಿ, ಬೆಂಗಳೂರು

ಲೋಕಸಭಾ ಚುನಾವಣೆಯಲ್ಲಿ ಎಲ್ಲರೂ ಒಟ್ಟಾಗಿ ಮತ ಚಲಾಯಿಸಿ ಪ್ರಜುಪ್ರಭುತ್ವವನ್ನು ಗೆಲ್ಲಿಸೋಣವೆಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಮುಖ್ಯ ಆಯುಕ್ತರಾದ ಶ್ರೀ ತುಷಾರ್ ಗಿರಿನಾಥ್ ರವರು ಎಲ್ಲಾ ವಿದ್ಯಾರ್ಥಿಗಳಲ್ಲಿ ಮನವಿ ಮಾಡಿದರು.

ಲೋಕಸಭಾ ಚುನಾವಣೆ ಹಿನ್ನೆಲೆ ಲಾಲ್‌ಬಾಗ್



ಉದಯವಾಹಿನಿ ಚಿತ್ರ

**ಘೋಷಣೆಗಳನ್ನು ಕೂಗುತ್ತಾ ಸಾಗಿದ ವಿದ್ಯಾರ್ಥಿಗಳು**

**ಲಾಲ್‌ಬಾಗ್‌ನಲ್ಲಿರುವ ವಾಯುವಿಹಾರ ಮಾರ್ಗದಲ್ಲಿ ಸುಮಾರು 4 ಕಿ.ಮೀ ಕಾಲ್ನಡಿಯ ಜಾಥಾ ಮೂಲಕ ಸಾಗಿ ವಾಯುವಿಹಾರಿಗಳಲ್ಲಿ ಏಪ್ರಿಲ್ 26 ರಂದು ತಪ್ಪದೆ ಮತದಾನ ಮಾಡುವಂತೆ ಜಾಗೃತಿ ಮೂಡಿಸಲಾಯಿತು. ವಿದ್ಯಾರ್ಥಿಗಳು 'ಪ್ರಜಾಪ್ರಭುತ್ವಕ್ಕೆ ಮತ ದಾನ ನೀಡಿ',ನನ್ನ ಮತ ದೇಶಕ್ಕೆ ಹಿತ' ಚುನಾವಣಾ ಪರ್ವ ದೇಶದ ಗರ್ವ', '26 ರಂದು ಮತ ಚಲಾಯಿಸಿ' ಸೇರಿದಂತೆ ಇನ್ನಿತರೆ ಘೋಷಣೆಗಳನ್ನು ಕೂಗುತ್ತಾ ಜಾಥಾ ಸಾಗಿತು.**

1ನೇ ಮುಖ್ಯದ್ವಾರದಿಂದ ಹಮ್ಮಿಕೊಂಡಿದ್ದ ಮತದಾನ ಜಾಗೃತಿ ಕಾಲ್ನಡಿಗೆ ಜಾಥಾ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು, ನೀವೆಲ್ಲರೂ ಯುವ ಮತದಾರರಾಗಿದ್ದು, ಮೊದಲ ಬಾರಿ ಮತ ಚಲಾಯಿಸುತ್ತಿದ್ದೀರಿ.

ಪ್ರಜಾಪ್ರಭುತ್ವಕ್ಕೆ ಉತ್ತಮ ಕೊಡುಗೆ ನೀಡುವ ನಿಟ್ಟಿನಲ್ಲಿ ಎಲ್ಲಾ ಯುವ ಮತದಾರರು ತಪ್ಪದೆ ಮತ ಚಲಾಯಿಸಬೇಕೆಂದು ಮನವಿ ಮಾಡಿದರು. ಬೆಂಗಳೂರಿನಲ್ಲಿ ಕಳೆದ ಚುನಾವಣೆಯಲ್ಲಿ ಶೇ. 54 ರಷ್ಟು ಮತದಾನವಾಗಿದ್ದು, ಈ ಬಾರಿಯ ಚುನಾವಣೆಯಲ್ಲಿ ಮತದಾನದ ಶೇಖಡವಾರು ಪ್ರಮಾಣವನ್ನು ಹೆಚ್ಚಿಸುವ ನಿಟ್ಟಿನಲ್ಲಿ ನಾನಾ ರೀತಿಯ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಮತದಾರರಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡಲಾಗುತ್ತಿದೆ ಎಂದು ಹೇಳಿದರು.

ಈ ವೇಳೆ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ಕಾಂತರಾಜು, ಜಿಲ್ಲಾ ಸ್ವೀಪ್ ನೋಡಲ್ ಅಧಿಕಾರಿಯಾದ ಪ್ರತಿಭಾ ಸೇರಿದಂತೆ ಅಧಿಕಾರಿಗಳು ವಿದ್ಯಾರ್ಥಿಗಳು ಜಾಥಾದಲ್ಲಿ ಪಾಲ್ಗೊಂಡಿದ್ದರು.

**ವಿವಿಧ 17 ಕಾಲೇಜುಗಳ ವಿದ್ಯಾರ್ಥಿಗಳು ಭಾಗಿ**

**ಮಹಾರಾಣಿ ಕಾಲೇಜು, ವಿವೇಕಾನಂದ ಪದವಿ ಕಾಲೇಜು, ವಿಜಯ ಕಾಲೇಜು, ಸರ್ಕಾರಿ ಕಲಾ ಕಾಲೇಜು, ಎಸ್. ಎಲ್.ಎನ್ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯ ಸೇರಿದಂತೆ 17 ವಿವಿಧ ಕಾಲೇಜುಗಳಿಂದ 1000ಕ್ಕೂ ಹೆಚ್ಚು ವಿದ್ಯಾರ್ಥಿಗಳು ಜಾಥಾದಲ್ಲಿ ಪಾಲ್ಗೊಂಡಿದ್ದರು.**

## ಮತದಾರರಿಗೆ ರಿಯಾಯಿತಿ ದರದಲ್ಲಿ ತಿಂಡಿ ವ್ಯವಸ್ಥೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ಲೋಕಸಭಾ ಚುನಾವಣೆಗೆ ಮತ ದಾನದ ದಿನಾಂಕ ಹತ್ತಿರವಾಗುತ್ತಿದೆ. ಈ ನಡುವೆ ಬೆಂಗಳೂರಿನ ಮತದಾರರಿಗೆ ಸಿಹಿ ಸುದ್ದಿಯೊಂದು ಹೊರಬಿದ್ದಿದೆ. ಅದೇನೆಂದರೆ ಮತದಾರರನ್ನು ಮತ ದಾನಕ್ಕಾಗಿ ಪ್ರೋತ್ಸಾಹಿಸಲು ಬೃಹತ್ ಬೆಂಗಳೂರು ಹೋಟೆಲ್‌ಗಳ ಸಂಘವು ನಿರ್ಧರಿಸಿದೆ. ಇದಕ್ಕಾಗಿ ಮತದಾನ ಮಾಡಿದವರಿಗೆ ರಿಯಾಯಿತಿ ದರದಲ್ಲಿ ತಿಂಡಿ ತಿನಿಸು ನೀಡಲು ತೀರ್ಮಾನಿಸಲಾಗಿದೆ



ನಗರದಲ್ಲಿ ಯಾವಾಗಲೂ ಮತದಾನ ಪ್ರಮಾಣ ಕಡಿಮೆ ಆಗುತ್ತಿರುತ್ತದೆ.

ಪ್ರಜಾಪ್ರಭುತ್ವದಲ್ಲಿ ನಾಗರಿಕರಿ ಗಿರುವ ಬಹುಮುಖ್ಯ ವಾದ ಹಕ್ಕು ಮತದಾನ. ಹೀಗಾಗಿ ಏಪ್ರಿಲ್ 26ರಂದು ನಡೆಯಲಿರುವ ಮೊದಲ ಹಂತದ ಮತದಾನ ಪ್ರೋತ್ಸಾಹಿಸಲು ಸಂಘದಿಂದ ನಿರ್ಧರಿಸಲಾಗಿದೆ ಎಂದು ಅಧ್ಯಕ್ಷ ಪಿಸಿ ರಾವ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಕಳೆದ ಲೋಕಸಭಾ ಚುನಾವಣೆಯಲ್ಲಿ ಬೆಂಗಳೂರು ನಗರದಲ್ಲಿ ಕೇವಲ ಶೇ.54ರಷ್ಟು ಮಾತ್ರ ಮತದಾನವಾಗಿದೆ. ಹೆಚ್ಚು ಯುವಕರು, ವಿದ್ಯಾವಂತರನ್ನು ಹೊಂದಿರುವ ಬೆಂಗಳೂರು ನಗರದಲ್ಲಿ ಇಷ್ಟೊಂದು ಕಡಿಮೆ ಪ್ರಮಾಣದಲ್ಲಿ ಮತದಾನ ಆಗಿರುವುದು ಸಮಂಜಸವಲ್ಲ.

ಈ ಬಾರಿ ಅರ್ಹ ವಿದ್ಯಾರ್ಥಿ, ವಿದ್ಯಾರ್ಥಿನಿಯರು, ಯುವಕರು ಸೇರಿದಂತೆ ಎಲ್ಲಾ ನಾಗರಿಕರೂ ಕೂಡ ಮತಗಟ್ಟೆಗೆ ಬಂದು ಮತ ಚಲಾಯಿಸುವಂತೆ ಜಾಗೃತಿ ಮೂಡಸಬೇಕು. ಈ ಸಂಬಂಧ ಹೋಟೆಲ್ ಮಾಲೀಕರು ಹೋಟೆಲ್‌ಗಳಲ್ಲಿ ಮತದಾನದ ಜಾಗೃತಿ ಮೂಡಿಸುವ ಪೋಸ್ಟರ್ ಹಾಕುವುದು ಸೇರಿ ಇತರೆ ಜಾಗೃತಿ ಕಾರ್ಯಗಳನ್ನು ಮಾಡಲಿದ್ದೇವೆ. ರಿಯಾಯಿತಿ ದರದಲ್ಲಿ ತಿಂಡಿ-ತಿನಿಸು, ಪಾನೀಯ ನೀಡಿ ಪ್ರೋತ್ಸಾಹಿಸಲಿದ್ದೇವೆ ಎಂದಿದ್ದಾರೆ. ಅಂದ ಹಾಗೆ ಬೆಂಗಳೂರು ಗ್ರಾಮಾಂತರ, ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರಗಳಲ್ಲಿ ಮೊದಲ ಹಂತದಲ್ಲಿ ಮತದಾನ ನಡೆಯಲಿದೆ. ಅಂದರೆ ಏಪ್ರಿಲ್ 26ಕ್ಕೆ ಮತದಾನ ನಡೆಯಲಿದೆ. ಹೀಗಾಗಿ ಈ ದಿನ ಮತ ಚಲಾಯಿಸುವ ಮತದಾರರಿಗೆ ರಿಯಾಯಿತಿ ದರದಲ್ಲಿ ತಿಂಡಿ ತಿನಿಸು ಸಿಗಲಿದೆ. ಮತದಾನ ಮಾಡಿ ಬಂದವರಿಗೆ ಅಂದರೆ ಕೈ ಬೆರಳಿಗೆ ಶಾಹಿ ಹಚ್ಚಿಸಿಕೊಂಡು ಬಂದವರಿಗೆ ಕೆಲ ಹೋಟೆಲ್ಗಗಳಲ್ಲಿ ಉಚಿತ, ರಿಯಾಯಿತಿ ದರದಲ್ಲಿ ತಿಂಡಿ ತಿನಿಸು, ಪಾನೀಯ ನೀಡುವುದಾಗಿ ತಬೆಂಗಳೂರು ಹೋಟೆಲ್ ಜಿಗಳ ಸಂಘವು ತಿಳಿಸಿದೆ.

## ಬಿಎಂಟಿಸಿ ಶಾಕ್: ಬರೋಬ್ಬರಿ 7.65 ಲಕ್ಷ ದಂಡ ವಸೂಲಿ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿನ ಬಿಎಂಟಿಸಿ ಬಸ್ಸುಗಳಲ್ಲಿ ಟಿಕೆಟ್ ಇಲ್ಲದೇ ಪ್ರಯಾಣಿಸಿದಂತ ಪ್ರಯಾಣಿಕರಿಗೆ ದಂಡದ ಬಿಸಿಯನ್ನು ಮುಟ್ಟಿಸಲಾಗಿದೆ. ಬಿಎಂಟಿಸಿಯಿಂದ ಬರೋಬ್ಬರಿ 1101 ಪ್ರಕರಣ ದಾಖಲಿಸಿ, ಬರೋಬ್ಬರಿ 7,65,090 ರೂ ದಂಡವನ್ನು ವಸೂಲಿ ಮಾಡಲಾಗಿದೆ.

ಈ ಕುರಿತಂತೆ ಪತ್ರಿಕಾ ಪ್ರಕಟಣೆಯಲ್ಲಿ ಮಾಹಿತಿ ನೀಡಿರುವಂತ ಬಿಎಂಟಿಸಿಯು, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ವಾಹನಗಳಲ್ಲಿ ಸಂಚರಿಸುವ ಪ್ರಯಾಣಿಕರು ಟಿಕೇಟನ್ನು ಪಡೆಯದೆ ಅನಧಿಕೃತವಾಗಿ ಪ್ರಯಾಣ ಮಾಡುವವರನ್ನು ಮತ್ತು ಸಂಸ್ಥೆಯ ಸಾರಿಗೆ ಆದಾಯದ ಸೋರಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ, ನಗರದಾದ್ಯಂತ ಸಂಚರಿಸುವ ವಾಹನಗಳನ್ನು ನಮ್ಮ ಸಂಸ್ಥೆಯ ತನಿಖಾ ತಂಡಗಳು ಮಾರ್ಚ್-2024 ರ ಮಾಹೆಯಲ್ಲಿ ಒಟ್ಟು 17,900 ಟ್ರಿಪ್‌ಗಳನ್ನು ತಪಾಸಿಸಿ 3840 ಟಿಕೇಟ್ ರಹಿತ ಪ್ರಯಾಣಿಕರನ್ನು ಪತ್ತೆ ಹಚ್ಚಿ, ಅವರಿಂದ ಒಟ್ಟು ರೂ.7,65,090/- ದಂಡ ವಸೂಲಿ ಮಾಡಿ ಸಂಸ್ಥೆಯ ನಿರ್ವಾಹಕರ ವಿರುದ್ಧ 1101 ಪ್ರಕರಣಗಳನ್ನು ದಾಖಲಿಸಿರುತ್ತಾರೆ ಎಂದಿದೆ.ಪ್ರಯಾಣಿಕರು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ವಾಹನಗಳಲ್ಲಿ ಪ್ರಯಾಣಿಸುವಾಗ ಅಧಿಕೃತ ಟಿಕೇಟ್ / ದಿನದ ಪಾಸು / ಮಾಸಿಕ ಪಾಸುಗಳನ್ನು ಹೊಂದಿ ಪ್ರಯಾಣಿಸುವುದು. ಇದರಿಂದ ಅನಗತ್ಯ ದಂಡ ಕಟ್ಟುವುದನ್ನು ತಡೆಯಬಹುದಾಗಿದೆ ಹಾಗೂ ಇಂತಹ ಪ್ರವೃತ್ತಿಯಿಂದ ಸಂಸ್ಥೆಯು ಉತ್ತಮ ಸೇವೆಯನ್ನು ಪ್ರಯಾಣಿಕರಿಗೆ ನೀಡಲು ಸಹಾಯವಾಗುತ್ತದೆ. ಮಹಿಳಾ ಪ್ರಯಾಣಿಕರಿಗೆಂದೇ ಮೀಸಲಾಗಿರುವ ಆಸನಗಳಲ್ಲಿ ಪುರುಷ ಪ್ರಯಾಣಿಕರು ಆಸನಗಳನ್ನು ತೆರವು ಮಾಡಿ ಕೊಡುವ ಮೂಲಕ ಅವರಿಗೆ ಕುಳಿತುಕೊಳ್ಳಲು ಅವಕಾಶ ನೀಡಬೇಕೆಂದು ಕೋರಲಾಗಿದೆ.


ಉದಯವಾಹಿನಿ ಚಿತ್ರ

ಬಿಎಂಟಿಸಿ ದಂಡ ವಸೂಲಿ

**ಮಹಿಳಾ ಪ್ರಯಾಣಿಕರಿಗೆಂದೇ ಮೀಸಲಾಗಿರುವ ಆಸನಗಳಲ್ಲಿ ಕುಳಿತು ಪ್ರಯಾಣಿಸಿರುವ 530 ಪುರುಷ ಪ್ರಯಾಣಿಕರಿಂದ ಒಟ್ಟು ರೂ. 53,000/- ಅನ್ನು ಮೋಟಾರು ವಾಹನ ಕಾಯ್ದೆ 1988ರ ಕಾಲಂ 177 ಮತ್ತು 94 ರ ಪ್ರಕಾರ ದಂಡ ವಿಧಿಸಲಾಗಿರುತ್ತದೆ ಎಂದು ತಿಳಿಸಿದೆ. ಒಟ್ಟಾರೆಯಾಗಿ ಮಾರ್ಚ್-2024 ರ ಮಾಹೆಯಲ್ಲಿ 4,370 ಪ್ರಯಾಣಿಕರಿಂದ ಒಟ್ಟು ರೂ 8,18,090/- ದಂಡವನ್ನು ವಸೂಲಿ ಮಾಡಲಾಗಿದೆ ಎಂದಿದೆ.**

## ಮೆಟ್ರೋ ಸುರಂಗ ಕಾಮಗಾರಿ ಬಹುತೇಕ ಪೂರ್ಣ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಮೆಟ್ರೋ ರೈಲು ನಿಗಮ ಕೈಗೆತ್ತಿಕೊಂಡ ಗುಲಾಬಿ ಮಾರ್ಗದಲ್ಲಿ ಸಾಧನೆ ಸನಿಹದಲ್ಲಿದೆ. 13 ಕಿಲೋಮೀಟರ್ ಸುರಂಗ ಮಾರ್ಗ ಅಂತಿಮ ಹಂತದಲ್ಲಿದೆ ಎಂದು ಮೆಟ್ರೋ ಮೂಲಗಳು ಮಾಹಿತಿ ನೀಡಿವೆ. ಬೆಂಗಳೂರು ನಮ್ಮ ಮೆಟ್ರೋ ''ಗುಲಾಬಿ ಮಾರ್ಗ'ದಲ್ಲಿ ಭೂಗತ ಸುರಂಗ ಮಾರ್ಗ ಕಾರ್ಯ ನಡೆಯುತ್ತಿದೆ.ಇದು ಇನ್ನೇನು ಪೂರ್ಣಗೊಳ್ಳುವ ಹಂತಕ್ಕೆ ಬಂದಿದೆ. ಈ ಮೂಲಕ ನಮ್ಮ ಮೆಟ್ರೋ ಮತ್ತೊಂದು ಸಾಧನೆ ಹಂತದಲ್ಲಿದೆ ಎಂದು ವರದಿ ಮಾಡಿದೆ.

ನಗರದ ಬನ್ನೇರುಘಟ್ಟ ರಸ್ತೆಯಿಂದ ನಾಗವಾರಕ್ಕೆ ಸಂಪರ್ಕ ಕಲ್ಪಿಸುವ 'ಗುಲಾಬಿ ಮಾರ್ಗ'ದಲ್ಲಿ ಸುರಂಗ ಕೊರೆಯುವ ಗುರಿ ಬಹುತೇಕ ಅಂತಿಮ ಹಂತದಲ್ಲಿದೆ. ಇದೇ ವರ್ಷ ಆಗಸ್ಟ್ ವೇಳೆಗೆ ಕಾಮಗಾರಿ ಪೂರ್ಣಗೊಳ್ಳುವ ಸಾಧ್ಯತೆ ಇದೆ. ನಂತರ ಸಿವಿಲ್ ಕೆಲಸಗಳು, ಟ್ರ್ಯಾಕ್ ಹಾಕುವ ಕಾರ್ಯ ನಡೆಯಲಿವೆ.

ಪಿಂಕ್ ಲೈನ್ ನಲ್ಲಿ ಭೂಗತ ಮಾರ್ಗ ಎಷ್ಟು ಈ ಗುಲಾಬಿ ಮಾರ್ಗವು ಒಟ್ಟು 21.26 ಕಿಲೋ ಮೀಟರ್ ಉದ್ದವಿದೆ. ಇದರಲ್ಲಿ ಸುಮಾರು 13 ಕಿಲೋಮೀಟರ್ ಭೂಗತ ಕಾಮಗಾರಿಯಲ್ಲೇ ರೈಲು ಸಾಗುವಂತೆ ಸುರಂಗ ಕೊರೆಯಲಾಗುತ್ತಿದೆ. 7.5-ಕಿಲೋಮೀಟರ್ ಎತ್ತರದ ಮಾರ್ಗ ಹೊಂದಿರುವ ಈ ಪಿಂಕ್ ಮಾರ್ಗದಲ್ಲಿ 18 ನಿಲ್ದಾಣಗಳು ಇವೆ.

ಸುರಂಗದ ಶೇ.94 ರಷ್ಟು ಕೆಲಸ ಪೂರ್ಣ ಮೆಟ್ರೋ ಗುಲಾಬಿ ಯೋಜನೆಯನ್ನು ಮೂರು ವಿಭಾಗವಾಗಿ ಬೆಂಗಳೂರು ಮೆಟ್ರೋ ರೈಲು ಕಾರ್ಪೊರೇಷನ್ ಲಿಮಿಟೆಡ್ ವಿಂಗಡಿಸಲಾಗಿದೆ. ಮೊದಲ ಎರಡು ಹಂತಗಳಲ್ಲಿ ಸುರಂಗ ಕೆಲಸ ಮುಗಿದಿದೆ. ಮೂರನೇ ಹಂತದಲ್ಲಿ ಸುರಂಗ ಕೊರೆವ ಕೆಲಸ ಅಂತಿಮ ಹಂತಕ್ಕೆ ಬಂದಿದೆ. ಸದ್ಯ ಶೇ. 94 ರಷ್ಟು ಕೆಲಸ ಪೂರ್ಣಗೊಂಡಿದೆ.


ಉದಯವಾಹಿನಿ ಚಿತ್ರ

**ಇದೇ ಮಾರ್ಗದಲ್ಲಿ ಈ ಹಿಂದೆ ಕೆ.ಜಿ.ಹಳ್ಳಿ ಮತ್ತು ನಾಗವಾರ ನಡುವೆ 935 ಮೀಟರ್ ಸುರಂಗ ಕಾರ್ಯವು ಸುಧಾರಿತ ಟಿಬಿಎಂ ಯಂತ್ರ 'ಭದ್ರಾ' ಸಹಾಯದಿಂದ ಕೊರೆಯಲಾಗಿದೆ. ಫೆಬ್ರವರಿ ಮತ್ತು ಏಪ್ರಿಲ್‌ನಲ್ಲಿ ಕ್ರಮವಾಗಿ ತಮ್ಮ ಕಾರ್ಯಾಚರಣೆ ಪೂರ್ಣಗೊಳಿಸಲಾಗಿದೆ. ಇದೇ ಭದ್ರಾ ಟಿಬಿಎಂ ಈಗ ಕೊನೆಯ ಹಂತ ಸುರಂಗ ಕೊರೆಯುತ್ತಿದ್ದು, ಮುಂದಿನ ಆಗಸ್ಟ ವೇಳೆಗೆ ಕಾರ್ಯ ಮುಗಿಸಿ ಹೊರ ಬರಲಿದೆ.**

**ಮೆಟ್ರೋ ಮಾರ್ಗದಲ್ಲಿನ ಈ ಸುರಂಗ ಕೆಲಸ ಪೂರ್ಣಗೊಳ್ಳುತ್ತಿದ್ದಂತೆ ಟ್ರ್ಯಾಕ್ ಅಳವಡಿಕೆ ಸೇರಿದಂತೆ ಇನ್ನಿತರ ಸಿವಿಲ್ ಕೆಲಸ ನಡೆಯುತ್ತವೆ. 2024ರ ಅಂತ್ಯದ ಹೊತ್ತಿಗೆ ಈ ಗುಲಾಬಿ ಮಾರ್ಗದಲ್ಲಿನ ಟ್ರ್ಯಾಕ್ ಅಳವಡಿಕೆ ಕೆಲಸ ಅಂತಿಮಗೊಂಡು, ಸಿಗ್ನಲಿಂಗ್ ಕೆಲಸ ನಡೆಯುವ ಸಾಧ್ಯತೆಗಳು ನಡೆಯಬಹದು ಎಂದು ಅಧಿಕಾರಿಗಳು ಯೋಜಿಸಿದ್ದಾರೆ.**

## ರಾಜ್ಯಪಾಲರ ಆಡಳಿತ ಹೇರಲು ಬಿಜೆಪಿ ಹುನ್ನಾರ: ಡಿಕೆಶಿ

■ ಬಿಜೆಪಿ ಆರೋಪದ ಬಗ್ಗೆ ಡಿಕೆ ಶಿವಕುಮಾರ್ ಉತ್ತರ ■ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಪ್ರತಿಕ್ರಿಯೆ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಕಾನೂನು ಸುವ್ಯವಸ್ಥೆ ಸರಿಯಾಗಿದೆ. ಬಿಜೆಪಿಯವರು ಗೂಬೆ ಕೂರಿಸುವ ಪ್ರಯತ್ನ ಮಾಡುತ್ತಿದ್ದಾರೆ. ನಮ್ಮ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸರಿ ಇದ್ದಷ್ಟು ಈ ದೇಶದ ಯಾವ ರಾಜ್ಯದಲ್ಲೂ ಇಲ್ಲ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು.ಕೆಪಿಸಿಸಿ ಕಚೇರಿಯಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಶುಕ್ರವಾರ ಪ್ರತಿಕ್ರಿಯಿಸಿದರು. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿರುವುದೇ ಹುಬ್ಬಳ್ಳಿ ಕೊಲೆ ಪ್ರಕರಣಕ್ಕೆ ಕಾರಣ ಎನ್ನುವ ಬಿಜೆಪಿ ಆರೋಪದ ಬಗ್ಗೆ ಅವರು ಉತ್ತರಿಸಿದ್ದು ಹೀಗೆ:

ರಾಜ್ಯಪಾಲರ ಆಡಳಿತ ಹೇರಲು ಈ ರೀತಿಯ ನಾಟಕ ಹಾಗು ಹುನ್ನಾರವನ್ನು ವಿಪಕ್ಷ ನಾಯಕ ಆರ್. ಅಶೋಕ ಬಿಜೆಪಿಯವರು ಮಾಡುತ್ತಿದ್ದಾರೆ. ಈ ರೀತಿ ಆಗಲು ನಾವು ಬಿಡುವುದಿಲ್ಲ. ನಿಷ್ಪಕ್ಷಪಾತವಾಗಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದು ಎಂದರು.

ಮಾಲೀಕಯ್ಯಾ ಗುತ್ತೇದಾರ್ ಅವರು ಬಹಳ ವರ್ಷಗಳಿಂದ ನಮ್ಮ ಜೊತೆಗಿದ್ದವರು. ಕಾರಣಾಂತರಗಳಿಂದ ಬಿಜೆಪಿಗೆ ಸೇರ್ಪಡೆಯಾಗಿದ್ದರು. ಬಿಜೆಪಿಯಲ್ಲಿ ಭವಿಷ್ಯವಿಲ್ಲ ಎಂದು ಅರಿವಾಗಿ ಮತ್ತೆ ಮರಳಿ ಬಂದಿದ್ದಾರೆ. ಈ ಹಿಂದೆ ನಾವು ಒಟ್ಟಾಗಿ ಕೆಲಸ ಮಾಡಿದ್ದೇವೆ. ಮಾಲೀಕಯ್ಯಾ ಅವರು ಪಕ್ಷದ ಅನೇಕ ಹುದ್ದೆಗಳನ್ನು ಅಲಂಕರಿಸಿ ಕಾಂಗ್ರೆಸ್ ಪಕ್ಷವನ್ನು ಕಟ್ಟಿದ್ದಾರೆ. ಈಗ ಯಾವುದೇ ಷರತ್ತುಗಳನ್ನು ವಿಧಿಸದೆ ಮರಳಿ ಬಂದಿದ್ದಾರೆ. ನಮ್ಮ ಶಾಸಕರಾದ ಎಂ.ವೈ ಪಾಟೀಲ್ ಅವರು ಹಾಗೂ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರು ಇವರ ಸೇರ್ಪಡೆಯನ್ನು ಸ್ವಾಗತಿಸಿದ್ದಾರೆ. ಯಾವುದೇ ಭಿನ್ನಾಭಿಪ್ರಾಯ ಇದ್ದರೂ ಮರೆತು ಪಕ್ಷ ಕಟ್ಟಬೇಕು ಎಂಬುದು ಎಲ್ಲರ ಒಕ್ಕೊರಲಾಗಿದೆ. ಇದೇ ವೇಳೆ ಮಾಜಿ ಶಾಸಕರಾದ ಶಾರದ ಮೋಹನ್ ಶೆಟ್ಟಿ ಅವರು ಹಾಗೂ ಆಮ್ ಆದ್ಮಿ ಪಕ್ಷದ ನಟರಾಜ್ ಅವರು ಹಾಗೂ ಸಿದ್ದು ಸಾಲಮನಿ, ಕರುಣಾಕರ್ ಭಟ್, ರಾಮಣ್ಣ, ಮಲ್ಲೇಗೌಡ ಪಾಟೀಲ್, ರವಿ ಪಾಟೀಲ್, ಚಂದ್ರಕಾಂತ್, ಶಿವಪ್ಪ ಅವರು ಪಕ್ಷ ಸೇರ್ಪಡೆಯಾದರು.

**ಬಿಜೆಪಿ- ದಳ ತೊರೆದು ಅನೇಕ ಕಾರ್ಯಕರ್ತರು, ನಾಯಕರು ನಮ್ಮ ಕಡೆ ವಾಲುತ್ತಿದ್ದಾರೆ. ಸರಮಾಲೆಯಂತೆ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗುತ್ತಿದ್ದಾರೆ. ಬಿಜೆಪಿಗೆ ಧ್ವನಿಯಿಲ್ಲ. ಅವರು ತಮ್ಮ ಧ್ವನಿಯನ್ನು ಕಳೆದುಕೊಂಡಿದ್ದಾರೆ. ಆದ ಕಾರಣ ಸ್ಥಳೀಯ ಮಟ್ಟದಲ್ಲಿ ಯಾರು ಪಕ್ಷ ಸೇರ್ಪಡೆಯಾಗುತ್ತಾರೆಯೋ ಅವರನ್ನು ಸೇರಿಸಿಕೊಳ್ಳಬೇಕು ಎಂದು ಎಲ್ಲರಿಗೂ ಸೂಚನೆ ನೀಡಿದ್ದೇನೆ.**

ಡಿಸಿಎಂ ಖಡಕ್ ಸೂಚನೆ



**ಕರ್ನಾಟಕ ಬಿಹಾರ ಆಗುತ್ತದೆ ಎನ್ನುವ ಬಸವರಾಜ ಬೊಮ್ಮಾಯಿ ಅವರ ಹೇಳಿಕೆ ಬಗ್ಗೆ ಕೇಳಿದಾಗ ಅವರ ಕಾಲದಲ್ಲಿಯೂ ಅನೇಕ ಕೃತ್ಯಗಳು ನಡೆದಿದ್ದವು. ಎಲ್ಲರ ಕಾಲದಲ್ಲೂ ವೈಯಕ್ತಿಕ ಕಾರಣಗಳಿಗೆ ಇವು ನಡೆಯುತ್ತಿರುತ್ತವೆ. ಆದರೆ ರಾಜ್ಯದ ಕಾನೂನು ಸುವ್ಯವಸ್ಥೆ ಹದಗೆಟ್ಟಿಲ್ಲ. ಈ ವಿಚಾರವಾಗಿ ಹಸ್ತಕ್ಷೇಪ ಮಾಡುವುದಿಲ್ಲ. ಪೊಲೀಸರು ತಮ್ಮ ಕೆಲಸ ಮಾಡಲಿದ್ದಾರೆ ಎಂದು ತಿಳಿಸಿದರು.**

**ಬಿಜೆಪಿ ಒಂದಂಕಿ ದಾಟುವುದಿಲ್ಲ**

**ಬಿಜೆಪಿ- ದಳದವರ ಮೈತ್ರಿಯನ್ನು ಅವರ ಕಾರ್ಯಕರ್ತರೇ ವಿರೋಧಿಸಿದ್ದಾರೆ. ಉತ್ತರ ಭಾರತದಲ್ಲೂ ಸಾಕಷ್ಟು ಜನ ಬಿಜೆಪಿ ತೊರೆಯುತ್ತಿದ್ದಾರೆ. ಅವರು 400 ಸ್ಥಾನ ಗೆಲ್ಲುತ್ತದೆ ಎನ್ನುವ ವಿಶ್ವಾಸ ಇದ್ದಿದ್ದರೇ ಇತರೇ ಪಕ್ಷಗಳ ನಾಯಕರನ್ನು ಏತಕ್ಕೆ ಬಿಜೆಪಿಗೆ ಸೇರಿಸಿಕೊಳ್ಳುತ್ತಿದ್ದರು. ನನಗೆ ಬಂದಿರುವ ಮಾಹಿತಿ ಪ್ರಕಾರ ಎನ್ ಡಿಎ ದೇಶದಲ್ಲಿ 200 ಸ್ಥಾನಗಳನ್ನೂ ಗೆಲ್ಲುವುದಿಲ್ಲ. ಕೇರಳ, ತೆಲಂಗಾಣ ಸೇರಿದಂತೆ ದಕ್ಷಿಣ ಭಾರತದಲ್ಲಿ ಒಂದಂಕಿ ಸ್ಥಾನಗಳನ್ನು ಪಡೆಯುತ್ತಾರೆ.**

ಅಂತರಾಳದಿಂದ.. EDITORIAL

# ಮಣಿಪುರದಲ್ಲಿ ಸೂಕ್ಷ್ಮ ಪರಿಸ್ಥಿತಿ
## ಟೊಳ್ಳಾಗಿ ಕಾಣುತ್ತಿರುವ ಪ್ರಧಾನಿ ಮಾತು

ಮಣಿಪುರದ ಪರಿಸ್ಥಿತಿಯನ್ನು ಪ್ರಧಾನಿ ನರೇಂದ್ರ ಮೋದಿ ಅವರು ಸರಿಯಾಗಿ ಅರ್ಥ ಮಾಡಿಕೊಂಡಿಲ್ಲ. ಅಲ್ಲಿನ ಪರಿಸ್ಥಿತಿಯ ವಿಚಾರವಾಗಿ ತಮ್ಮ ಮಾತು ಅಥವಾ ಮೌನದ ಮೂಲಕ ಸರಿಯಾಗಿ ಸ್ಪಂದಿಸಿಯೂ ಇಲ್ಲ. ಕಳೆದ ಒಂದು ವರ್ಷದ ಅವಧಿಯಲ್ಲಿ, ರಾಜ್ಯದಲ್ಲಿ ದಳ್ಳುರಿ ತೀವ್ರವಾಗಿದ್ದಾಗ, ಮೋದಿ ಅವರು ಅದರ ವಿಚಾರದಲ್ಲಿ ಮೌನವಾಗಿ ಇದ್ದರು.

ಆದರೆ ಅದು ಇನ್ನೂ ಆಗಿಲ್ಲ. ಹೀಗಿದ್ದರೂ. ಕೇಂದ್ರ ಸರ್ಕಾರವು ಸಕಾಲದಲ್ಲಿ ಮಧ್ಯಪ್ರವೇಶಿಸಿದ್ದರಿಂದಾಗಿ ಹಾಗೂ ರಾಜ್ಯ ಸರ್ಕಾರವು ಕೈಗೊಂಡ ಕ್ರಮಗಳ ಕಾರಣದಿಂದಾಗಿ ರಾಜ್ಯದ ಪರಿಸ್ಥಿತಿಯಲ್ಲಿ ಗಣನೀಯ ಸುಧಾರಣೆ ಆಗಿದೆ ಎಂದು ಮೋದಿ ಅವರು ಕಳೆದ ವಾರ ಹೇಳಿದ್ದಾರೆ. ಈ ಎರಡೂ ಸಂದರ್ಭಗಳಲ್ಲಿ ಮೋದಿ ಅವರು ಆಡಿದ ಮಾತುಗಳು ಟೊಳ್ಳಾಗಿದ್ದಂತೆ ಕಾಣುತ್ತಿವೆ.ಬಿರೇನ್ ಸಿಂಗ್ ನೇತೃತ್ವದ ರಾಜ್ಯ ಸರ್ಕಾರವೇ ಅಲ್ಲಿನ ಸಮಸ್ಯೆಯ ಒಂದು ಭಾಗವಾಗಿರುವಂತಿದೆ.

ಆ ಸರ್ಕಾರವು ಮೈತೇಯಿ ಸಮುದಾಯದ ಪಕ್ಷಪಾತಿಯಾಗಿ ನಡೆದುಕೊಳ್ಳುತ್ತಿರುವಂತಿದೆ. ಸರ್ಕಾರದ ನಿರ್ಧಾರಗಳು ಹಾಗೂ ಕೈಗೊಂಡ ಕ್ರಮಗಳು ಪರಿಸ್ಥಿತಿಯು ಹದಗೆಡುವಂತೆ ಮಾಡುತ್ತಿವೆ. ರಾಜ್ಯವು ಈಗ ಮೈತೇಯಿ ಹಾಗೂ ಕುಕಿ ಸಮುದಾಯಗಳ ನಡುವೆ ವಿಭಜನೆಗೊಂಡಿದೆ. ಕುಕಿ ಸಮುದಾಯವು ಸರ್ಕಾರದ ಮೇಲಿನ ನಂಬಿಕೆಯನ್ನು ಸಂಪೂರ್ಣವಾಗಿ ಕಳೆದುಕೊಂಡಿದೆ. ಬಿರೇನ್ ಸಿಂಗ್ ಹೇಳಿಕೆಗಳು ಹಲವು ಸಂದರ್ಭಗಳಲ್ಲಿ ರಾಜ್ಯದ ಪರಿಸ್ಥಿತಿಯನ್ನು ಉದ್ವಿಗ್ನಗೊಳಿಸಿವೆ.


ಉದಯವಾಹಿನಿ ಚಿತ್ರ

ಹೀಗಾಗಿ, ರಾಜ್ಯ ಸರ್ಕಾರದ ಯತ್ನಗಳು ಪರಿಸ್ಥಿತಿಯನ್ನು ಸುಧಾರಿಸುವಲ್ಲಿ ನೆರವಾಗಿವೆ ಎಂದು ಹೇಳುವುದಕ್ಕೆ ಕಾರಣಗಳೇ ಇಲ್ಲ. ಕೇಂದ್ರ ಸರ್ಕಾರವು ಸಕಾಲದಲ್ಲಿ ಮಧ್ಯಪ್ರವೇಶ ಮಾಡಿತು. ಅದರಿಂದಾಗಿ ಪ್ರಯೋಜನ ಆಯಿತು ಎಂದು ಹೇಳುವುದಕ್ಕೂ ಆಧಾರಗಳು ಇಲ್ಲ. ಪರಿಸ್ಥಿತಿಯನ್ನು ನಿಭಾಯಿಸಲು ಕೇಂದ್ರ ಸರ್ಕಾರವು ಮಧ್ಯಪ್ರವೇಶ ಮಾಡಲಿಲ್ಲ. ಸಕಾಲಿಕವಾಗಿ ಯಾವ ಕ್ರಮವನ್ನೂ ತೆಗೆದುಕೊಳ್ಳಲಿಲ್ಲ ಎಂಬುದೇ ಕೇಂದ್ರದ ವಿರುದ್ಧ ಇರುವ ಪ್ರಮುಖ ಆರೋಪ. ರಾಜ್ಯದಲ್ಲಿ ಧ್ರುವೀಕರಣವು ಹೆಚ್ಚಾಗಬೇಕು ಎಂದು ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರ ಬಯಸಿದ್ದವು ಎಂಬ ಆರೋಪಗಳಿವೆ. ಮಣಿಪುರವು ಈಗ ಇಂತಹ ಧ್ರುವೀಕರಣದ ಪ್ರಯೋಗ ಶಾಲೆಯಂತೆ ಆಗಿರುವುದು ನಿಜವೂ ಹೌದು. ಉದ್ದೇಶಪೂರ್ವಕವೋ ಅಥವಾ ಅಲ್ಲವೋ, ನಿಷ್ಕ್ರಿಯತೆ ಅಥವಾ ತಪ್ಪು ಹೆಜ್ಜೆಗಳು ಈ ರೀತಿಯ ಪರಿಣಾಮವನ್ನು ಉಂಟುಮಾಡಿವೆ. ಅಲ್ಲಿನ ಧ್ರುವೀಕರಣವು ಜಾಸ್ತಿಯಾಗಿದೆ.

> ಎರಡು ಸಂದರ್ಭಗಳಲ್ಲಿ ಅದರ ಬಗ್ಗೆ ಮಾತನಾಡಿದಾಗ, ಆ ಮಾತುಗಳು ಸರಿಯಾದ ಬಗೆಯಲ್ಲಿ ಇರಲಿಲ್ಲ. ಮಣಿಪುರದಲ್ಲಿ ಹಿಂಸಾಚಾರ ಶುರುವಾದ ತಿಂಗಳುಗಳ ನಂತರ. ಮೋದಿ ಅವರು ಸಂಸತ್ತಿನಲ್ಲಿ ಆ ಬಗ್ಗೆ ಮಾತನಾಡಲೇಬೇಕಾಯಿತು. ಅಂದರೆ, ವಿರೋಧ ಪಕ್ಷಗಳು ಮಂಡಿಸಿದ ಅವಿಶ್ವಾಸ ನಿರ್ಣಯದ ಮೇಲಿನ ಚರ್ಚೆಗೆ ಉತ್ತರವಾಗಿ ಅವರು ಮಾತನಾಡಬೇಕಾಯಿತು. ಆಗ ಅವರು ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರವು ಶಾಂತಿಯ ಮರುಸ್ಥಾಪನೆಗೆ ಕೆಲಸ ಮಾಡುತ್ತಿವೆ ಎಂದು ಹೇಳಿದ್ದರು. ಮಣಿಪುರದಲ್ಲಿ ಶಾಂತಿ ಮರುಸ್ಥಾಪನೆಯ ಕೆಲಸವು ಬಹುಬೇಗ ಆಗುತ್ತದೆ ಎಂದು ಅವರು ಭರವಸೆ ನೀಡಿದ್ದರು.

ಪ್ರಧಾನಿಯವರು ಈ ರೀತಿಯಲ್ಲಿ ಹೇಳಿದ ಸಂದರ್ಭದಲ್ಲಿಯೇ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಭಿನ್ನವಾದ ಮಾತುಗಳನ್ನು ಆಡಿದ್ದಾರೆ. ಕೇಂದ್ರದಲ್ಲಿ ಮುಂದೆ ರಚನೆ ಆಗುವ ಸರ್ಕಾರದ ಆದ್ಯತೆಯ ಕೆಲಸ' ಮಣಿಪುರದಲ್ಲಿ ಮಾತುಕತೆ ಮೂಲಕ ಶಾಂತಿಯನ್ನು ಸ್ಥಾಪಿಸುವುದು ಎಂದು ಶಾ ಅವರು ಹೇಳಿದ್ದಾರೆ.

ಕೇಂದ್ರದಲ್ಲಿ ಮುಂದೆ ರಚನೆ ಆಗುವುದು ಮೋದಿ ನೇತೃತ್ವದ ಸರ್ಕಾರವೇ ಎಂಬುದು ಶಾ ಅವರ ನಂಬಿಕೆ.

ಅಂದರೆ, ರಾಜ್ಯದಲ್ಲಿ ಪರಿಸ್ಥಿತಿಯು ಸಹಜವಾಗಿ ಇಲ್ಲ, ಅಲ್ಲಿ ಶಾಂತಿಯನ್ನು ಮರುಸ್ಥಾಪಿಸುವ ಅಗತ್ಯ ಇದೆ ಎಂಬುದು ಶಾ ಅವರ ಮಾತಿನಲ್ಲೇ ಗೊತ್ತಾಗುತ್ತಿದೆ. ಇಲ್ಲಿ ಮೂಡುವ ಪ್ರಶ್ನೆಯೊಂದಿದೆ: ಸರ್ಕಾರವು ಮಾತುಕತೆ ಹಾಗೂ ಸಂವಾದಗಳ ಮೂಲಕ ಅಲ್ಲಿ ಶಾಂತಿ ಮರುಸ್ಥಾಪಿಸುವುದನ್ನು ಆದ್ಯತೆಯ ಕೆಲಸವನ್ನಾಗಿ ಇಷ್ಟು ದಿನ ಏಕೆ ಪರಿಗಣಿಸಿರಲಿಲ್ಲ? ರಾಜ್ಯವು ಮೈತೇಯಿ ಸಮುದಾಯದ ಪ್ರಾಬಲ್ಯವಿರುವ ಬಯಲು ಪ್ರದೇಶಗಳು ಹಾಗೂ ಕುಕಿ ಸಮುದಾಯದ ಪ್ರಾಬಲ್ಯವಿರುವ ಗುಡ್ಡಗಾಡು ಪ್ರದೇಶಗಳ ನಡುವೆ ವಿಭಜನೆ ಆಗಿಬಿಟ್ಟಿದೆ. ಸರ್ಕಾರವು ಮೈಮರೆವಿನ ಕಾರಣದಿಂದ ಹಾಗೂ ಕೆಲವು ನಡೆಗಳ ಕಾರಣದಿಂದ ಈ ಪರಿಸ್ಥಿತಿಯನ್ನು ತಂದಿರಿಸಿದೆ. ಅಲ್ಲಿ ಹಿಂಸಾಚಾರ ಮುಂದುವರಿದಿದೆ.

# ಮಹಾಭಾರತ
## ದ್ರೋಣಪರ್ವ



• ಹಿಂದಿನ ಸಂಚಿಕೆಯಿಂದ

ಏನೂ ಮಾಡಲಾಗದ ಪಾಂಡವರಿಗೆ ಪ್ರಸಂಗದ ಭೀಕರತೆಯ ಅರಿವಾಗಿ ಮಹಾಭಯವು ತಲೆದೋರಿತು. ಮಗುವನ್ನು ವ್ಯೂಹದೊಳಕ್ಕೆ ಕಳುಹಿಸಿದುದಕ್ಕಾಗಿ ಯುಧಿಷ್ಠಿರನು ತನ್ನನ್ನು ತಾನೇ ಶಪಿಸಿಕೊಳ್ಳುವಂತಾಯಿತು. ಈ ವೀರರೆಲ್ಲರನ್ನು ನಂಬಿ ಅವನು ಮೃತ್ಯುವಿನ ಬಾಯೊಳಕ್ಕೇ ಹೋದಂತಾಯಿತು; ಇವರೆಲ್ಲ ಈಗ ಹೊರಗೇ ಉಳಿದರು, ಅದೂ ಜಯದ್ರಥನಂಥವನಿಂದ ಸೋತು! ''ನೀನು ಒಮ್ಮೆ ವ್ಯೂಹದೊಳಕ್ಕೆ ದಾರಿ ಮಾಡಿ ಕೊಡು, ಅನಂತರ ಕ್ಷಣಮಾತ್ರದಲ್ಲಿ ನಾವು ಒಳನುಗ್ಗಿ ವ್ಯೂಹವನ್ನು ನುಚ್ಚುನೂರು ಮಾಡಿಬಿಡುತ್ತೇವೆ ಎಂದಿದ್ದನು ಭೀಮ. ಈಗ ಅವನು ಯುಧಿಷ್ಠಿರನನ್ನು ಅದೆಂತಹ ದೈನ್ಯದೃಷ್ಟಿಯಿಂದ ನೋಡಿದನೆಂದರೆ, ಅಂತರಿಕ್ಷದಲ್ಲಿದ್ದ ದೇವತೆಗಳಿಗೂ ಅಳು ಬರುವಂತಾಯಿತು.

ವ್ಯೂಹದೊಳಗೆ ಅಭಿಮನ್ಯುವು ತನ್ನ ಅವಿರತ ವಿನಾಶಕಾರ್ಯವನ್ನು ನಡೆಸಿದ್ದ. ಕೌರವರ ಕಡೆ ಸೈನ್ಯಕ್ಕೆ ಲೆಕ್ಕಕ್ಕೆ ಸಿಕ್ಕದಷ್ಟು ನಷ್ಟವುಂಟಾಗಿತ್ತು. ದುರ್ಯೋಧನನು ತುಂಬ ಹತಾಶನಾಗಿದ್ದನು. ಶಲ್ಯನ ಮಗ ರುಕ್ಮರಥ ಅಭಿಮನ್ಯುವನ್ನೆದುರಿಸಿ ಸ್ವಲ್ಪಹೊತ್ತು ಯುದ್ಧಮಾಡಿ ಸತ್ತನು. ಶಲ್ಯನ ಇತರ ಮಕ್ಕಳು ಬಂದರು. ಅಭಿಮನ್ಯುವಿನ ಬಾಣಗಳನ್ನು ತಡೆಯಲಾರದೆ ಮೂರ್ಛಿತರಾದ ಅವರನ್ನೆಲ್ಲ ರಂಗದಿಂದ ಹೊರಕ್ಕೆ ತೆಗೆದುಕೊಂಡು ಹೋಗಲಾಯಿತು. ಎದುರಿಸಿದವನು ಇಲ್ಲವೇ ಸಾಯಬೇಕು, ಇಲ್ಲವೇ ಪಲಾಯನ ಮಾಡಬೇಕು. ಯುದ್ಧಕ್ಕೆ ಬಂದ ಲಕ್ಷಣಕುಮಾರನು ಸ್ವಲ್ಪ ಹೊತ್ತಿನಲ್ಲಿ ದುರ್ಯೋಧನನೆದುರಿಗೇ ಸಾವನ್ನಪ್ಪಿದನು. ಇದನ್ನು ನೋಡಿ ಆಘಾತವಾದ ದುರ್ಯೋಧನನು ದುಃಖದಿಂದ, ''ಈ ಪಾಪಿಯನ್ನು ಕೊಲ್ಲಿ! ಎಂದು ಕೂಗಿದನು. ಆಗ ಆ ಭಯಾನಕವೂ ಕ್ರೂರವೂ ಆದ ದುರಂತವು ಸಂಭವಿಸಿತು: ದ್ರೋಣ, ಕೃಪ, ಅಶ್ವತ್ಥಾಮ, ರಾಧೇಯ, ಬೃಹದ್ಬಲ ಮತ್ತು ಕೃತವರ್ಮ–ಈ ಆರು ಜನ ಅದರಲ್ಲಿ ಭಾಗಿಗಳಾದರು. ಅಭಿಮನ್ಯುವು ಈ ಆರು ಜನರನ್ನೂ ಎದುರಿಸಿದುದಲ್ಲದೆ ಜೊತೆಗೆ ಜಯದ್ರಥನನ್ನೂ ಘಾತಿಸಿದನು. ಜಯದ್ರಥನಿಂದಾಗಿ ಪಾಂಡವರಾರೂ ಒಳಕ್ಕೆ ಬರಲಾಗಲಿಲ್ಲವೆಂದು ಅವನಿಗೆ ಬಹುಶಃ ಗೊತ್ತಾಗಿರಬೇಕು. ಹೊರಕ್ಕೆ ಹೋಗುವ ಬಗೆ ತಿಳಿಯಲಿಲ್ಲ. ಇಡೀ ವ್ಯೂಹವನ್ನು ನಾಶಮಾಡಿಬಿಡುವುದಾದರೆ ಆ ಸಮಸ್ಯೆಯೇ ಇರುವುದಿಲ್ಲ! ಜಯದ್ರಥನೊಂದಿಗೆ ಘೋರವಾಗಿ ಹೋರಾಡಿದನು. ಇವನೊಬ್ಬನನ್ನು ಸೋಲಿಸಿದರೆ ಪಾಂಡವರು ಒಳಗೆ ಬರಬಹುದು. ಆದರೆ ಅವನು ಆನೆಗಳ ಸಮೂಹವನ್ನೇ ಅಲ್ಲಿ ತಂದು ದಾರಿಯನ್ನು ಮುಚ್ಚಿಬಿಟ್ಟಿದ್ದನು. ಅಭಿಮನ್ಯುವು ಈಗ ಆರು ಮಹಾರಥಿಕರೊಡನೆ ಒಬ್ಬನೇ ಹೋರಾಡಬೇಕಾಯಿತು. ಅವರೆಲ್ಲರನ್ನೂ ಸೋಲಿಸಿ ಹಿಮ್ಮೆಟ್ಟುವಂತೆ ಮಾಡಿದನು. ಬೃಹದ್ಬಲನ ಹೃದಯವನ್ನು ಚೂಪಾದ ಒಂದೇ ಬಾಣದಿಂದ ಭೇದಿಸಲು, ಅವನು ಸತ್ತು ಉರುಳಿದನು. ರಾಧೇಯನ ಮೈಯೆಲ್ಲ ರಕ್ತಸಿಕ್ತವಾಯಿತು. ದುಶ್ಶಾಸನನ ಮಗ ಮುಂದೆ ಬರಲು ಅಭಿಮನ್ಯುವು, ''ಹೆದರಿ ಓಡಿದ ಹೇಡಿ ಆ ನಿಮ್ಮಪ್ಪನಿಗಿಂತ ನೀನೇ ವಾಸಿ. ಬಾ ಸೆಣೆಸೋಣ ಎಂದನು. ಅಷ್ಟರಲ್ಲಿ ಅಶ್ವತ್ಥಾಮನೂ ಅಲ್ಲಿಗೆ ಬಂದನು. ಶಕುನಿಯು ರಾಜನ ಬಳಿ ಬಂದು, ''ಈ ಹುಡುಗನನ್ನು ನಿಯಂತ್ರಿಸುವುದಾಗಲಿ ಕೊಲ್ಲುವುದಾಗಲಿ ಸಾಧ್ಯವಾಗುತ್ತಿಲ್ಲ. ಅವನನ್ನು ಕೊಲ್ಲಲ್ಲೇ ಬೇಕು; ನಾವೆಲ್ಲರೂ ಒಟ್ಟಾಗಿ ಸೇರಿ ಕೊಲ್ಲೋಣ ಎಂದನು.

ಮುಂದುವರಿಯುವುದು...

# ಸಂಸ್ಕೃತಿ ಭಾರತೀಯರ ಅಸ್ಮಿತೆ, ಹೊರಗಿನಿಂದ ಬರುವ ಕಲಿಕೆಯಲ್ಲ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

**ಸಿಬ್ಬಂದಿ ವರ್ಗಕ್ಕೆ ಅಭಿನಂದನಾ ಸಮಾರಂಭ**

ಸಂಸ್ಕೃತಿಯು ಭಾರತೀಯರ ಅಸ್ಮಿತೆ, ಅದು ಹೊರಗಿನಿಂದ ಬರುವ ಕಲಿಕೆಯಲ್ಲ ಅಂತರಂಗದ ಸಂಸ್ಕಾರ ಎಂಬುದಾಗಿ ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪಿಠಾಧ್ಯಕ್ಷರಾದ ಪರಮ ಪೂಜ್ಯ ಜಗದ್ಗುರು ಶ್ರೀ ಶ್ರೀ ಶ್ರೀ ನಿರ್ಮಲಾನಂದನಾಥ ಮಹಾ ಸ್ವಾಮಿಗಳವರು ದಿವ್ಯಸಾನಿಧ್ಯವಹಿಸಿ ಆಶೀರ್ವಚನ ನೀಡಿದರು.

ದಿನಾಂಕ:18.04.2024 ರಂದು ಗುರುವಾರ ಸಂಜೆ 5.00 ಗಂಟೆಗೆ ಶೇಷಾದ್ರಿಪುರಂ ಶಿಕ್ಷಣ ದತ್ತಿಯ ವತಿಯಿಂದ ಶೇಷಾದ್ರಿಪುರಂ ಸಂಜೆ ಕಾಲೇಜು 2023-24 ನೇ ಶೈಕ್ಷಣಿಕ ವರ್ಷದಲ್ಲಿ ಓಂಂಅ (ರಾಷ್ಟ್ರೀಯ ಮೌಲ್ಯಮಾಪನ ಮತ್ತು ಮಾನ್ಯತಾ ಮಂಡಳಿ)ಯಿಂದ ಶ್ರೇಣಿ ಮಾನ್ಯತೆ ಪಡೆದಿದ್ದು, ನ್ಯಾಕ್‌ನ ವೆಬ್ ಸೈಟ್ ನ ಪ್ರಕಾರ ಭಾರತದಲ್ಲಿ ಶ್ರೇಣಿ ಪಡೆದ ಎರಡನೇ ಸಂಯೋಜಿತ ಸಂಜೆ ಕಾಲೇಜು ಹಾಗೂ ದಕ್ಷಿಣ ಭಾರತದಲ್ಲಿಂ ಶ್ರೇಣಿ ಪಡೆದ ಮೊದಲ ಸಂಯೋಜಿತ ಸಂಜೆ ಕಾಲೇಜು ಎಂಬ ಪ್ರಶಂಸೆಗೆ ಪಾತ್ರವಾಗಿದೆ. ಈ ಶುಭ ಸಂದರ್ಭದಲ್ಲಿ ಶೇಷಾದ್ರಿಪುರಂ ಸಂಜೆ ಕಾಲೇಜಿನ ಪ್ರಾಂಶುಪಾಲರು ಸಿಬ್ಬಂದಿ ವರ್ಗಕ್ಕೆ ಅಭಿನಂದನಾ ಸಮಾರಂಭವನ್ನು ಶೇಷಾದ್ರಿಪುರಂ ಶಿಕ್ಷಣದತ್ತಿ ಸಭಾಂಗಣದಲ್ಲಿ ಶೇಷಾದ್ರಿಪುರಂ ಶಿಕ್ಷಣ ದತ್ತಿಯ ವತಿಯಿಂದ ಆಯೋಜಿಸಲಾಗಿತ್ತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶೇಷಾದ್ರಿಪುರಂ ಶಿಕ್ಷಣ ದತ್ತಿಯ ಅಧ್ಯಕ್ಷರಾದ ಶ್ರೀ ಎನ್.ಆರ್.ಪಂಡಿತಾರಾಧ್ಯ ಮಾತನಾಡಿ ಭಾರತೀಯರಾದ ನಮಗೆ ಸಂಸ್ಕೃತಿ ವಿದ್ಯಾರ್ಥಿಗಳ ವ್ಯಕ್ತಿತ್ವ ಮತ್ತು ಹೆಗ್ಗುರುತು ಎಂದು ಹೇಳಿದರು ಈ ಸಮಾರಂಭದಲ್ಲಿ ಶೇಷಾದ್ರಿಪುರಂ ಸಂಜೆ ಕಾಲೇಜು ಶ್ರೇಣಿ ಮಾನ್ಯತೆ ಪಡೆಯಲು ಶ್ರಮಿಸಿದ ಕಾಲೇಜಿನ ಆಡಳಿತ ಮಂಡಳಿಯ ಪ್ರತಿನಿಧಿಗಳು ಹಾಗೂ ಶೇಷಾದ್ರಿಪುರಂ ಶಿಕ್ಷಣ ದತ್ತಿಯ ಧರ್ಮದರ್ಶಿಗಳೂ ಆದ ಶ್ರೀ ಡಬ್ಲ್ಯು ಡಿ ಅಶೋಕ್ ಅವರಿಗೆ ಕ್ರಿಯಾಶೀಲ ಪ್ರಾಂಶುಪಾಲರಾದ ಡಾ.ಎನ್.ಎಸ್. ಸತೀಶ್ ಅವರಿಗೆ ಮತ್ತು ಆಂತರಿಕ ಗುಣಮಟ್ಟ ಭರವಸೆ ಕೋಶ ಸಂಯೋಜಕರಾದ ಶ್ರೀಮತಿ ನಾಗಸುಧಾ ಆರ್ ಇವರುಗಳಿಗೆ ಸನ್ಮಾನ ನೆರವೇರಿಸಲಾಯಿತು ಹಾಗೂ ಸಮಸ್ತ ಸಿಬ್ಬಂದಿವರ್ಗಕ್ಕೆ ಅಭಿನಂದನೆಗಳನ್ನು ಸಲ್ಲಿಸಲಾಯಿತು.

> **ಶೇಷಾದ್ರಿಪುರಂ ಶಿಕ್ಷಣ ದತ್ತಿಯ ಗೌರವ ಪ್ರಧಾನ ಕಾರ್ಯದರ್ಶಿಗಳಾದ ಶಿಕ್ಷಣ ತಜ್ಞ ನಾಡೋಜ ಡಾ.ವೂಡೇ ಪಿ. ಕೃಷ್ಣ ಮಾತನಾಡಿ ಶಿಕ್ಷಣ ಮತ್ತು ಸಂಸ್ಕಾರ ಶೇಷಾದ್ರಿಪುರಂ ಶಿಕ್ಷಣ ಸಂಸ್ಥೆಗಳ ತಳಹದಿ ಪ್ರಪಂಚದಾದ್ಯಂತ ಇರುವ ಸಾವಿರಾರು ವಿದ್ಯಾರ್ಥಿಗಳು ವಿವೇಕಯುತ ಜೀವನ ಕಟ್ಟಿಕೊಳ್ಳಲು ನಮ್ಮ ಶೇಷಾದ್ರಿಪುರಂ ಶಿಕ್ಷಣ ಸಂಸ್ಥೆ ಅವಿರತವಾಗಿ ಶ್ರಮಿಸಿದೆ, ನಮ್ಮ ಸಂಜೆ ಕಾಲೇಜಿನ ಸಾಧನೆ ರಾಷ್ಟ್ರಮಟ್ಟದಲ್ಲಿ ಗುರುತಿಸುವಂತಾಗಿದೆ ಈ ಸಾಧನೆಗೆ ಶೇಷಾದ್ರಿಪುರಂ ಸಂಜೆ ಕಾಲೇಜಿನ ಪ್ರಾಂಶುಪಾಲರಿಗೆ ಹಾಗೂ ಎಲ್ಲಾ ಸಿಬ್ಬಂದಿ ವರ್ಗದವರಿಗೆ ಅಭಿನಂದನೆಗಳನ್ನು ತಿಳಿಸಿದರು.**

ಈ ಸಂದರ್ಭದಲ್ಲಿ ಶೇಷಾದ್ರಿಪುರಂ ಶಿಕ್ಷಣ ದತ್ತಿಯ ಉಪಾಧ್ಯಕ್ಷರಾದ ಟಿ.ಎಸ್.ಹೆಂಜಾರಪ್ಪ, ಉಪಾಧ್ಯಕ್ಷರಾದ ಡಬ್ಲ್ಯು.ಹೆಚ್.ಅನಿಲ್ ಕುಮಾರ್, ಗೌರವ ಖಜಾಂಚಿಗಳಾದ ಬಿ.ಎಂ.ಪಾರ್ಥಸಾರಥಿ, ಗೌರವ ಜಂಟಿ ಕಾರ್ಯದರ್ಶಿಗಳಾದ ಎಸ್.ಶೇಷನಾರಾಯಣ, ಗೌರವ ಸಹಾಯಕ ಕಾರ್ಯದರ್ಶಿಗಳಾದ ಎಂ.ಎಸ್. ನಟರಾಜ್, ಪಿ.ಸಿ.ನಾರಾಯಣ ಅಧ್ಯಕ್ಷರು, ಆಡಳಿತ ಸಲಹಾ ಮಂಡಳಿ ಶೇಷಾದ್ರಿಪುರಂ ಸಂಜೆ ಕಾಲೇಜು ಸೇರಿದಂತೆ ಎಲ್ಲರೂ ಭಾಗವಹಿಸಿದ್ದರು.

ಬಿಬಿಎ ವಿಭಾಗದ ಸಂಯೋಜಕರಾದ ಶ್ರೀ ವಿನಯ್ ಸಾಗರ್ ಎಲ್.ಎಸ್. ಕಾರ್ಯಕ್ರಮವನ್ನು ನಿರೂಪಿಸಿದರು, ಆಂಗ್ಲ ಭಾಷಾ ವಿಭಾಗದ ಮುಖ್ಯಸ್ಥರಾದ ಶ್ರೀ ಧರೆಪ್ಪ ಕೊನ್ನೂರ್ ಅವರು ಕಾರ್ಯಕ್ರಮಕ್ಕೆ ವಂದನೆಗಳನ್ನು ಸಲ್ಲಿಸಿದರು.

# ಬಿಯಾಂಡ್ ಬೌಂಡರೀಸ್ ಆಯೋಜಿಸಲು ಕುತೂಹಲ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಾದ್ಯಂತ ಇರುವ ಇಂಜಿನಿಯರಿಂಗ್ ವಿದ್ಯಾರ್ಥಿಗಳು ಬಹು ನಿರೀಕ್ಷಿತ ಪ್ರಾಜೆಕ್ಟ್ ಎಕ್ಸ್ ಪೋ 2024ಅನ್ನು ಎಂವಿಜೆ ಕಾಲೇಜ್ ಆಫ್ ಇಂಜಿನಿಯರಿಂಗ್ ಬೆಂಗಳೂರು ಏಪ್ರಿಲ್ 27 ರಂದು ತಮ್ಮ ಆವರಣದಲ್ಲಿ ಆಯೋಜಿಸಲು ಕುತೂಹಲದಿಂದ ನಿರೀಕ್ಷಿಸುತ್ತಿದ್ದಾರೆ.

ಈ ಎಕ್ಸ್‌ಪೋಗೆ ಆಯ್ಕೆ ಮಾಡಲಾದ ವಿಷಯವೆಂದರೆ ಇನ್ನೋವೇಟಿವ್ ಇಂಜಿನಿಯರಿಂಗ್ ಸೊಲ್ಯೂಷನ್ಸ್ ಬಿಯಾಂಡ್ ಬೌಂಡರೀಸ್ ಇದು ತಂತ್ರಜ್ಞಾನ ಕ್ಷೇತ್ರಗಳಲ್ಲಿನ ಯುವ ಮನಸ್ಸುಗಳನ್ನು ಪ್ರಚೋದಿಸುವ, ವಿದ್ಯಾರ್ಥಿಗಳಿಗೆ ತಮ್ಮ ಆಲೋಚನೆಗಳನ್ನು ನವೀನ ಯೋಜನೆಗಳಾಗಿ ಅಥವಾ ಮೂಲಮಾದರಿಗಳಾಗಿ ಪರಿವರ್ತಿಸಲು ತಮ್ಮ ಸಾಮರ್ಥ್ಯವನ್ನು ಅನಾವರಣಗೊಳಿಸಲು ಅವಕಾಶವನ್ನು ಒದಗಿಸುವ ಮುಖ್ಯ ಉದ್ದೇಶವಾಗಿದೆ. ಪ್ರಾಜೆಕ್ಟ್ ಎಕ್ಸ್‌ಪೋ 2024ರಲ್ಲಿ ಆಯ್ಕೆಯಾದ ಉತ್ತಮ ಯೋಜನೆಗಳಿಗೆ ರೂ 2,00,000/- ಮೌಲ್ಯದ ಆಕರ್ಷಕ ನಗದು ಬಹುಮಾನಗಳನ್ನು ನೀಡಲಾಗುವುದು.

ಪ್ರಾಜೆಕ್ಟ್ ಎಕ್ಸ್‌ಪೋ 2024ರ ವಿಜೇತರಿಗೆ ಪ್ರಥಮ ಬಹುಮಾನ ರೂ. 30,000, ದ್ವಿತೀಯ ಬಹುಮಾನ 20,000 ರೂ., ತೃತೀಯ ಬಹುಮಾನ ರೂ 10,000/ ಮತ್ತು ಪ್ರತಿ ಸ್ಟ್ರೀಮ್‌ಗೆ ರೂ. 5,000/ ವಿಶೇಷ ಸಾಮಾಜಿಕ ಪರಿಣಾಮ ಪ್ರಶಸ್ತಿ, ಫ್ಯೂಚರಿಸ್ಟಿಕ್ ಟೆಕ್ನಾಲಜಿ ಪ್ರಶಸ್ತಿ, ಸುಸ್ಥಿರ ಪರಿಹಾರ ಪ್ರಶಸ್ತಿ ಮತ್ತು ಅತ್ಯುತ್ತಮ ಆವಿಷ್ಕಾರ (ಇನ್ನೋವೇಶನ್) ಪ್ರಶಸ್ತಿಗಳನ್ನು ನೀಡಲಾಗುತ್ತದೆ.

ಎಂವಿಜೆ ಕಾಲೇಜ್ ಆಫ್ ಇಂಜಿನಿಯರಿಂಗ್ ಆಯೋಜಿಸಿರುವ ಈ ಪ್ರಾಜೆಕ್ಟ್ ಎಕ್ಸ್‌ಪೋ 2024 ಅನ್ನು ಭಾರತದ ಬಾಹ್ಯಾಕಾಶ ಪರಿಶೋಧನಾ ಪ್ರಯತ್ನಗಳಿಗೆ ಅಮೂಲ್ಯ ಕೊಡುಗೆಗಳನ್ನು ನೀಡಿದ ಇಸ್ರೋ ಅಧ್ಯಕ್ಷರಾದ ಶ್ರೀ ಎಸ್. ಸೋಮನಾಥ್ ಅವರು ಮುಖ್ಯ ಅತಿಥಿಗಳಾಗಿ ಉದ್ಘಾಟಿಸುವರು. ಅವರ ಪರಿಣತಿ ಮತ್ತು ನಾಯಕತ್ವವು ಚಂದ್ರಯಾನ-3 ಮತ್ತು ಆದಿತ್ಯ L1 ಮಿಷನ್‌ಗಳ ಯಶಸ್ಸಿನಲ್ಲಿ ಪ್ರಮುಖ ಪಾತ್ರ ವಹಿಸಿತು, ಇದು ನಮ್ಮ ವೈಜ್ಞಾನಿಕ ಜ್ಞಾನವನ್ನು ಹೆಚ್ಚಿಸಿತು ಮಾತ್ರವಲ್ಲದೆ ಜಾಗತಿಕ ಬಾಹ್ಯಾಕಾಶ ಸಮುದಾಯದಲ್ಲಿ ಭಾರತದ ಸ್ಥಾನಮಾನವನ್ನು ಹೆಚ್ಚಿಸಿತು.

# ಬೆಂಗಳೂರು, ಚಿಕ್ಕಬಳ್ಳಾಪುರದಲ್ಲಿ ಭರ್ಜರಿ ಪ್ರಚಾರ

• ಉದಯವಾಹಿನಿ, ಬೆಂಗಳೂರು



ಪ್ರಧಾನಿ ಮೋದಿ ಏ.20ರಂದು ರಾಜ್ಯದಲ್ಲಿ ಲೋಕಸಭೆ ಚುನಾವಣೆ ಪ್ರಚಾರ ಕೈಗೊಂಡಿದ್ದಾರೆ. ಬೆಂಗಳೂರು ಮತ್ತು ಚಿಕ್ಕಬಳ್ಳಾಪುರದಲ್ಲಿ ನಡೆಯುವ ಸಮಾವೇಶದಲ್ಲಿ ಭಾಗವಹಿಸಿ ಎನ್.ಡಿ.ಎ. ಅಭ್ಯರ್ಥಿಗಳ ಪರ ಮತ ಯಾಚಿಸಲಿದ್ದಾರೆ. ಮಧ್ಯಾಹ್ನ 3:30ಕ್ಕೆ ಚಿಕ್ಕಬಳ್ಳಾಪುರಕ್ಕೆ ಪ್ರಧಾನಿ ಮೋದಿ ಆಗಮಿಸಲಿದ್ದಾರೆ. ದೇವನಹಳ್ಳಿ ಕೆಂಪೇಗೌಡ ಅಂತರ ರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಹೆಲಿಕಾಪ್ಟರ್‌ನಲ್ಲಿ ಆಗಮಿಸಲಿರುವ ಅವರು ಮಧ್ಯಾಹ್ನ 3.30 ರಿಂದ 4:30ರ ವರೆಗೆ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ.

ಚಿಕ್ಕಬಳ್ಳಾಪುರ ಮತ್ತು ಕೋಲಾರ ಕ್ಷೇತ್ರಗಳ ಎನ್.ಡಿ.ಎ. ಅಭ್ಯರ್ಥಿಗಳ ಪರ ಪ್ರಚಾರ ನಡೆಸಲಿದ್ದಾರೆ.

ಪ್ರಧಾನಿ ಕಾರ್ಯಕ್ರಮದಲ್ಲಿ ಮಾಜಿ ಪ್ರಧಾನಿ ದೇವೇಗೌಡರು, ಮಾಜಿ ಸಿಎಂ ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಪಕ್ಷ ನಾಯಕ ಆರ್. ಅಶೋಕ್ ಸೇರಿ ಹಲವು ನಾಯಕರು ಭಾಗವಹಿಸಲಿದ್ದಾರೆ. ಚಿಕ್ಕಬಳ್ಳಾಪುರ ತಾಲ್ಲೂಕಿನ ಅಗಲಗುರ್ಕಿ ಬಳಿ ಮೋದಿ ಕಾರ್ಯಕ್ರಮ ಆಯೋಜನೆಗೊಂಡಿದೆ. ಅಗಲಗುರ್ಕಿ ಸಮೀಪ 50 ಎಕರೆ ಜಮೀನಿನಲ್ಲಿ ಸಮಾವೇಶಕ್ಕೆ ಸಿದ್ಧತೆ ಮಾಡಿಕೊಳ್ಳಲಾಗಿದೆ. ರಾಷ್ಟ್ರೀಯ ಹೆದ್ದಾರಿ 44ಕ್ಕೆ ಹೊಂದಿಕೊಂಡಿರುವ ಪ್ರದೇಶದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದ್ದು, ವಾಹನ ಸಂಚಾರ ಮಾರ್ಗದಲ್ಲಿ ಬದಲಾವಣೆ ಮಾಡಲಾಗಿದೆ.

ಬೆಂಗಳೂರಿನ ನಾಲ್ಕು ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಸಮಾವೇಶ ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯಲಿದೆ. ಸಮಾವೇಶಕ್ಕೆ ಬರುವವರಿಗಾಗಿ 60 ಸಾವಿರಕ್ಕೂ ಅಧಿಕ ಆಸನಗಳ ವ್ಯವಸ್ಥೆ ಮಾಡಲಾಗಿದೆ. 15000 ವಿವಿಐಪಿ ಪಾಸ್ ವಿತರಣೆ ಮಾಡಲಾಗಿದೆ. ಮಹಿಳೆಯರಿಗಾಗಿ 5000 ಪಿಂಕ್ ಆಸನಗಳ ವ್ಯವಸ್ಥೆ ಮಾಡಲಾಗಿದೆ.

ಸೆಂಟ್ರಲ್, ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ, ಬೆಂಗಳೂರು ಗ್ರಾಮಾಂತರ ಕ್ಷೇತ್ರ ಅಭ್ಯರ್ಥಿಗಳ ಪರ ಮೋದಿ ಮತ ಯಾಚಿಸಲಿದ್ದಾರೆ.

# ರಾಮುವಿನ ಬದಲಾದ ಹೆಸರು



• ಉದಯವಾಹಿನಿ, ವಿಶೇಷ



ಸಾಮಾಜಿಕ ಕಳಕಳಿ
ಹೆಚ್.ಎಸ್. ಪ್ರತಿಮಾ
ಲೇಖಕರು
ಸಾಮಾಜಿಕ ಚಿಂತಕಿ ಹಾಗೂ
ಶಿಕ್ಷಕಿ, ಹಾಸನ

ಹೆಣ್ಣಾಗುವ ಅರ್ಥವನ್ನು ಅರ್ಥ ರಾಮುವಿನ ಮನಸ್ಥಿತಿ. ಒಂದು ದೃಢ ನಿರ್ಧಾರ ತೆಗೆದುಕೊಳ್ಳಬೇಕಾದಂತಹ ಗೊಂದಲ ಪರಿಸ್ಥಿತಿಯಲ್ಲಿ ಇರುತ್ತದೆ. ಅಂತಹ ಪರಿಸ್ಥಿತಿಯಲ್ಲಿ ಆತ ತೊಳಲಾಟದ ಬದುಕಿನಲ್ಲಿ ಸಿಲುಕಿದಾಗ ಒಂದು ನಿರ್ಧಾರವನ್ನು ಮಾಡಿಬಿಡುತ್ತಾನೆ. ಆತ ಪೂರ್ಣ ಹೆಣ್ಣಾಗ ಬೇಕೆಂದು ಬಯಸಿ. ನಿರ್ವಾಣಕ್ಕೆ ಸಿದ್ದನಾಗುತ್ತಾನೆ. ಆ ಪರಿಸ್ಥಿತಿಯಲ್ಲಿ ಆತನಿಗೆ ಒಂದು ಕಡೆ ಸಂತೋಷವಾದರೆ. ಮತ್ತೊಂದು ಕಡೆ ಮಾನಸಿಕ ಯಾತನೆಯಲ್ಲಿ ತೊಳಲಾಡುತ್ತಿರುತ್ತಾನೆ.

**ಬ್ರಹ್ಮ ಲಿಖಿತದಂತೆ ಹುಟ್ಟಿದೆನು**
**ಬಯಸಿ ಪಡೆದಿಲ್ಲ ಈ ಸ್ಥಾನವನು**
**ಸಮಾಜದಲ್ಲೂ ನಮಗೂ ಹಕ್ಕಿದೆ**
**ಸದಾ ಬಾಳುವ ಆಸೆಯೂ ಇದೆ**
**ಎಲ್ಲರೊಂದಿಗೆ ಹೊಂದಿಕೊಳ್ಳುತ್ತ**
**ಆಗಬೇಕಿದೆ ಸಂತೋಷದತ್ತ**
**ಪ್ರೀತಿ ಪ್ರೇಮವನು ಅರಿತಿರುವೆನು**

ದೂರ ಮಾಡಿದಿರಿ ನನ್ನನ್ನು ನಿರ್ಮಾಣಕ್ಕೆ ಸಿದ್ದನಾಗಿ.

ನಿರ್ವಾಣ ಆದ ನಂತರ ಎಲ್ಲಾ ಕಾರ್ಯಾಕ್ರಮಗಳನ್ನು ಮುಗಿಸಿ. 3 ತಿಂಗಳು ಸುಧಾರಿಸಿಕೊಂಡು ಭಿಕ್ಷಾಟಣೆ ಮಾಡಿ ಒಂದಷ್ಟು ಹಣ ಕೂಡಿಸಿ ತಂಗಿಯ ಮದುವೆಗಾಗಿ ಒಂದಷ್ಟು ಹಣ ಒಡವೆಗಳೊಂದಿಗೆ ಬಹಳಷ್ಟು ಕಷ್ಟಗಳೊಂದಿಗೆ ಊರಿಗೆ ಹಿಂದಿರುಗುತ್ತಾಳೆ.

ನಂತರ ಅಲ್ಲಿ ಜನರ ಅನಾವಶ್ಯಕ ಮಾತು, ವಿಲಕ್ಷಣ ನಡವಳಿಕೆ, ತೀಕ್ಷ್ಣ ಮಾತುಗಳು ಅವರ ಮೇಲೆ ಬಹಳ ಪರಿಣಾಮ ಬೀರುತ್ತದೆ. ಬಹಳಷ್ಟು ಜನ ಏನೋ ರಾಮು ಸೀರೆ ಹಾಕಿದಿಯಲ್ಲೋ ಏನಾಯ್ತು ನಿಂಗೆ, ಇನ್ನು ಕೆಲವರು ಸೀರೆ ಬಿಚ್ಚು ನೋಡೋಣ ಹೀಗೆ ಚುಚ್ಚು ಮಾತುಗಳನ್ನು ಹೇಳಿ ಬೇಸರವಾಗುವಂತೆ ಮಾಡುತ್ತಾರೆ. ಕಲ್ಲು ಶಿಲ್ಪಿಯ ಉಳಿ ಪೆಟ್ಟಿನಿಂದ ವಿಗ್ರಹವಾಗುವಂತೆ, ರಾಣಿ ಛಲ ಬಿಡದಂತೆ ಸಮಾಜದಲ್ಲಿ ಒಂದು ನೆಲೆಯನ್ನು ಪಡೆಯಲು ಹೋರಾಟವನ್ನು ಮಾಡುತ್ತಾರೆ. ಹಲವಾರು ಸಮಸ್ಯೆಗಳನ್ನು ಎದುರಿಸಿ ಮುನ್ನುಗ್ಗುತ್ತಾರೆ. ಅವರ ಒಳ್ಳೆಯ ನಡತೆ, ನಡುವಳಿಕೆ , ಸನ್ನಡತೆ, ಪ್ರೀತಿ ವಾತ್ಸಲ್ಯ, ಸಮಾಜ ಸೇವೆ ಹಾಗೂ ಸಾಧು ಸ್ವಭಾವವನ್ನು ಮೆಚ್ಚಿದ ಜನರು ರಾಣಿಯನ್ನು ದೇವ ಮಾನವಳಾದ ರಾಣಿಯಮ್ಮ ಎಂದು ಕರೆಯಲು ಪ್ರಾರಂಭಿಸುತ್ತಾರೆ.

ಜೀವಿಸುವುದ ಕಲಿಸಿದಿರಿ......ಈ ಕವನವು ಸೂಕ್ತವೆನ್ನಿಸುತ್ತದೆ ರಾಣಿಯಮ್ಮನಿಗೆ ಹೀಗೆ ರಾಮುವು ಚಿಕ್ಕವಯಸ್ಸಿನಿಂದಲೂ ಕಷ್ಟಪಟ್ಟು ಅವರದೇ ಸಮುದಾಯಕ್ಕೆ ಬಂದಾಗ ಅವರ ಮುಖಂಡರು ಅವರಿಗೆ ರಾಮುವು ರಾಣಿಎಂದು ನಾಮಕರಣ ಮಾಡುತ್ತಾರೆ. ಹೀಗೆ ಇವರ ಜೀವನದಲ್ಲಿ ಏರುಪೇರುಗಳು ಕಂಡರೂ ಸಹ ಯಾವುದೇ ರೀತಿಯ ಆತ್ಮಸ್ಥೈರ್ಯವನ್ನು ಕಳೆದುಕೊಳ್ಳದೆ ಜೀವಿಸುತ್ತಾರೆ. ರಾಣಿಯಮ್ಮ ಆಗಿ ತಮ್ಮ ಜೀವನವನ್ನು ರೂಪಿಸಿಕೊಳ್ಳುತ್ತಾರೆ. ಸಮಾಜದಲ್ಲಿ ತಮ್ಮದೇ ಆದಂತಹ ಹೆಸರನ್ನು ಪಡೆಯುತ್ತಾರೆ.ಜೈ ಹಿಂದ್ ಜೈ ಭಾರತ ಮಾತೆ.

- ನನ್ನತನವ ನಾ ಹೇಗೆ ಬಿಟ್ಟು ಬಾಳಲಿ
- ನಾನು ಕೂಡ ಭಾವ ಜೀವಿಯಲ್ಲವೆ
- ನಾನು- ನೀನು ಏನು ಇಲ್ಲ
- ದೇವನಿರುವ ಮರೆತೆಯಲ್ಲ
- ನಾನು ಕೂಡ ನಿನ್ನಂತೆ
- ಅಣಕಿಸದಿರು ನನ್ನನ್ನು
- ಇಂದು ನೀನು ನಕ್ಕರೆ
- ನಾಳೆ ನಿನ್ನ ನೋಡಿ ನಗುವರು
- ಬೇಡ ನಿನಗೆ ಈ ಅಭ್ಯಾಸ
- ಬಿಟ್ಟು ಬಿಡು ಎಂದರು
- ಬಿಡದೆ ನೋವ ನೀಡುತ್ತಾ
- ನೋವ ನೀಡಿ ಹೋದಿರಿ
- ನನ್ನ ಪಾಡಿಗೆ ನಾನು

# ಬೆಂಗಳೂರಿನಲ್ಲಿ 'ಮುಂಗಾರು ಪೂರ್ವ' ಬಿಬಿಎಂಪಿ ಕಾರ್ಯಕ್ರಮಗಳ ಪಟ್ಟಿ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಬೆಂಗಳೂರಿನಲ್ಲಿ ಪ್ರತಿ ಭಾರಿ ಮಳೆಗಾಲದಲ್ಲೂ ಅನೇಕ ಕಡೆಗಳಲ್ಲಿ ನಷ್ಟ, ಜೀವ ಹಾನಿ, ಸಂಚಾರ ಸಮಸ್ಯೆಯಂತಹ ತೊಂದರೆಗಳು ಆಗುತ್ತಲೇ ಇರುತ್ತವೆ. ಈ ಭಾರಿ ಹೀಗಾಗದಂತೆ ಎಚ್ಚರಿಕೆ ವಹಿಸಿರುವ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕೆಲವು ಕಾರ್ಯಕ್ರಮ ಆಯೋಜಿಸುತ್ತಿದೆ.

## ವಯಲವಾರು ತೆಗೆದು ಕೊಳ್ಳಬೇಕಾದ ಕ್ರಮಗಳು

- ಆಯಾ ವಾರ್ಡ್ ಮಟ್ಟದಲ್ಲಿ ಈಗಾಗಲೇ ಗುರುತಿಸಲಾಗಿರುವ ರಾಜಕಾಲುವೆಯ ಸಂಪರ್ಕ ಚರಂಡಿಗಳಿಂದ ಮತ್ತು ಸೂಕ್ಷ್ಮ ಹಾಗೂ ಅತೀ ಸೂಕ್ಷ್ಮ ಪ್ರದೇಶಗಳಿಂದ ಹೂಳೆತ್ತುವುದು.
- ದಿನನಿತ್ಯ ರಸ್ತೆ ಬದಿಯಲ್ಲಿ ಶೇಖರಣೆಯಾಗುತ್ತಿರುವ ಘನತ್ಯಾಜ್ಯ ಸ್ಥಳಗಳನ್ನು ಸ್ವಚ್ಛಗೊಳಿಸುವುದು.
- ವಾರ್ಡ್ ಮಟ್ಟದ ರಸ್ತೆ ಬದಿಯ ತೋಳು ಚರಂಡಿಗಳನ್ನು ಸ್ವಚ್ಛಗೊಳಿಸುವುದು.
- ಆರ್ಟಿರಿಯಲ್ ಮತ್ತು ಸಬ್ ಆರ್ಟಿರಿಯಲ್ ರಸ್ತೆಗಳ ತೋಳುಚರಂಡಿಗಳನ್ನು ಸ್ವಚ್ಛಗೊಳಿಸುವುದು ಮತ್ತು ರಸ್ತೆ ಮೇಲೆ ಶೇಖರಣೆಯಾಗಿರುವ ಅನುಪಯುಕ್ತ ಕಟ್ಟಡ ತ್ಯಾಜ್ಯ (Debris) ಗಳನ್ನು ತೆರವುಗೊಳಿಸುವುದು.
- ಯಾಂತ್ರಿಕ ಕಸ ಗುಡುಸುವಿಕೆ ಯಂತ್ರವನ್ನು ಪರಿಣಾಮಕಾರಿಯಾಗಿ ಮತ್ತು ತೀವ್ರತರದಲ್ಲಿ ಬಳಸುವುದು.
- ಮೇಲ್ಸೇತುವೆ ಮತ್ತು ಕೆಳಸೇತುವೆ Lead off Drains ಗಳನ್ನು ಸ್ವಚ್ಛಗೊಳಿಸಿ ನೀರು ನಿಲ್ಲುವಿಕೆ ಆಗದೆಂಬ ಪ್ರಮಾಣ ಪತ್ರವನ್ನು ಸಲ್ಲಿಸುವುದು.
- ರಸ್ತೆ ಗುಂಡಿಗಳನ್ನು ದುರಸ್ಥಿ ಪಡಿಸುವಂತೆ ಸೂಚನೆ ನೀಡಲಾಗಿದೆ.

**ಮಾಸಾರ್ಧ ಸ್ವಚ್ಛತಾ ಕಾರ್ಯಕ್ರಮ**

ಮುಂಗಾರು ಪ್ರಾರಂಭವಾಗುವ ಅವಧಿಯು ಸಮೀಪಿಸುತ್ತಿದೆ. ಹೀಗಾಗಿ ಬಿಬಿಎಂಪಿ ವ್ಯಾಪ್ತಿಯಲ್ಲಿ ಮುಂಗಾರಿನಿಂದ ಆಗುವ ಮಳೆ ಹಾನಿ ತಡೆಗಟ್ಟಲು 15 ದಿನಗಳ ಕಾಲ 'ಮಾಸಾರ್ಧ ಸ್ವಚ್ಛತಾ ಕಾರ್ಯಕ್ರಮ' ಹಮ್ಮಿಕೊಳ್ಳಲಾಗುವುದು ಎಂದು ಪಾಲಿಕೆ ತಿಳಿಸಿದೆ.

## 'ಮಾಸಾರ್ಧ ಸ್ವಚ್ಛತಾ ಕಾರ್ಯಕ್ರಮ'

**ಹೆಚ್ಚಿನ ಸ್ವಚ್ಛತಾ ಕಾರ್ಯ ನಡೆಸುವ ಕಾರಣ ಆಯಾ ವಲಯ ವ್ಯಾಪ್ತಿಯ ಮುಖ್ಯ ಅಭಿಯಂತರರ ನೇತೃತ್ವದ ತಂಡವು ತಮ್ಮ ಅಧೀನದ ತಾಂತ್ರಿಕ ಸಿಬ್ಬಂದಿಯೊಂದಿಗೆ ದಿನಾಂಕ 19.04.2024 ರಿಂದ 03.05.2024 ರವರೆಗೆ ಪ್ರತಿನಿತ್ಯ ಮುಂಗಾರು ಪೂರ್ವ 'ಮಾಸಾರ್ಧ ಸ್ವಚ್ಛತಾ ಕಾರ್ಯಕ್ರಮ 'ಅನ್ನು ಹಮ್ಮಿಕೊಳ್ಳಲು ಸೂಚಿಸಲಾಗಿದೆ. ಅದರಂತೆ ಇಂದಿನಿಂದ ಎಲ್ಲಾ ಕಡೆ ಸ್ವಚ್ಛತಾ ಕಾರ್ಯವನ್ನು ಹಮ್ಮಿಕೊಳ್ಳಲಾಗಿದೆ.**

ಮುಂಗಾರು ಪೂರ್ವ ಆರಂಭದ ಹಿನ್ನೆಲೆ ಈಗಾಗಲೇ ರಾಜಕಾಲುವೆಗಳಲ್ಲಿ ಹೂಳೆತ್ತುವುದು, ಆರ್ಟಿರಿಯಲ್ ಮತ್ತು ಸಬ್ ಆರ್ಟಿರಿಯಲ್ ರಸ್ತೆಗಳ ರಸ್ತೆ ಬದಿಯ ತೋಳು ಚರಂಡಿಗಳನ್ನು ಸ್ವಚ್ಛಗೊಳಿಲಾಗುತ್ತಿದೆ.

ವಾರ್ಡ್ ಮಟ್ಟದಲ್ಲಿ ಈಗಾಗಲೇ ಗುರುತಿಸಲಾಗಿರುವ ಸಂಪರ್ಕ ಚರಂಡಿಗಳ (Lead off Drains to SWD) ಗಳಿಂದ ಹೂಳೆತ್ತುವುದು ಹಾಗೂ ಇತರೆ ಮುಂಜಾಗೃತ ಕ್ರಮಗಳನ್ನು ಕೈಗೆತ್ತಿಕೊಳ್ಳಲಾಗಿದೆ.

ಪ್ರತಿನಿತ್ಯ ಸ್ವಚ್ಛತಾ ಕಾರ್ಯ ನಡೆಯುವ ಛಾಯಾಚಿತ್ರಗಳನ್ನು ಅಧಿಕಾರಿಗಳು eictabb-mp@gmail.com ಗೆ ಕಳುಹಿಸಲು ಪ್ರಧಾನ ಅಭಿಯಂತರರಾದ ಪ್ರಹ್ಲಾದ್ ಪ್ರಕಟಣೆಯಲ್ಲಿ ಮಾಹಿತಿ ನೀಡಿದ್ದಾರೆ.

# ಕಾವೇರಿ ನೀರು ಹರಿಸಿ ಕನ್ನಡಿಗರಿಗೆ ಖಾಲಿ ಚೊಂಬು ಕೊಟ್ಟಿದ್ದು ನೀವು

• ಉದಯವಾಹಿನಿ, ಬೆಂಗಳೂರು

ತಮಿಳುನಾಡಿಗೆ ನೀರು ಬಿಟ್ಟು ಕಾವೇರಿ ಮಾತೆಯ 'ತುಂಬಿದ ಕೊಡ' ಬರಿದು ಮಾಡಿ ಕನ್ನಡಿಗರಿಗೆ ಖಾಲಿ ಚೊಂಬು ಕೊಟ್ಟವರು ನೀವು ಎಂದು ಕರ್ನಾಟಕ ಕಾಂಗ್ರೆಸ್‌ಗೆ ಬಿಜೆಪಿ ತಿರುಗೇಟು ನೀಡಿದೆ.

ಕರ್ನಾಟಕಕ್ಕೆ ಪ್ರಧಾನಿ ಮೋದಿ ಸರ್ಕಾರ ಕೊಟ್ಟಿದ್ದು 'ಚೊಂಬು' ಎಂದು ಪತ್ರಿಕೆಗಳಲ್ಲಿ ಜಾಹೀತಾರು ನೀಡುವು ಮೂಲಕ ಕರ್ನಾಟಕ ಕಾಂಗ್ರೆಸ್‌ಗೆ ನೇರ ದಾಳಿ ಮಾಡಿತ್ತು. ಕಾಂಗ್ರೆಸ್ ಜಾಹೀರಾತಿನ ಫೋಟೋ ಎಲ್ಲೆಡೆ ವೈರಲ್ ಆಗಿತ್ತು. ಇದಕ್ಕೆ ತಿರುಗೇಟು ಕೊಟ್ಟು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಅವರು ಟ್ವೀಟ್ ಮಾಡಿದ್ದಾರೆ.

ಬೆಳೆ ಒಣಗಿಸಿ ರೈತರಿಗೆ ಚೊಂಬು ಕೊಟ್ಟವರು ನೀವು ಎಂದು ಹೇಳುವ ಮೂಲಕ ಕಾವೇರಿ ನೀರು ರಕ್ಷಿಸದೇ ತಮಿಳುನಾಡಿಗೆ ಹರಿ ಬಿಟ್ಟಿದ್ದನ್ನು ನೆನಪಿಸಿದರು. ಇದ್ದ ಬದ್ದ ಹಣವನ್ನೆಲ್ಲ ಖಾಲಿಮಾಡಿಕೊಂಡು ಪರಿಶಿಷ್ಟರ/ ಹಿಂದುಳಿದವರ ಕಲ್ಯಾಣಕ್ಕೆ ಮೀಸಲಾದ ಹಣವನ್ನೂ ವರ್ಗಾಯಿಸಿಕೊಂಡು ಶೋಷಿತರಿಗೆ ಚೊಂಬು ಕೊಟ್ಟವರು ನೀವು ಎಂದು ಹೇಳಿದರು.ಕಾವೇರಿ ಕುಡಿಯುವ ನೀರೂ ಒದಗಿಸಲಾರದೇ ಮಹಿಳೆಯರು ಖಾಲಿ ಬಿಂದಿಗೆ ಹಿಡಿದು ಅಲೆದಾಡುವ ಸ್ಥಿತಿ ತಂದವರು ಕಾಂಗ್ರೆಸ್‌ನವರು. ರಾಜ್ಯದಲ್ಲಿ ನಿರುದ್ಯೋಗಿಗಳಿಗೆ ಯುವನಿಧಿ ಹೆಸರಲ್ಲಿ ಭರವಸೆ ನೀಡಿ ಖಾಲಿ ಚೊಂಬು ಕೊಟ್ಟವರು ನೀವು ಎಂದು ಬಿವೈ ವಿಜಯೇಂದ್ರ ದೂರಿದರು. ದೇಶದಲ್ಲಿ ಕಾಣದ 'ಕೈ' ಸ್ಥಿತಿ ತಲುಪುತ್ತಿರುವ ನಿಮಗೆ ಕೆಲವೇ ದಿನಗಳಲ್ಲಿ ಜನರೇ ನೀಡಲಿದ್ದಾರೆ 'ಖಾಲಿ ಚೊಂಬು' ಎಂದು ಅವರು ಚುನಾವಣೆ ಸೋಲು ಮತ್ತು ಈ ಭಾರಿ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಜನ ಬುದ್ಧಿ ಕಲಿಸಲಿದ್ದಾರೆ ಎಂದು ಭವಿಷ್ಯ ನುಡಿದರು. ಕಾಂಗ್ರೆಸ್ ಸರ್ಕಾರ ಪ್ರಧಾನಿ ನರೇಂದ್ರ ಮೋದಿಯವರು ಕರ್ನಾಟಕಕ್ಕೆ ಏನು ಕೊಡುಗೆ ನೀಡಿಲ್ಲ. ಕರ್ನಾಟಕಕ್ಕೆ ನೀಡಿದ್ದು ಚೊಂಬು. ಎಲ್ಲರ ಖಾತೆಗೆ 15 ಲಕ್ಷ ಹಣ ಹಾಕುವ ಚೊಂಬು, ಬರ/ನೆರೆ ಪರಿಹಾರದ ಚೊಂಬು, ತೆರಿಗೆ ಹಂಚಿಕೆಯಲ್ಲಿ ಚೊಂಬು, ರೈತರ ಆದಾಯ ಡಬಲ್ ಮಾಡುವ ಚೊಂಬು, 7 ಜನ ಬಿಜೆಪಿ/ಜೆಡಿಎಸ್ ಸಂಸದರು ರಾಜ್ಯಕ್ಕೆ ನೀಡಿದ ಕೊಡುಗೆ ಕೇವಲ ಚೊಂಬು, ಈ ಚುನಾವಣೆಯಲ್ಲಿ ಬಿಜೆಪಿಗೆ ನೀಡೋಣ ಇದೇ ಚೊಂಬು, ಕನ್ನಡಿಗರಿಗಾಗಿ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿ ಎಂದು ಕಾಂಗ್ರೆಸ್ ಚೊಂಬಿನ ಫೋಟೋ ಸಮೇತ ಜಾಹೀರಾತು ನೀಡಿತ್ತು. ಈ ಮೂಲಕ ಲೋಕಸಭಾ ಚುನಾವಣೆಯಲ್ಲಿ ರಾಜಕೀಯ ಪಕ್ಷಗಳ ಮಧ್ಯೆ ಕೆಸರೆರಚಾಟಕ್ಕೆ ಚೊಂಬು ಭಾರಿ ಸದ್ದು ಮಾಡುತ್ತಿದೆ. ಆರೋಪ, ಪ್ರತ್ಯಾರೋಪಗಳಿಗೆ, ಟೀಕೆಗಳಿಗೆ ರಣಕಣ ಸಾಕ್ಷಿಯಾಗಿದೆ. ಈ ಮೂಲಕ ಕರ್ನಾಟಕಕ್ಕೆ ರಾಜ್ಯದ ಅನುದಾನ ಹಂಚಿಕೆ ಕುರಿತು ಬಿಜೆಪಿ- ಕಾಂಗ್ರೆಸ್

# ಮುಖ್ಯಮಂತ್ರಿ, ಗೃಹಮಂತ್ರಿ ರಾಜಿನಾಮೆ ನೀಡಲಿ: ನಡಹಳ್ಳಿ

## • ಗೃಹಮಂತ್ರಿ ಲವ್ ಜಿಹಾದ್, ಆಕಸ್ಮಿಕ ಘಟನೆ ಅಂತಾರೆ, ಮುಖ್ಯಮಂತ್ರಿ ವೈಯುಕ್ತಿಕ ಕಾರಣ ಅಂತಾರೆ

• **ಉದಯವಾಹಿನಿ, ಮುದ್ದೇಬಿಹಾಳ**

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಕಾಂಗ್ರೆಸ್ ಕಾರ್ಪೋರೇಟರ್ ನಿರಂಜನ ಹಿರೇಮಠ ಅವರ ಪುತ್ರಿ ನೇಹಾಳನ್ನು ಬರ್ಬರವಾಗಿ ಕೊಲೆ ಮಾಡಿ ರುವ ಘಟನೆ ಕುರಿತು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ, ಗೃಹಮಂತ್ರಿ ಪರಮೇಶ್ವರ, ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ಅವರು ನಿಡಿರುವ ಹೇಳಿಕೆಗಳು ಒಪ್ಪುವಂಥದ್ದಲ್ಲ. ಅವರ ಹೇಳಿಕೆಗಳು ಕೊಲೆ ಮಾಡಿದವನ ಸಮಾಜದ ಪರ ತುಷ್ಟೀಕರಣ ರೀತಿಯಲ್ಲಿರುವುದು ಮತ್ತೊಂದು ದುರಂತ. ನೈತಿಕ ಹೊಣೆ ಹೊತ್ತು ಇವರು ತಕ್ಷಣ ತಮ್ಮ ಸ್ಥಾನಗಳಿಗೆ ರಾಜಿನಾಮೆ ಕೊಡುವುದು ಸೂಕ್ತ ಎಂದು ಒತ್ತಾಯಿಸುತ್ತೇನೆ.

ಬಿಜೆಪಿ ರೈತ ಮೋರ್ಚಾ ರಾಜಾಧ್ಯಕ್ಷ ಮಾಜಿ ಶಾಸಕ ಎ.ಎಸ್ ಪಾಟೀಲ್ ನಡಹಳ್ಳಿ ಪತ್ರಿಕೆ ಹೇಳಿಕೆಯ ಮೂಲಕ ಒತ್ತಾಯಿಸಿದ್ದಾರೆ.ಗೃಹಮಂತ್ರಿ ಲವ್ ಜಿಹಾದ್, ಆಕಸ್ಮಿಕ ಘಟನೆ ಅಂತಾರೆ, ಮುಖ್ಯಮಂತ್ರಿ ವೈಯುಕ್ತಿಕ ಕಾರಣ ಅಂತಾರೆ, ಕೈಗಾರಿಕೆ ಸಚಿವ ಅವನ ಸಮಾಜ ಪ್ರತಿನಿಧಿಸುವುದಿಲ್ಲ ಅಂತಾರೆ. ತಮ್ಮದೇ ಪಕ್ಷದ ನಾಯಕನಿಗೆ ಸಾಂತ್ವನ ಮಾತು ಹೇಳಿ ಅವರ ಪರ ನಿಲ್ಲುವುದನ್ನು ಬಿಟ್ಟು ಕೊಲೆಗಾರನ ಪರ ವಕಾಲತ್ತು ವಹಿಸುವ ಭಾವನೆ ಬರುವಂಥ ಹೇಳಿಕೆಗಳು ರಾಜ್ಯದ ಕಾನೂನು ಸುವ್ಯವಸ್ಥೆಗೆ ಮಾರಕ ಮಾತ್ರವಲ್ಲದೆ ತನಿಖೆಯ ಮೇಲೂ ಪರಿಣಾಮ ಬೀರುವಂಥವುಗಳಾಗಿವೆ ಅನ್ನೋದು ವಾಸ್ತವವಾಗಿದೆ.



ಕಾನೂನು ಸುವ್ಯವಸ್ಥೆ ಕಾಪಾಡುವ ಜವಾಬ್ದಾರಿ ಹೊತ್ತಿರುವ ಗೃಹಮಂತ್ರಿಯಂತೂ ಕತ್ತೇ ಕಾಯುವುದಕ್ಕೂ ಲಾಯಕ್ಕಿಲ್ಲದಂಥ ಮನುಷ್ಯ. ನಾನು, ನನ್ನ ಪಕ್ಷ ಹತ್ಯೆ ಘಟನೆಯನ್ನು ಅತೀ ಉಗ್ರವಾಗಿ ಖಂಡಿಸುತ್ತೇವೆ. ಚಾಕುವಿನಿಂದ ಚುಚ್ಚುವ ಭೀಭತ್ರ ವಿಡಿಯೋ ಟಿವಿ ವಾಹಿನಿಗಳಲ್ಲಿ, ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿ ರಾಜ್ಯದ ಜನತೆ ಬೆಚ್ಚಿಬೀಳುವಂತಾಗಿದೆ. ನೇಹಾಳ ಘಟನೆ ಆಕಸ್ಮಿಕವಲ್ಲ. ಲವ್ ಜಿಹಾದ್ ಸಂಚಿನ ಭಾಗವಾಗಿದ್ದರೂ ಇದರ ಹಿಂದೆ ಬೇರೆಯದೇ ಹಿಡನ್ ಅಜೆಂಡಾ ಇರಬಹುದು. ಫಯಾಜ್‌ಗಿರುವ ಹೊರನ ಬೆಂಬಲದ ಬಗ್ಗೆ ಪೊಲೀಸರು ತನಿಖೆ ನಡೆಸಿ ಖಚಿತಪಡಿಸಿಕೊಳ್ಳಬೇಕು. ಹುಬ್ಬಳ್ಳಿ ಧಾರವಾಡ ಪೊಲೀಸ್ ಕಮೀಷನರ್ ಒಬ್ಬ ಮಹಿಳೆಯಾಗಿದ್ದು ಮಹಿಳೆಯರಿಗಾಗುತ್ತಿರುವ ಅನ್ಯಾಯ, ದುರಂತಗಳ ಬಗ್ಗೆ ಕಠಿಣ ನಿಲುವು ತೋರಬೇಕು. ಕಾರಿನಲ್ಲಿ ಹೋಗುತ್ತಿದ್ದವರು ಜೈ ಶ್ರೀ ರಾಮ್ ಘೋಷಣೆ ಕೂಗಿದ್ದಕ್ಕೆ ತಕರಾರು ತೆಗೆದು ಕಾರನ್ನು ಅಡ್ಡಗಟ್ಟಿ ಅಲ್ಲಾಹೊ ಅಕ್ಬರ್ ಹೇಳುವಂತೆ ಆಗ್ರಹಿಸಿ ಹಲ್ಲೆ ನಡೆಸಲಾಯಿತು. ಮೋದಿ ಕುರಿತ ಹಾಡು ಹಾಡಿದ್ದಕ್ಕೆ ಹಲ್ಲೆ ನಡೆಸಲಾಗುತ್ತಿದೆ. ದಾವಣಗೆರೆಯಲ್ಲಿ ಕೋಮು ಕದನ ನಡೆಯುತ್ತಿದೆ. ಖ್ಯಾತ ನಟಿ ಪೂಣಚ್ಚ ದಂಪತಿ ಮೇಲೆ ವಿನಾಕಾರಣ ಹಲ್ಲೆ ಮಾಡಲಾಗಿದೆ. ಗದಗನಲ್ಲಿ ಸ್ಥಳೀಯ ರಾಜಕಾರಣಿಯೊಬ್ಬರ ಕುಟುಂಬದವರ ಬರ್ಬರ ಹತ್ಯೆ ನಡೆದಿದೆ. ಇನ್ನೂ ಅನೇಕ ಘಟನೆಗಳು ರಾಜ್ಯಾದ್ಯಂತ ನಡೆಯುತ್ತಿವೆ. ಇದಕ್ಕೆ ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರದ ಒಂದು ಕೋಮಿನ ತುಷ್ಟೀಕರಣ ನೀತಿಯೇ ಕಾರಣವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ನೇಹಾಳ ಘಟನೆ ಆಕಸ್ಮಿಕ ವಲ್ಲ**

**ಫಯಾಜನಿಗೆ ಬದುಕುವ ಹಕ್ಕಿಲ್ಲ**

**ಅವನನ್ನು ಗುಂಡಿಟ್ಟು ಸಾಯಿಸಬೇಕು ಇಲ್ಲವೇ ಬಹಿರಂಗವಾಗಿ ಗಲ್ಲಿಗೇರಿಸಬೇಕು. ಇವೆರಡೂ ಆಗದಿದ್ದರೆ ನೇಹಾಳ ಕುಟುಂಬದವರು ಹೇಳಿದಂತೆ ಅವನನ್ನು ಸಾರ್ವಜನಿಕರಿಗೆ ಬಿಟ್ಟುಕೊಡಬೇಕು. ಫಯಾಜನಿಗೆ ನೀಡುವ ಶಿಕ್ಷೆ ದುಷ್ಕರ್ಮಿಗಳಿಗೆ ಪಾಠವಾಗುವಂತಿರಬೇಕು. ರಾಜ್ಯದಲ್ಲಿ ಹಿಂದುಗಳ ಮೇಲೆ ಅವ್ಯಾಹತವಾಗಿ ಹಲ್ಲೆಗಳು ನಡೆಯುತ್ತಿವೆ. ಬೆಂಗಳೂರಿನ ಅಂಗಡಿಯೊಂದರಲ್ಲಿ ಹನುಮಾನ್ ಚಾಲೀಸಾ ಹಾಕಿದ್ದ ಅಂಗಡಿಕಾರರ ಮೇಲೆ ಹಲ್ಲೆ ನಡೆಸಲಾಯಿತು.**

**ತಮ್ಮದೇ ಪಕ್ಷದ ನಾಯಕರೊಬ್ಬರ ಪುತ್ರಿಯ ಹತ್ಯೆಯಾಗಿದ್ದರೂ ಅದೊಂದು ಆಕಸ್ಮಿಕ ಘಟನೆ ಎಂದಿರುವ ಗೃಹಮಂತ್ರಿ ನೊಂದಿರುವ ಕುಟುಂಬಕ್ಕೆ ಮತ್ತಷ್ಟು ನೋವು ನೀಡಿದ್ದಾರೆ. ಬೆಂಗಳೂರಿನಿಂದ ಹುಬ್ಬಳ್ಳಿಗೆ ಬಂದು ಆ ಕುಟುಂಬಕ್ಕೆ ಸಾಂತ್ವನ ಹೇಳುವ ಕನಿಷ್ಠ ಸೌಜನ್ಯವನ್ನೂ ತೋರಿಸಿಲ್ಲದಿರುವುದು ಖಂಡನೀಯ**

**- ಎ.ಎಸ್ ಪಾಟೀಲ್ ನಡಹಳ್ಳಿ**
**ಮಾಜಿ ಶಾಸಕ**

---

## ನೇಹಾ ಹತ್ಯೆ ಖಂಡಿಸಿ ಪ್ರತಿಭಟನೆ: ಕಣ್ಣೀರಿಟ್ಟು ಗೋಳಾಡಿದ ಪ್ರಿಯಾ ಸವದಿ

• **ಉದಯವಾಹಿನಿ, ಹುಬ್ಬಳ್ಳಿ**

ಹುಬ್ಬಳ್ಳಿ-ಧಾರವಾಡ ಪಾಲಿಕೆಯ ಕಾಂಗ್ರೆಸ್ ಸದಸ್ಯ ನಿರಂಜನ ಹಿರೇಮಠ ಪುತ್ರಿ ನೇಹಾ ಕೊಲೆ ಪ್ರಕರಣ ತೀವ್ರ ಸ್ವರೂಪ ಪಡೆದುಕೊಂಡಿದೆ. ಫಯಾಜ್ ಎನ್ನುವಾತ ಹುಬ್ಬಳ್ಳಿಯ ಬಿವಿಬಿ ಕಾಲೇಜು ಆವರಣದಲ್ಲಿ ನೇಹಾಳನ್ನು ಚಾಕುವಿನಿಂದ ಚುಚ್ಚಿ ಕೊಲೆ ಮಾಡಿದ್ದಾನೆ. ಕೊಲೆಯಾದ ಒಂದೇ ಗಂಟೆಯಲ್ಲಿ ವಿದ್ಯಾನಗರ ಠಾಣೆ ಪೊಲೀಸರು ಆರೋಪಿಯನ್ನು ಬಂಧಿಸಿದ್ದಾರೆ. ಈ ಪ್ರಕರಣವನ್ನು ಖಂಡಿಸಿ ಹುಬ್ಬಳ್ಳಿ-ಧಾರವಾಡದಲ್ಲಿ ಬೃಹತ್ ಪ್ರತಿಭಟನೆ ನಡೆಸಿದ್ದಾರೆ. ಎಬಿವಿಪಿ, ಹಿಂದೂ ಸಂಘಟನೆ ಪ್ರತಿಭಟನೆಗಿಳಿದಿದ್ದು, ಆರೋಪಿಯನ್ನು ಗಲ್ಲಿಗೇರಿ ಸುವಂತೆ ಆಗ್ರಹಿಸುತ್ತಿವೆ. ಈ ಪ್ರತಿಭಟನೆಯಲ್ಲಿ ಭಾಗಿಯಾದ ನಟಿ ಪ್ರಿಯಾ ಸವದಿ ಕಣ್ಣೀರಿಟ್ಟು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಆಕೆ ನನಗೆ ಸಂಬಂಧನೇ ಆಗಬೇಕಂದಿಲ್ಲ. ಇಲ್ಲಿ ಎಲ್ಲಾರೂ ನಮಗೆ ಅಕ್ಕಾ ತಂಗಿಯರೇ. ನನ್ನ ಅಕ್ಕ-ತಂಗಿನೇ ಬೇಕಾಗಿತ್ತಾ ಇವನಿಗೆ. ಅವಳು ನಮಗೆ ಏನೂ ಆಗಬೇಕಂದಿಲ್ಲ. ಇಲ್ಲಿ ಬಂದಿರುವ ಪ್ರತಿಯೊಬ್ಬರಿಗೂ ಆಕೆ ತಂಗಿ, ಅಕ್ಕ, ಮಗಳೇ.. ಆ ಆರೋಪಿಯನ್ನು ನಮಗೆ ಕೈಗೆ ಕೊಡಿ. ಅವನಿಗೆ ಶಿಕ್ಷೆ ಯಾರು ಕೊಡುತ್ತಾರೆ. ಹತ್ತು, ಇಪ್ಪತ್ತು ವರ್ಷ ಅವನಿಗೆ ಶಿಕ್ಷೆ ಕೊಡಬಹುದು. ಆದರೆ ಆಕೆಗೆ ಜೀವ ಕೊಡಲಾಗುತ್ತದೆಯೇ..? ಎಂದು ಪ್ರಶ್ನಿಸಿದ್ದಾರೆ.


ಉದಯವಾಹಿನಿ ಚಿತ್ರ

ಮಾಸ್ಕ್ ಹಾಕಿಕೊಂಡು ಯಾಕೆ ಬರಬೇಕಿತ್ತವನು.. ಬುರ್ಖಾ ಹಾಕಿಕೊಂಡು ಬರಬೇಕಿತ್ತವನು. ಅಷ್ಟು ಧಮ್ ಇದ್ದವನು ಆಕೆಯ ಮನೆಗೆ ಹೋಗಿ ಮದುವೆ ಯಾಗುತ್ತೇನೆ ಎಂದು ಕೇಳಬೇಕಿತ್ತು. ಆಕೆ ಪ್ರತಿ ಯೊಬ್ಬರಿಗೂ ಅಕ್ಕ, ತಂಗಿಯಂತೆ ಹೀಗಾಗಿ ಇಂದು ಇಷ್ಟೊಂದು ಜನ ಬಂದಿದ್ದಾರೆ.

ಸರ್ಕಾರದವರು ಐದು, ಹತ್ತು ವರ್ಷ ಇರುತ್ತಾರೆ ಹೋಗುತ್ತಾರೆ. ಅವರಿಗೆ ಇದರ ನೆನಪು ಸಹ ಇರುವುದಿಲ್ಲ. ಎಲ್ಲಾ ಮುಚ್ಚಿ ಹಾಕುತ್ತಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಇಂದು ಈಕೆ ಒಬ್ಬಳಿಗೋಸ್ಕರ ಇಷ್ಟೊಂದು ಜನ ಸೇರಿದ್ದೇವೆ. ನಾಳೆ ನನಗೂ ಈ ರೀತಿ ಆಗಬಹುದು, ಇವರಿಗೂ ಆಗಬಹುದು, ಎಷ್ಟು ಮಂದಿಗೋಸ್ಕರ ನಾವು ಅಳುತ್ತ ಕೂರುವುದು. ಎಷ್ಟು ಮಂದಿಗಂತ ಅಳಬೇಕು. ನಾವು ಹೀಗೆ ಅಳುತ್ತಾ ಕುಳಿತರೆ ನಮಗೆಲ್ಲಿದೆ ರಕ್ಷಣೆ. ಬುರ್ಖಾ ಹಾಕಿಕೊಂಡು ತಿರುಗಾಬೇಕು ನಾವು? ಎಂದು ಕಠಿಣವಾಗಿ ಪ್ರಶ್ನಿಸಿದ್ದಾರೆ**

**- ಪ್ರಿಯಾ ಸವದಿ, ನಟಿ**

---

## ಮತದಾನ ಸಂವಿಧಾನ ಬದ್ಧ ಹಕ್ಕು, ಸಂಭ್ರಮದಿಂದ ಚಲಾಯಿಸಿ

• **ಉದಯವಾಹಿನಿ, ರಾಯಚೂರು**

ಮೇ.7ರ ಲೋಕಸಭಾ ಚುನಾವಣೆಯಲ್ಲಿ ಸಂವಿಧಾನ ನೀಡಿರುವ ಮತದಾನದ ಹಕ್ಕನ್ನು ನಮ್ಮ ಜವಾಬ್ದಾರಿಯುತ ಕರ್ತವ್ಯ ಎಂದು ತಪ್ಪದೇ ಮತದಾನದ ಚಲಾಯಿಸಿ. ಶತಪ್ರತಿಶತ ಮತದಾನ ರಾಯಚೂರು ಜಿಲ್ಲೆಯ ವಾಗ್ದಾನವನ್ನು ಪೂರೈಸಲು ಪ್ರತಿಯೊಬ್ಬರು ಮುಂದಾಗಬೇಕೆಂದು ರಾಯಚೂರು ತಾಲ್ಲೂಕು ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿ ಮಾನಪ್ಪ ಕಟ್ಟಿಮನಿ ಅವರು ನರೇಗಾ ಕೂಲಿಕಾರರಿಗೆ ತಿಳಿಸಿದರು.

ನಿನ್ನೆ ಬಿಚ್ಚಾಲಿ ಗ್ರಾಮ ಪಂಚಾಯತಿಯ ಬಿ. ಯದ್ಲಾಪೂರು ನಾಲಾ ಹೋಳೆತ್ತುವ ಕಾಮಗಾರಿ ಸ್ಥಳದಲ್ಲಿ ಕೆಲಸ ಮಾಡುತ್ತಿರುವ ಕೂಲಿಕಾರರಿಗೆ, ತಾಲ್ಲೂಕ ಸ್ವೀಪ್ ಸಮಿತಿಯಿಂದ ಹಮ್ಮಿಕೊಂಡಿದ್ದ ಮತದಾನದ ಮಹತ್ವದ ಕುರಿತು ಮತದಾರರ ಜಾಗೃತಿ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದರು.

18 ವರ್ಷ ತುಂಬಿದ ಎಲ್ಲಾ ವಯಸ್ಕ ಪ್ರೌಢ ಪ್ರಜೆಗಳಿಗೆ ಮತ ಚಲಾಯಿಸುವ ಹಕ್ಕು ನೀಡಲಾಗಿದೆ. ಇಂತಹ ಅತ್ಯುತ್ತಮ ವ್ಯವಸ್ಥೆಯಲ್ಲಿ ಭಾರತಿಯ ಪ್ರಜೆಗಳಾದ ನಾವು ಪ್ರಭುದ್ಧತೆಯಿಂದ ಅಮೂಲ್ಯವಾದ ಮತವನ್ನು ಮೇ 7 ರಂದು ಗ್ರಾಮದ ಎಲ್ಲಾರೂ ತಪ್ಪದೇ ಮತ ಚಲಾಯಿಸಿ, ಶತ ಪ್ರತಿಶತ ಮತದಾನ ರಾಯಚೂರು ಜಿಲ್ಲೆಯ ವಾಗ್ದಾನವನ್ನು ಯಶಸ್ವಿಯಾಗಿ ಪೂರೈಸೋಣ ಎಂದರು.


ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ಪಿಡಿಒ ಮಾಳಮ್ಮ ಶಿವಂಗಿ, ಐಇಸಿ ಸಂಯೋಜಕ ಧನರಾಜ, ತಾಂತ್ರಿಕ ಸಹಾಯಕ ಇಂಜೀನಿಯರ್ ಗುಡದಪ್ಪ, ಸಿ.ಅರ್.ಪಿ ಶ್ರೀಧರ, ಕಾರ್ಯದರ್ಶಿ ನರಸಿಂಹ, ಗ್ರಾ.ಪಂ ಡಿಇಓ ಕೃಷ್ಣ, ಬಿ.ಎಪ್.ಟಿ ಇಮಾನವೇಲ್, ಜಿಕೆಎಮ್ ಮೀನಾಕ್ಷಿ ಹಾಗೂ ಗ್ರಾಮ ಪಂಚಾಯತಿ ಸಿಬ್ಬಂದಿ ವರ್ಗದವರು ಮತ್ತು ನರೇಗಾ ಮೇಟ್ ಕೂಲಿಕಾರರು ಉಪಸ್ಥಿತರಿದ್ದರು.

---

## ನೇಹಾ ಕೊಲೆ: ಎನ್‌ಕೌಂಟರ್ ಕಾನೂನು ಜಾರಿಯಾಗಲಿ

• **ಉದಯವಾಹಿನಿ, ಹುಬ್ಬಳ್ಳಿ**

ವಿದ್ಯಾರ್ಥಿನಿ ನೇಹಾ ಹಿರೇಮಠ ಕೊಲೆ ಅತ್ಯಂತ ಖಂಡ ನೀಯವಾಗಿದ್ದು, ಇಂತಹ ಪ್ರಕರಣದ ಆರೋಪಿಗೆ ಎನ್‌ಕೌಂಟರ್ ಕಾನೂನು ಜಾರಿಗೆ ಬರಲೇಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಹೇಳಿದರು.



ನಗರದ ಕಿಮ್ಸ್ ಶವಗಾರಕ್ಕೆ ಭೇಟಿ ನೀಡಿದ ಅವರು, ಕುಟುಂಬದವರಿಗೆ ಸಾಂತ್ವನ ನೀಡಿ ನಂತರ ಮಾಧ್ಯಮದವರೊಂದಿಗೆ ಮಾತನಾಡಿದರು.

ಕೊಲೆ ಪ್ರಕರಣಕ್ಕೆ ಸಂಬಂಧಿಸಿ ಹಲವು ಮುಖಂಡರು ಈಗಾಗಲೇ ಮಾತನಾಡಿದ್ದಾರೆ. ಆ ಕುರಿತು ನಾನು ಹೆಚ್ಚಿಗೆ ಹೇಳುವುದಿಲ್ಲ. ಆದರೆ, ಇಂತಹ ಪ್ರಕರಣಗಳಿಗೆ ಮುಂದೊಂದು ದಿನ ಎನ್‌ಕೌಂಟರ್ ಕಾನೂನು ಬರಲೇಬೇಕು. ಇದು ಜಾರಿಯಾದರೆ, ಇಂತಹ ಪ್ರಕರಣದ ಆರೋಪಿಗಳನ್ನು ಹೊಡೆದುರುಳಿಸಬಹುದು' ಎಂದು ಅಭಿಪ್ರಾಯಪಟ್ಟರು. ಎರಡು ವರ್ಷಗಳ ಅವಧಿಯಲ್ಲಿ ದೇಶದಲ್ಲಿ 13 ಲಕ್ಷ ಯುವತಿಯರು, ಮಹಿಳೆಯರು ನಾಪತ್ತೆಯಾಗಿದ್ದಾರೆ. ಈ ಬಗ್ಗೆ ಸಚಿವ ಪ್ರಲ್ಹಾದ ಜೋಶಿ ಉತ್ತರ ನೀಡಬೇಕು. ನೇಹಾ ಕೊಲೆ ಪ್ರಕರಣವನ್ನು ಬಿಜೆಪಿ ರಾಜಕರಣ ಮಾಡುತ್ತಿದ್ದು, ಘಟನೆಯನ್ನು ಬೇರೆ ಆಯಾಮದಲ್ಲಿ ನೋಡಬಾರದು. ತನಿಖೆ ಮುಗಿಯುವ ಮೊದಲು ರಾಜಕೀಯ ಹೇಳಿಕೆ ನೀಡುವುದು ಸರಿಯಲ್ಲ. ಬಿಜೆಪಿ ಆಡಳಿತದ ಅವಧಿಯಲ್ಲಿ ಇಂತಹ ಪ್ರಕರಣ ನಡೆದೇ ಇಲ್ಲವೇ' ಎಂದು ಪ್ರಶ್ನಿಸಿದರು.'ನೇಹಾ ಕೊಲೆ ಆಕಸ್ಮಿಕ' ಎಂಬ ಗೃಹ ಸಚಿವ ಜಿ. ಪರಮೇಶ್ವರ ಹೇಳಿಕೆಯನ್ನು ಸಚಿವ ಲಾಡ್ ಸಮರ್ಥಿಸಿಕೊಂಡರು.

**ಎಲ್ಲಾ ಸರ್ಕಾರದ ಅವಧಿಯಲ್ಲಿ ಇಂತಹ ಘಟನೆಗಳು ನಡೆದಿವೆ. ಅವುಗಳ ಅಂಕೆ, ಸಂಖ್ಯೆ ನೀಡಬಲ್ಲೆ. ಆದರೆ, ಅವುಗಳಿಗೆಲ್ಲ ಉತ್ತರಿಸುವ ಪರಿಸ್ಥಿತಿ ಇದಲ್ಲ. ಕೆಲವರು ಇದನ್ನ ರಾಜಕೀಯ ಮಾಡಲು ಹೊರಟಿದ್ದಾರೆ. ಇಂತಹ ಸೂಕ್ಷ್ಮ ವಿಷಯಗಳನ್ನು ರಾಜಕೀಯ ಮಾಡದೆ, ಸೂಕ್ಷ್ಮತೆ, ಸ್ವಯಂ ಜವಾಬ್ದಾರಿ ಕಾಯ್ದುಕೊಳ್ಳಬೇಕು' ನಗರದಲ್ಲಿ ಡ್ರಗ್ಸ್ ಮಾಫೀಯಾ ಬಹಳ ದಿನದಿಂದ ಇದೆ. ಡ್ರಗ್ಸ್ ಬೇರೆ ಬೇರೆ ರಾಜ್ಯ, ಜಿಲ್ಲೆಗಳಿಂದ ಇಲ್ಲಿಗೆ ಬರುತ್ತದೆ. ಎಲ್ಲಿಂದ ಸರಬರಾಜು ಆಗುತ್ತದೆಯೋ, ಅಲ್ಲಿಂದಲೇ ಅದನ್ನು ನಿಯಂತ್ರಿಸಬೇಕು. ನೇಹಾ ಕೊಲೆ ಪ್ರಕರಣಕ್ಕೂ, ಡ್ರಗ್ಸ್'ಗೂ ಹೋಲಿಕೆ ಬೇಡ'**

**-ಸಂತೋಷ ಲಾಡ್, ಸಚಿವ**

---

## ಕಸ ವಿಲೇವಾರಿ ಪ್ರಯಾಣಿಕರು ಸಂಚಾರ ಮಾಡುವುದಕ್ಕೆ ಹಿಂಜರಿಕೆ

• **ಉದಯವಾಹಿನಿ, ಸಿಂಧನೂರು**

ರಾಯಚೂರು ಟು ಬಳ್ಳಾರಿ ಜಿಲ್ಲೆಯಲ್ಲಿ ಉರಿ ಬಿಸಿಲಿನ ತಾಪಮಾನ ಝಳಕ್ಕೆ ತತ್ತರಿಸಿ ಹೋಗಿದ್ದ ಜನರು. ಇದರ ಮದ್ಯೆ ಸರ್ಕಾರಿ ಬಸ್‌ನಲ್ಲಿ ಕುಳಿತು ಪ್ರಮಾಣ ಮಾಡುವ ಸಾರ್ವಜನಿಕರು ಸಂಕಷ್ಟ ಎದುರಿಸುತ್ತಿದ್ದಾರೆ ಏಕೆಂದರೆ ಈ ಸರ್ಕಾರಿ ಬಸ್‌ಗಳಲ್ಲಿ ಕಂಡಕ್ಟರ್ ಹಾಗೂ ಚಾಲಕ ಅವರಿಗೆ ಯಾರು ಹೇಳರು ಕೇಳೋರು ಯಾರು ಇಲ್ಲದಂತಾಗಿದೆ.

ಬಸ್‌ಗಳಲ್ಲಿ ಕುಳಿತುಕೊಂಡರೆ ಸಾಕು ಬಸ್ ಒಳಗಡೆ ಇರುವ ಕಸ ಕಡ್ಡಿ ಜನರು ತಿಂದು ಬಿಸಾಕಿದ ಶೇಂಗಾ ಟಿಬೆಟ್‌ಗಳು . ಪೇಪರ್ ಕಾಗದ ಹಾಳೆಗಳು. ಇತರ ತಿಂದು ಬಿಸಾಕಿದ ವೇಸ್ಟ್‌ಗಳು ಬಿದ್ದು ಬಸ್ ಚಲಿಸುವಾಗ ಗಬ್ಬು ವಾಸನೆ ಗಾಳಿಗೆ ಬಂದು ಪ್ರಯಾಣ ಮಾಡುವ ಸಾರ್ವಜನಿಕರು. ಮೇಲೆ ಗಾಳಿಯಲ್ಲಿ ಕಣ್ಣುಗಳಿಗೆ ಮೈಮೇಲೆ ಬೀಳುತ್ತಿರುವುದುರಿಂದ ಸರ್ಕಾರಿ ಬಸ್‌ನಲ್ಲಿ ಓಡೋಡಿ ಮಾಡುವುದಕ್ಕೆ ಹಿಂಜರಿಯುತ್ತಿದ್ದಾರೆ.

ರಾಯಚೂರು ಟು ಸಿಂಧನೂರು ಬಳ್ಳಾರಿ ಜಿಲ್ಲೆಗೆ ಓಡಾಡುವ ಬಸ್‌ನಲ್ಲಿ ಕಸ ವಿಲೇವಾರಿ ಹಾಕಿದ್ದು ನೋಡಿದರೆ ಅಲ್ಲಿ ಒಂದು ತಿಪ್ಪೆ ಇದ್ದುತರ ಕಸ ಕಡ್ಡಿ ಹಾಕಿದ್ದು. ಕಂಡಕ್ಟರ್, ಚಾಲಕ ಯಾರಿಗಾದರೂ 50 ರೂ. ಕೊಟ್ಟು ಬಸ್‌ನಲ್ಲಿ ಇರುವ ಕಸ ಗುಡಿಸಿ ಸ್ವಚ್ಛ ಮಾಡುತ್ತಾರೆ ಎಂದು ಹೇಳುತ್ತಾರೆ. ಪ್ರಯಾಣಿಕರು. ರಾಜ್ಯ ಸರ್ಕಾರ ಬಸ್‌ಗಳಲ್ಲಿ ಉಚಿತ ಪ್ರಮಾಣ ಮಾಡುವ ಯೋಜನೆ ಜಾರಿಗೆ ತಂದಿದ್ದು. ಮಹಿಳೆಯರು ಸಹ ಅಧಿಕ ಪ್ರಯಾಣ ಮಾಡುವರಿಗೆ ಯಾವುದೇ ಸಮಸ್ಯೆ ಯಾಗದಂತೆ ಬಸ್ ಕಂಡಕ್ಟರ್ ಹಾಗೂ ಚಾಲಕ ನೋಡಿಕೊಳ್ಳುವ ಜವಾಬ್ದಾರಿ ಯಾಗಿರುತ್ತದೆ. ಎಂದರು


ಉದಯವಾಹಿನಿ ಚಿತ್ರ

ಬಸ್‌ನಲ್ಲಿ ಕಸ ಕಡ್ಡಿ ಪೇಪರ್ ಶೇಂಗಾ ಸಿಪ್ಪೆ ಬಿದ್ದ ಗಬ್ಬು ವಾಸನೆ ಬಸ್ ಸಂಚಾರ ಮಾಡುವ ಸಂದರ್ಭದಲ್ಲಿ ಗಾಳಿಗೆ ದುರ್ವಾಸನೆ ಬರುವುದು, ಪ್ರಯಾಣ ಮಾಡುವ ಸಾರ್ವಜನಿಕರು ಮೈ ಮೇಲೆ ಕಣ್ಣಿಗೆ ಇರುವ ಸಂದರ್ಭ ಬರುತ್ತದೆ ಅದಕ್ಕಾಗಿ ಬಸ್ ಕಂಡಕ್ಟರ್, ಚಾಲಕರು ಬಸ್ ನಿಲ್ದಾಣ ಇರುವಾಗ ಸ್ವಚ್ಛವಾಗಿ ಇರಬೇಕು ವರತು ತಿಪ್ಪೆ ಗುಂಡಿಯಾಗಬಾರದು ಬಸ್ಸಿನಲ್ಲಿ ಪ್ರಯಾಣ ಮಾಡುವ ಸಾರ್ವಜನಿಕರು ಯಾವುದೇ ಕಾರಣಕ್ಕೂ ತೊಂದರೆಗಳು ಆಗಬಾರದೆಂದು. ಸಿಪಿ ಐಎಂ ಎಲ್ ಸಂಘಟನೆ ಜಿಲ್ಲಾ ಸಂಚಾಲಕ ಬಿ ಎನ್ ಯರದಿಹಾಳ ಅವರು ಬಸ್ ಡಿಪೋ ಮ್ಯಾನೇಜರ್‌ಗೆ ಒತ್ತಾಯಿಸಿದರು.

**ಬಸ್‌ನಲ್ಲಿ ಪ್ರಯಾಣ ಹೆಚ್ಚಳ**

**ಕೋಟ್ ಬಸ್‌ಗಳಲ್ಲಿ ಓಡಾಡುವ ಪ್ರಯಾಣಿಕರು ದಿನಕ್ಕೆ ಹೆಚ್ಚಾಗುತ್ತಿದ್ದು. ಏಕೆಂದರೆ ರಾಯಚೂರು. ಬಳ್ಳಾರಿ, ಕೊಪ್ಪಳ ಜಿಲ್ಲೆಗಳ ಅಧಿಕ ಬಿಸಿಲಿನ ತಾಪಮಾನದಿಂದ ಮದುವೆ ಕಾರ್ಯಕ್ರಮ. ಮಕ್ಕಳ ಎಜುಕೇಶನ್‌ಗಾಗಿ ಬೇರೆ ಊರುಗಳಿಗೆ ಅಡ್ಮಿಶನ್ ಮಾಡಿಸುವುದಕ್ಕೆ. ಇತರ ಕಾರ್ಯಕ್ರಮಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಸಾಕಷ್ಟು ಸಾರ್ವಜನಿಕರು ಬಸ್‌ನಲ್ಲಿ ಪ್ರಯಾಣ ಮಾಡುತ್ತಾರೆ.**

---

## ಆರೋಪಿಯನ್ನು ಎನ್‌ಕೌಂಟರ್ ಮಾಡಿ, ಮನೆ ನೆಲಸಮ ಮಾಡಿ

• **ಉದಯವಾಹಿನಿ, ಹುಬ್ಬಳ್ಳಿ**

ವಿದ್ಯಾರ್ಥಿನಿಯರ ಬಗ್ಗೆ ರಾಜ್ಯ ಸರ್ಕಾರಕ್ಕೆ ಕಳಕಳಿಯಿದ್ದರೆ, ನೇಹಾ ಕೊಲೆ ಪ್ರಕರಣದ ಆರೋಪಿಯನ್ನು ಎನ್'ಕೌಂಟರ್ ಮಾಡಲು ಆದೇಶ ಹೊರಡಿಸಬೇಕು. ಅವರ ಮನೆಯನ್ನು ಬುಲ್ಡೋಜರ್ ಹಚ್ಚಿ ನೆಲಸಮ ಮಾಡಬೇಕು' ಎಂದು ಶ್ರೀರಾಮಸೇನಾ ಸಂಸ್ಥಾಪಕ ಅಧ್ಯಕ್ಷ ಪ್ರಮೋದ ಮುತಾಲಿಕ್ ಆಗ್ರಹಿಸಿದರು.

ನೇಹಾ ಕುಟುಂಬ ವರ್ಗದವರಿಗೆ ಶುಕ್ರವಾರ ಸಾಂತ್ವನ ಹೇಳಿ, ಮಾಧ್ಯಮದವರ ಜೊತೆ ಮಾತನಾಡಿದ ಅವರು, 'ಕೊಲೆ ಪ್ರಕರಣದ ಅಪರಾಧಿಗೆ ಗಲ್ಲು ಶಿಕ್ಷೆ ನೀಡಬೇಕು ಎನ್ನುವ ಹೇಳಿಕೆಗಳೆಲ್ಲ ಹಾಸ್ಯಾಸ್ಪದ, ನಾಟಕವಾಗಿದೆ. ಅವನಿಗೆ ಜಾಮೀನು ದೊರೆಯುತ್ತದೆ, ಹೊರಗೆ ಬರುತ್ತಾನೆ. ನಮ್ಮ ಕಾನೂನು, ನ್ಯಾಯಾಂಗ ವ್ಯವಸ್ಥೆಯೇ ಸರಿಯಿಲ್ಲ' ಎಂದು ಆಕ್ರೋಶ ವ್ಯಕ್ತಪಡಿಸಿದರು.'ಇದು ನೂರಕ್ಕೆ ನೂರರಷ್ಟು ಲವ್ ಜಿಹಾದ್ ಪ್ರಕರಣ. ಧರ್ಮಕ್ಕಾಗಿ ನಡೆದ ಯುದ್ಧ. ಆರೋಪಿ ಮೊದಲು ಅವಳನ್ನು ಪ್ರೀತಿಸಿದ್ದಾನೆ. ಮತಾಂತರ ಪ್ರಕ್ರಿಯೆ ನಡೆದಿಲ್ಲ ಎಂದು ನಂತರ ಅವಳನ್ನು ಹತ್ಯೆ ಮಾಡಿದ್ದಾನೆ. ಇದರಲ್ಲಿ ಅನುಮಾನವೇ ಇಲ್ಲ. ಎಲ್ಲಿಯವರೆಗೆ ಕಾಂಗ್ರೆಸ್ ಇರುತ್ತದೆಯೋ, ಅಲ್ಲಿವರೆಗೆ ಮುಸ್ಲಿಂ ಕ್ರೌರ್ಯ ಜೀವಂತ ಇರುತ್ತದೆ' ಎಂದು ಆರೋಪಿಸಿದರು.



ಕಾಲೇಜು ಆವರಣಲ್ಲಿ ಭಯದ ವಾತಾವರಣ ಸೃಷ್ಟಿಯಾಗಿದೆ. ವಿದ್ಯಾರ್ಥಿನಿಯರಿಗೆ ಕಾಲೇಜು ಹಾಗೂ ಹೊರಗಡೆ ಭದ್ರತೆಯೇ ಇಲ್ಲ ಎನ್ನುವುದು ಈ ಪ್ರಕರಣ ಸಾಬೀತುಪಡಿಸಿದೆ. ನೆಹಾಳನ್ನು ಫಯಾಜ್ ಐಸಿಸ್ ಮಾದರಿಯಲ್ಲಿ ಚಾಕು ಇರಿದು ಕೊಲೆ ಮಾಡಿದ್ದಾನೆ. ಇದನ್ನು ಗಮನಿಸಿದರೆ ಅವನು ಎಲ್ಲಿಯೋ ತರಬೇತಿ ಪಡೆದಿರುವ ಬಗ್ಗೆ ಅನುಮಾನ ವ್ಯಕ್ತವಾಗುತ್ತಿದೆ. ಇದು ಕಾಂಗ್ರೆಸ್ ಬೆಳೆಸಿದ ವಿಷಬೀಜ. ಬ್ರಿಟಿಷರು ಇದ್ದಾಗ ನೀವು ಅವರ ಪರವಾಗಿದ್ದೀರಿ. ಸ್ವಾತಂತ್ರ್ಯ ಸಿಕ್ಕಿದ ನಂತರ ಮುಸ್ಲಿಮರ ಪರವಾಗಿದ್ದೀರಿ. ಭಯೋತ್ಪಾದಕರನ್ನು ನೀವು ಬೆಳೆಸುತ್ತಾ ಇದ್ದೀರಿ' ಎಂದು ಮುತಾಲಿಕ್ ಆಕ್ರೋಶ ವ್ಯಕ್ತಪಡಿಸಿದರು.

**'ಇಂತಹ ಪ್ರಕರಣಗಳ ನಿಯಂತ್ರಣಕ್ಕೆ ಸರ್ಕಾರ ಕಟ್ಟುನಿಟ್ಟಿನ ಕ್ರಮಕ್ಕೈಗೊಳ್ಳಬೇಕು. ವಿದ್ಯಾರ್ಥಿನಿಯರ ಸುರಕ್ಷತೆ ಬಗ್ಗೆ ಕಳಕಳಿಯಿದ್ದರೆ, ಜಮಾತಾದವರು ನೇಹಾ ಕೊಲೆ ಆರೋಪಿ ಫಯಾಜ್ ಅವರ ಮನೆಗೆ ಬಹಿಷ್ಕಾರದ ಪತ್ವಾ ತಕ್ಷಣ ಹೊರಡಿಸಬೇಕು. ಆ ವ್ಯಕ್ತಿಯ ಪರ ಯಾವ ವಕೀಲರು ವಾದ ಮಾಡಬಾರದು. ಮುಸ್ಲಿಂ ವಕೀಲರು ಅವನ ಪರವಾಗಿ ವಾದಕ್ಕೆ ಮುಂದಾದರೆ ಉಗ್ರ ಪ್ರತಿಭಟನೆ ಮಾಡುತ್ತೇವೆ'**

**-ಪ್ರಮೋದ ಮುತಾಲಿಕ್, ಶ್ರೀರಾಮಸೇನಾ ಸಂಸ್ಥಾಪಕ ಅಧ್ಯಕ್ಷ**

---

## ಹಿಂದೂ ಸಮಾಜದ ಏಕತೆಯಿಂದ ಗುರುಗಳ ವೃತ್ತ ನಿರ್ಮಾಣ

• **ಉದಯವಾಹಿನಿ, ಉಳ್ಳಾಲ**

ಬಜರಂಗದಳ, ವಿಶ್ವಹಿಂದೂ ಪರಿಷತ್, ಸಂಸದರು, ಶಾಸಕರು, ಮೇಯರ್, ಮುಡಾ ಅಧ್ಯಕ್ಷರು ಸೇರಿದಂತೆ ಹಿಂದೂ ಸಮಾಜದ ಆಶಯದಂತೆ ಅಂದಿನ ರಾಜ್ಯ ಸರ್ಕಾರ ನಾರಾಯಣಗುರುಗಳ ವೃತ್ತ ನಿರ್ಮಿಸಿದೆ ಎಂದು ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಸತೀಶ್ ಕುಂಪಲ ಹೇಳಿದರು. ಬಿಜೆಪಿ ಮಂಗಳೂರು ಮಂಡಲದ ವತಿಯಿಂದ ಕೊಲ್ಯದ ನಾರಾಯಣ ಗುರು ಮಂದಿರದಲ್ಲಿ ನಡೆದ ಹಿಂದುಳಿದ ವರ್ಗಗಳ ಸಾಮಾಜಿಕ ಸಮಾವೇಶದಲ್ಲಿ ಅವರು ಮಾತನಾಡಿದರು.


ಉದಯವಾಹಿನಿ ಚಿತ್ರ

ಪ್ರಧಾನಿ ಮೋದಿ ಅವರು ನಾರಾಯಣ ಗುರುಗಳ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ವಿಚಾರದಲ್ಲಿ ರಾಜಕೀಯ ಮಾಡುವವರು ಸಿದ್ಧರಾಮಯ್ಯ ಅವರನ್ನು ಕರೆಸಿ ಗುರುಗಳಿಗೆ ಮಾಲಾರ್ಪಣೆ ಮಾಡಿಸಲಿ. ಲೇಡಿಹಿಲ್‌ನಲ್ಲಿ ನಾರಾಯಣ ಗುರು ವೃತ್ತವಾಗಿಸಲು ಸಾರ್ವಜನಿಕವಾಗಿ ಅರ್ಜಿಗಳನ್ನ ಸಲ್ಲಿಸಲಾಗಿತ್ತು. ಹಿಂದೂ ಸಮಾಜದ ಹೋರಾಟ, ಬಿಜೆಪಿಯ ಪ್ರಯತ್ನದಿಂದ ವೃತ್ತ ನಿರ್ಮಾಣವಾಗಿದೆ. ಆದರೆ, ಇಂದು ಕೆಲವರು ನಾರಾಯಣ ಗುರುಗಳ ವೃತ್ತ ನಾವೇ ಮಾಡಿದ್ದು ಎಂದು ಹೇಳಿಕೊಳ್ಳುವುದು ಸರಿಯಲ್ಲ. ಬಿಜೆಪಿ ಮತ್ತು ಪಕ್ಷದ ನೇತೃತ್ವ ವಹಿಸಿದ ನಾಯಕರಿಗೆ ಇದನ್ನೆಲ್ಲ ಎದುರಿಸುವ ಶಕ್ತಿ ಇದೆ. ಜನತೆ ಜಾತಿ ನೋಡದೆ ಒಗ್ಗಟ್ಟಾಗಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಮತ್ತೊಮ್ಮೆ ಗೆಲ್ಲಿಸಬೇಕು' ಎಂದರು. ಸಂಸದ ನಳಿನ್ ಕುಮಾರ್ ಕಟೀಲು ಮಾತನಾಡಿ, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಮರ್ಥ ನಾಯಕನನ್ನು ಲೋಕಸಭೆ ಅಭ್ಯರ್ಥಿಯಾಗಿ ಆಯ್ಕೆ ಮಾಡಲಾಗಿದೆ ಎಂದರು.

ಬಿಜೆಪಿ ಮಂಡಲ ಅಧ್ಯಕ್ಷ ಜಗದೀಶ ಆಳ್ವ ಕುವೆತ್ತಬೈಲು ಅಧ್ಯಕ್ಷತೆ ವಹಿಸಿದ್ದರು. ಬಿಜೆಪಿ ಹಿಂದುಳಿದ ಮೋರ್ಚಾದ ಜಿಲ್ಲಾ ಘಟಕದ ಅಧ್ಯಕ್ಷ ಮಹೇಶ್ ಜೋಗಿ, ಮಂಗಳೂರು ಮಂಡಲ ಅಧ್ಯಕ್ಷ ಗಣೇಶ್ ಸುವರ್ಣ, ಬಿಜೆಪಿ ಜಿಲ್ಲಾ ವಕ್ತಾರ ಹರಿಕೃಷ್ಣ ಬಂಟ್ವಾಳ, ಹಿಂದುಳಿದ ವರ್ಗದ ರಾಜ್ಯ ಘಟಕದ ಕಾರ್ಯದರ್ಶಿ ಆರ್.ಸಿ.ನಾರಾಯಣ, ಪ್ರದಾನ ಕಾರ್ಯದರ್ಶಿ ಶಶಿಧರ, ಬಿಜೆಪಿ ಜಿಲ್ಲಾ ಘಟಕದದ ಉಪಾಧ್ಯಕ್ಷ ರವೀಂದ್ರ ಶೆಟ್ಟಿ ಉಳಿದೊಟ್ಟು, ಮಂಗಳೂರು ಮಂಡಲ ಉಸ್ತುವಾರಿ ದಿನೇಶ್ ಅಮ್ಟೂರು, ರಾಜ್ಯ ಮೀನುಗಾರರ ಪ್ರಕೋಷ್ಟದ ಸಹ ಸಂಚಾಲಕ ಯಶವಂತ್ ಅಮೀನ್, ಬಿಜೆಪಿ ಹಿಂದುಳಿದ ವರ್ಗ ಮೋರ್ಚಾದ ಕಾರ್ಯದರ್ಶಿ ರವಿ ಸೋವೂರು, ಬಿಜೆಪಿ ಮಂಡಲ ಉಪಾಧ್ಯಕ್ಷ ರವಿ ಶಂಕರ್ ಸೋಮೇಶ್ವರ, ಪ್ರಮುಖರಾದ ಗಣೇಶ್ ಕಾಪಿಕಾಡು ಭಾಗವಹಿಸಿದ್ದರು.

---

# ಭಗವಂತ ಖೂಬಾ ಹತ್ತು ವರ್ಷದಲ್ಲಿ ಹತ್ತು ದಿವಸ ಕೂಡ ಬಂದಿಲ್ಲ

## • ಕ್ಷೇತ್ರಕ್ಕೆ ಕೊಡುಗೆ ಬರೀ ಕುರ್ಚಿಗಳು ಮಾತ್ರ: ಜಿಪಂ.ಮಾಜಿ ಅಧ್ಯಕ್ಷ ದೀಪಕನಾಗ್ ಪುಣ್ಯಶೇಟ್ಟಿ ಲೇವಡಿ

• **ಉದಯವಾಹಿನಿ,ಚಿಂಚೋಳಿ**

ಖಂಡ್ರೆ ಕುಟುಂಬವು ರಾಜ್ಯ ಜಿಲ್ಲೆಯಾದ್ಯಂತ ಸಾಕಷ್ಟು ಸೇವೆ ಮಾಡಿದ್ದಾರೆ ಆದರೆ ಭಗವಂತ ಖೂಬಾ ಹತ್ತು ವರ್ಷದಲ್ಲಿ ಹತ್ತು ದಿನ ಕೂಡ ಕ್ಷೇತ್ರಕ್ಕೆ ಬಂದಿಲ್ಲ ಕ್ಷೇತ್ರಕ್ಕೆ ಕೊಟ್ಟ ಕೊಡುಗೆ ಬರೀ ಕುರ್ಚಿಗಳು ಮಾತ್ರ ಎಂದು ಜಿಪಂ. ಮಾಜಿ ಅಧ್ಯಕ್ಷ ದೀಪಕನಾಗ್ ಪುಣ್ಯ ಶೇಟ್ಟಿ ಲೇವಡಿ ಮಾಡಿದರು.

ತಾಲ್ಲೂಕಿನ ಐನೋಳ್ಳಿ ಗ್ರಾಮದಲ್ಲಿ ಬೀದರ ಲೋಕಸಭಾ ಚುನಾವಣೆಯ ನಿಮಿತ್ತ ಕಾಂಗ್ರೆಸ್ ಪಕ್ಷದ ಪ್ರಮುಖ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ನರೇಂದ್ರ ಮೋದಿಯವರ ಮುಖ ನೋಡಿ ಮತ ಚಲಾಯಿಸಿದರೆ ಅಭಿವೃದ್ಧಿ ಆಗಲ್ಲ ಜನರ ಮದ್ಯೆ ಸಿಗುವ ಸಾಗರ್ ಖಂಡ್ರೆಯವರಿಗೆ ಬಹುಮತದಿಂದ ಗೆಲ್ಲಿಸಿದರೆ ಅಭಿವೃದ್ಧಿಯಾಗಲಿದೆ.


ಉದಯವಾಹಿನಿ ಚಿತ್ರ


**ಉದ್ಯೋಗ ಪತಿಗಳು ಮಾತ್ರ**

ಭಗವಂತ ಖೂಬಾ, ಪ್ರಧಾನಿ ಮೋದಿಯವರು ಕ್ಷೇತ್ರಕ್ಕೆ ಯಾವುದೇ ಯೋಜನೆ ನೀಡದೆ ನಿರ್ಲಕ್ಷ್ಯ ವಹಿಸಿದ್ದು, ಬಿಜೆಪಿಯಲ್ಲಿ ಉದ್ಯೋಗಪತಿಗಳು ಮಾತ್ರ ಶ್ರೀಮಂತರಾಗುತ್ತಿದ್ದು ಕಾರಣ ಹೆಚ್ಚಿನ ಮತಗಳು ಸಾಗರ್ ಖಂಡ್ರೆ ನೀಡಿ ಗೆಲ್ಲಿಸಿ ಭಗವಂತ ಖೂಬಾಗೆ ಮನೆಗೆ ಕಳುಹಿಸಬೇಕು ಎಂದರು. ಬೀದರ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಸಾಗರ್ ಖಂಡ್ರೆ, ಮಾತನಾಡಿ ಭಗವಂತ ಖೂಬಾರವರು ಔರದ್ ತಾಲ್ಲೂಕಿನಲ್ಲಿ ರೈತ ಗೊಬ್ಬರ ಕೇಳಿದರೆ ಅಮಾನತ್ತು ಮಾಡಿದ್ದಾರೆ,ಅಭಿವೃದ್ಧಿ ಬಗ್ಗೆ ಕೇಳಿದರೆ ಗರ್ವದಿಂದ ಖೂಬಾ ವರ್ತನೆ ಮಾಡುತ್ತಾರೆ.

ವ್ಯಯಕ್ತಿಕವಾಗಿ ನನ್ನ ಗ್ಯಾರಂಟಿ ಸದಾ ನಿಮ್ಮ ಜೊತೆ 24ತಾಸು ನಿಮ್ಮ ಜೋತೆಯಲ್ಲಿರುತ್ತೇನೆ ನನ್ನು ಗೆಲ್ಲಿಸಿ ಜನರ ಅಪೇಕ್ಷೆ ಮೀರಿ ಅಭಿವೃದ್ಧಿ ಕೆಲಸ ಮಾಡುತ್ತೇನೆ ಎಂದರು. ಕೆಪಿಸಿಸಿ ಉಪಾಧ್ಯಕ್ಷ ಸುಭಾಷ್ ರಾಠೋಡ್, ಮಾಜಿ ಶಾಸಕ ಕೈಲಾಸನಾಥ ಪಾಟೀಲ, ಪ್ರಚಾರ ಸಮಿತಿ ಅಧ್ಯಕ್ಷ ಲಕ್ಷ್ಮಣ ಆವುಂಟಿ, ಎಸ್ಸಿ ಎಸ್ಟಿ ಘಟಕ ಅಧ್ಯಕ್ಷ ಸಂತೋಷ ಗುತ್ತೇದಾರ, ಜಿಲ್ಲಾಧ್ಯಕ್ಷ ಜಗದೇವ ಗುತ್ತೇದಾರ, ಪುರಸಭೆ ಸದಸ್ಯ ಆನಂದ ಟೈಗರ್, ಲಕ್ಷ್ಮಿದೇವಿ ಕೊರವಿ, ಪ್ರಗತಿಪರ ರೈತ ಬಾಬುರಾವ ಪಾಟೀಲ, ಲೋಕೇಶ, ಮಾತನಾಡಿದರು. ವಿಜಯಕುಮಾರ ರೋಟ್ಟಿ ಸ್ವಾಗತಿಸಿ ನಿರೂಪಿಸಿದರು, ಮಶಾಕ್ ಲಕಪತಿ ವಂದಿಸಿದರು. ಈ ಸಂದರ್ಭದಲ್ಲಿ ತಾಲ್ಲೂಕಾಧ್ಯಕ್ಷ ಬಸವರಾಜ ಮಾಲಿ, ಇಬ್ರಾಹಿಂ ಸಾಬ್ ದೇಗಲ ಮಡಿ, ಅಲಾವೋದ್ದೀನ್ ಅನ್ಸಾರಿ, ಚಿಂತನ್ ರಾಠೋಡ್, ಸೇರಿದಂತೆ ಅನೇಕರಿದ್ದರು.

**ನಾನು ಜನರ ಯಾವುದೇ ಕೆಲಸ ಇದ್ದರೆ 24ಗ7 ಸದಾ ಜನರ ಧ್ವನಿಯಾಗಿ ಕೆಲಸ ಮಾಡುತ್ತೇನೆ, ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ಬಂದರೆ ರೈತರಿಗೆ ಬೆಳೆಗೆ ಸೂಕ್ತ ಬೆಂಬಲ ಬೆಲೆ ನಿಡುತ್ತೇವೆ, ಉದ್ಯೋಗ ಖಾತರಿಯಲಿ 400ರೂ. ಕೊಡುತ್ತೇವೆ, ಯುವಕರಿಗೆ ಉದ್ಯೋಗದ ತರಬೇತಿ ಕೊಟ್ಟು 1ಲಕ್ಷ ರೂ. ಕೊಡುತೇವೆ, ಮಹಿಳಾ ಯಜಮಾನಿಗೆ ವರ್ಷಕ್ಕೆ 1ಲಕ್ಷ ರೂ.ಕೊಡುತ್ತೇವೆ, ಭೂತ್ ಗೆದ್ದರೆ ಮಾತ್ರ ಚುನಾವಣೆ ಗೆಲ್ಲಬಹುದು**

**-ದೀಪಕನಾಗ್ ಪುಣ್ಯಶೇಟ್ಟಿ, ಮಾಜಿ ಅಧ್ಯಕ್ಷ**

---

## ಮಿನಿ ನ್ಯೂಸ್

### ಅಕ್ರಮ ದಾಸ್ತಾನು: 240 ಕ್ವಿಂಟಲ್ ಪಡಿತರ ಅಕ್ಕಿ ಜಪ್ತಿ ಓರ್ವ ಬಂಧನ


ಉದಯವಾಹಿನಿ ಚಿತ್ರ

• **ಉದಯವಾಹಿನಿ,ಚಿಂಚೋಳಿ**

ತಾಲ್ಲೂಕಿನ ಹಸರಗುಂಡಗಿ ಗ್ರಾಮದ ಮನೆಯೊಂದರಲ್ಲಿ ಆಕ್ರಮವಾಗಿ ದಾಸ್ತಾನು ಮಾಡಿದ 240ಕ್ವಿಂಟಲ್ ಪಡಿತರ ಅಕ್ಕಿ ಜಪ್ತಿ ಮಾಡಿ ಓರ್ವನನ್ನು ಬಂಧಿಸಲಾಗಿದೆ. ಹಸರಗುಂಡಗಿ ಗ್ರಾಮದ ಶರಣಸಿದ್ದಪ್ಪ ಶಂಕ್ರಪ್ಪಾ ಹೀರಾಪುರ ಬಂಧಿತ ಆರೋಪಿ ಚಿಂಚೋಳಿ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಶರಣಸಿದ್ದಪ್ಪರವರ ಮನೆಯ ಎರಡು ಕೋಣೆಯಲ್ಲಿ 480 ಪ್ಲಾಸ್ಟಿಕ್ ಚೀಲಗಳಲ್ಲಿ ಸುಮಾರು 240ಕ್ವಿಂಟಲ್ ಪಡಿತರ ಅಕ್ಕಿ ಪತ್ತೆಯಾಗಿದೆ ಈ ದಾಸ್ತಾನಿಗೆ ಯಾವುದೇ ದಾಖಲೆ ಹಾಗೂ ಪರವಾನಿಗೆ ಇರಲಿಲ್ಲ ಎಂದು ಆಹಾರ ನಿರೀಕ್ಷಕ ರಾಜು ಪಂಚಾಳ ತಿಳಿಸಿದ್ದಾರೆ.

ಖಚಿತ ಮಾಹಿತಿ ಮೇರೆಗೆ ಆಹಾರ ಇಲಾಖೆಯ ರಾಜು ಪಂಚಾಳ ಮತ್ತು ಚಿಂಚೋಳಿ ಪೋಲಿಸ್ ಠಾಣೆಯ ಪಿಎಸ್ಐ ಸಿದ್ದೇಶ್ವರ ಗಿರಡೆ, ರಮೇಶ, ಅಮೀರ ಅಲಿ, ನಾಗರಾಜ ಶೇಳ್ಳಕೆ, ಸೇರಿ ದಾಳಿ ನಡೆಸಲಾಯಿತು ಒಬ್ಬ ಬಂಧನ ಇನ್ನೊಬ್ಬ ಪರಾರಿಯಾಗಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

### ಇಂದಿರಾ ನಗರ ಹನುಮಾನ್ ಜಾತ್ರಾ ಮಹೋತ್ಸವ

• **ಉದಯವಾಹಿನಿ, ಮುದ್ದೇಬಿಹಾಳ**

ಪ್ರತಿ ವರ್ಷದಂತೆ ಈ ವರ್ಷವೂ ಪಟ್ಟಣದ ಇಂದಿರಾ ನಗರದ ಶ್ರೀ ಹನುಮಾನ್ ಜಾತ್ರಾ ಮಹೋತ್ಸವ ಎಪ್ರಿಲ್ 22, 23 ರಂದು ಹಿಂದೂ ಮುಸ್ಲಿಮ್ ಭಾವೈಕ್ಯತೆಯಿಂದ ಆಚರಿಸಲಾಗುತ್ತದೆ ಎಂದು ಜೈ ಹನುಮಾನ್ ಸಮಿತಿ ಟ್ರಸ್ಟ್ ಇಂದಿರಾ ನಗರ ಅಧ್ಯಕ್ಷ ರಾಮು ದಳವಾಯಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಏ. 22 ಸೋಮವಾರ ಬೆಳಗ್ಗೆ ಹಣಮಂತನಿಗೆ ವಿಶೇಷ ಪೂಜೆ ನಂತರ ಸಾಯಂಕಾಲ 4 ಗಂಟೆಗೆ ಪಟ್ಟಣದ ಬಜಾರ್ ಹನುಮಾನ್ ಮಂದಿರದಿಂದ ಕಳಸ ಮೆರವಣಿಗೆ ಕುಂಭ ಮೆರವಣಿಗೆ ಸಕಲ ಮಂಗಲವಾದ್ಯಗಳೊಂದಿಗೆ ಮಾಡಲಾಗುತ್ತದೆ ರಾತ್ರಿ 10 ಗಂಟೆಗೆ ನಾಲತವಾಡ ವೀರೇಶ್ವರ ನಾಟ್ಯ ಸಂಘದಿಂದ ಮಗ ಹೋದರು ಮಾಂಗಲ್ಯ ಬೇಕು ನಾಟಕ ಪ್ರದರ್ಶನ

ಏ. 23 ಮಂಗಳವಾರ ಹನುಮ ಜಯಂತಿಯಂದು ಬೆಳಗ್ಗೆ 6 ಗಂಟೆಗೆ ರುದ್ರಾಭಿಷೇಕ ಹೋಮ ಹವನ ಮಧ್ಯಾಹ್ನ 12:30 ಕ್ಕೆ ಅನ್ನ ಸಂತರ್ಪಣೆ ಮಧ್ಯಾಹ್ನ 3 ಗಂಟೆಗೆ ಇಂದಿರಾ ನಗರದ ಟಿಎಸ್ ಎಸ್ ಪ್ರೌಢಶಾಲೆಯಲ್ಲಿ ಕಬಡ್ಡಿ ಪಂದ್ಯಾವಳಿ ಜರುಗಲಿದ್ದು ಸಾಯಂಕಾಲ 5;30ಕ್ಕೆ ಹನುಮಾನ್ ದೇವಾಲಯದ ಕಳಸಾರೋಹಣ ರಾತ್ರಿ 10 ಗಂಟಗೆ ನಗಹಬ್ಬ ಕಾರ್ಯಕ್ರಮಗಳು ಜರುಗಲಿವೆ ಎಂದು ಪತ್ರಿಕೆ ಹೇಳಿಕೆಯಲ್ಲಿ ಗೌರವಧ್ಯಕ್ಷ ಶಿವು ಶಿವಪುರ, ಅಧ್ಯಕ್ಷ ರಾಮು ದಳವಾಯಿ, ಉಪಾಧ್ಯಕ್ಷ ಸಿದ್ದು ತಳ್ಳಳ್ಳಿ, ನಾರಾಯಣ ಮಿರಜಕರ, ಅಮರೇಶ ಉಪ್ಪಲದಿನ್ನಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ 96117 22789, 814769185, 988245889 ಸಂಪರ್ಕಿಸಬಹುದು.

### ಕೆ-ಸಿಇಟಿ ಪರೀಕ್ಷೆಯಲ್ಲಿ ಪಠ್ಯದಲ್ಲಿಲ್ಲದ ಪ್ರಶ್ನೆಗಳು

• **ಉದಯವಾಹಿನಿ, ಬೀದರ್**

ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಗುರುವಾರ ನಡೆಸಿದ ಕೆ-ಸಿಇಟಿಯಲ್ಲಿನ ಜೀವವಿಜ್ಞಾನ ವಿಷಯದ ಪರೀಕ್ಷೆಯಲ್ಲಿ ಪಠ್ಯದಿಂದ ಕೈಬಿಟ್ಟಿರುವ ವಿಷಯಗಳಿಗೆ ಸಂಬಂಧಿಸಿದಂತೆ 10 ಪ್ರಶ್ನೆಗಳನ್ನು ಕೇಳಿರುವುದರಿಂದ ವಿದ್ಯಾರ್ಥಿಗಳು ಸಮಸ್ಯೆ ಎದುರಿಸಬೇಕಾಯಿತು. ಪಠ್ಯದಿಂದ ಕೈಬಿಟ್ಟಿದ್ದ ಎನ್‌ವೈರಾನ್‌ಮೆಂಟಲ್ ಇಶ್ಯೂಸ್, ಇಕೋಸಿಸ್ಟಮ್, ಆರ್ಗನಿಸಮ್ ಪಾಪ್ಯುಲೇಶನ್, ಸ್ಟ್ರಾಟರ್ಜಿ ಫಾರ್ ಎನ್‌ಹ್ಯಾನ್ಸ್‌ಮೆಂಟ್ ಇನ್ ಫುಡ್ ಪ್ರೊಡಕ್ಷನ್, ಟ್ರಾನ್ಸಪೋರ್ಟ್ ಇನ್ ಪ್ಲ್ಯಾಂಟ್ಸ್ ಪಠ್ಯಗಳಿಂದ 10 ಪ್ರಶ್ನೆಗಳನ್ನು ಕೇಳಲಾಗಿದೆ.

ಒಟ್ಟು 60 ಪ್ರಶ್ನೆಗಳ ಪೈಕಿ ಪಠ್ಯದಿಂದ ಕಡಿತಗೊಳಿಸಿದ ಪಾಠಗಳಿಗೆ ಸಂಬಂಧಿಸಿದಂತೆ 10 ಪ್ರಶ್ನೆಗಳನ್ನು ಕೇಳಲಾಗಿದೆ. ಇದರಿಂದಾಗಿ ವಿದ್ಯಾರ್ಥಿಗಳಲ್ಲಿ ವೃತ್ತಿಪರ ಕೋರ್ಸ್‌ಗಳ ರ್‍ಯಾಂಕ್ ಕುಸಿಯುವ ಆತಂಕ ಎದುರಾಗಿದೆ. ಈ ಕುರಿತು ವಿದ್ಯಾರ್ಥಿಗಳು, ಪಾಲಕರು ನಮ್ಮನ್ನು ಪ್ರಶ್ನಿಸುತ್ತಿದ್ದಾರೆ. ರಾಜ್ಯದಲ್ಲಿ ಒಟ್ಟು ಮೂರೂವರೆ ಲಕ್ಷ ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದಾರೆ. ಕೂಡಲೇ ಪರೀಕ್ಷಾ ಪ್ರಾಧಿಕಾರದ ಅಧಿಕಾರಿಗಳು ಈ ಕಡೆಗೆ ಗಮನಹರಿಸಿ ಮಕ್ಕಳಿಗೆ ನ್ಯಾಯ ಕೊಡಬೇಕು' ಎಂದು ಭಾಲ್ಕಿ ತಾಲ್ಲೂಕಿನ ಕರಡ್ಯಾಳನ ಡಾ.ಚನ್ನಬಸವೇಶ್ವರ ಗುರುಕುಲ ವಿಜ್ಞಾನ ಸಂಯುಕ್ತ ಕಾಲೇಜಿನ ಪ್ರಾಂಶುಪಾಲ ಬಸವರಾಜ ಮೊಳಕೇರೆ ಆಗ್ರಹಿಸಿದ್ದಾರೆ.

### ಸಂಗಣ್ಣ ಕರಡಿ ಕಾಂಗ್ರೆಸ್ ಸೇರಿದ್ದರಿಂದ ನಷ್ಟವಿಲ್ಲ: ಜನಾರ್ಧನ ರೆಡ್ಡಿ

• **ಉದಯವಾಹಿನಿ, ರಾಯಚೂರು**

ಕೊಪ್ಪಳದ ಹಾಲಿ ಸಂಸದ ಸಂಗಣ್ಣ ಕರಡಿ ಕಾಂಗ್ರೆಸ್ ಸೇರಿರುವುದರಿಂದ ಬಿಜೆಪಿಗೆ ಯಾವುದೇ ನಷ್ಟವಿಲ್ಲ. ಅವರ ಕುಟುಂಬ ಸದಸ್ಯರು, ಅವರ ನೂರು ಜನ ಆತ್ಮೀಯರು ಪಕ್ಷ ತೊರೆದ ಮಾತ್ರಕ್ಕೆ ಏನೂ ಆಗುವುದಿಲ್ಲ. ಕೊಪ್ಪಳದಲ್ಲಿ ಬಿಜೆಪಿ ಗೆಲ್ಲುವುದು ಶತಸಿದ್ಧ' ಎಂದು ಗಂಗಾ ವತಿ ಶಾಸಕ ಗಾಲಿ ಜನಾರ್ಧನ ರೆಡ್ಡಿ ತಿಳಿಸಿದರು.



ದೇಶದಲ್ಲಿ ಎನ್‌ಡಿಎ ಸರ್ಕಾರ ಪುನಃ ಅಧಿಕಾರಕ್ಕೆ ಬರಲಿದೆ, ಸಂಸ್ಕಾರವಿಲ್ಲದೇ ಮಾತನಾಡುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ್ ತಂಗಡಗಿ ಅವರ ಹೇಳಿಕೆಗಳು ಅವರಿಗೆ ಮುಳುವಾಗಲಿದೆ' ಎಂದು ಗುರುವಾರ ಮಾಧ್ಯಮ ಪ್ರತಿನಿಧಿಗಳಿಗೆ ಪ್ರತಿಕ್ರಿಯಿಸಿದರು.

'ದೇವೇಗೌಡರು ಪ್ರಧಾನಮಂತ್ರಿ ನರೇಂದ್ರ ಮೋದಿಯವರನ್ನು ಬರಮಾಡಿಕೊಂಡ ರೀತಿ, ಅವರ ಬಗ್ಗೆ ಮಾತನಾಡಿದ ರೀತಿ ಇಡೀ ದೇಶದ ಗೌರವ ಹೆಚ್ಚುವಂತೆ ಮಾಡಿದೆ. ಆದರೆ, ಅವರ ಬಗ್ಗೆ ಡಿ.ಕೆ. ಶಿವಕುಮಾರ, ಶಿವರಾಜ್ ತಂಗಡಗಿ ಪ್ರಧಾನಿಯವರಿಗೆ ಕಪಾಳಮೋಕ್ಷ ಮಾಡಿ ಎಂದು ಹೇಳುವ ಮೂಲಕ ನಗೆಪಾಟಲಿಗೆ ಈಡಾಗಿದ್ದಾರೆ. ಕಾಂಗ್ರೆಸ್‌ನಲ್ಲಿ ಸಂಸ್ಕೃತಿಯೇ ಇಲ್ಲ' ಎಂದು ಟೀಕಿಸಿದರು.

# ದಕ್ಷಿಣ ಭಾರತದಲ್ಲಿ ಬಿಜೆಪಿಗೆ ಬೇಕೇ ಬೇಕು ಹಾಫ್ ಸೆಂಚುರಿ

## ಸೌಥ್ ಇಂಡಿಯಾ ಗೆಲ್ಲಲು ಮೋದಿ ನೇತೃತ್ವದ ಕಮಲ ಪಡೆಯ ತಂತ್ರ ಹೇಗಿದೆ? ತಮಿಳುನಾಡು, ಕೇರಳಕ್ಕೆ ಬಿಜೆಪಿಯ ಮಾಸ್ಟರ್ ಪ್ಲಾನ್?

**ಹೊಸದಿಲ್ಲಿ :** ಟೆಸ್ಟ್ ಕ್ರಿಕೆಟ್ ಪಂದ್ಯದಲ್ಲಿ 400 ರನ್ ಗಳಿಸಿ ವಿಶ್ವದಾಖಲೆ ಸೃಷ್ಟಿಸಿದ್ದ ವೆಸ್ಟ್ ಇಂಡಿಸ್ ದೈತ್ಯ ಬ್ರಿಯಾನ್ ಲಾರಾ ತಮ್ಮ ಹಿಂದಿನ 375 ರನ್‌ಗಳ ಗರಿಷ್ಠ ದಾಖಲೆಯನ್ನು ಮುರಿಯಲು 10 ವರ್ಷ ತೆಗೆದುಕೊಂಡಿದ್ದರು. ಈಗ ಅದೇ 400 ಎಂಬ ಸಂಖ್ಯೆ ಕ್ರಿಕೆಟ್ ಅನ್ನೇ ಧರ್ಮವನ್ನಾಗಿ ಮಾಡಿಕೊಂಡ ಭಾರತದ ಲೋಕಸಭಾ ಚುನಾವಣೆ ವೇಳೆ ಬಹಳಷ್ಟು ಕೇಳಿ ಬರುತ್ತಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಈ ಸಲ ಎನ್‌ಡಿಎ 400ಕ್ಕಿಂತ ಹೆಚ್ಚು ಸ್ಥಾನಗಳನ್ನು ಗೆಲ್ಲಲಿದೆ ಎಂಬ ವಿಶ್ವಾಸದಲ್ಲಿದ್ದಾರೆ. ಇದಕ್ಕಾಗಿ ಕಾಂಗ್ರೆಸ್ ಗ್ಯಾರಂಟಿಗಳ ಎದುರು ಮೋದಿ ಗ್ಯಾರಂಟಿ ಪ್ರಯೋಗ ಕೂಡ ನಡೆದಿದೆ.

ಎನ್‌ಡಿಎ 400 ಸ್ಥಾನಗಳ ಗುರಿಯನ್ನು ಮುಟ್ಟುತ್ತಾ ಎಂಬುದು ಜೂನ್ 4ರಂದು ಗೊತ್ತಾಗಲಿದೆ. ಆದರೆ, 400 ಸ್ಥಾನಗಳ ಗುರಿಯನ್ನು ತಲುಪಬೇಕಾದರೆ 130 ಲೋಕಸಭಾ ಕ್ಷೇತ್ರಗಳನ್ನು ಹೊಂದಿರುವ ದಕ್ಷಿಣ ಭಾರತದಲ್ಲಿ ಉತ್ತಮವಾದ ಸಾಧನೆಯನ್ನು ಮಾಡಲೇಬೇಕಿದೆ. ಉತ್ತರ ಭಾರತದಲ್ಲಿ ಬಿಜೆಪಿಗೆ ಇರುವಷ್ಟು ನೆಲೆ ದಕ್ಷಿಣ ಭಾರತದಲ್ಲಿ ಇದುವರೆಗೂ ಸಿಕ್ಕಿಲ್ಲ. ಆದ್ದರಿಂದ ಈ ಬಾರಿ ದಕ್ಷಿಣ ಭಾರತವನ್ನು ಟಾರ್ಗೆಟ್ ಮಾಡಿರುವ ಬಿಜೆಪಿ ರಣತಂತ್ರವನ್ನು ರೂಪಿಸಿದೆ. ಚುನಾವಣಾ ವರ್ಷದ ಹಿನ್ನೆಲೆ ಪ್ರಧಾನಿ ನರೇಂದ್ರ ಮೋದಿ ಈ ವರ್ಷದ ಆರಂಭದಿಂದಲೇ ದಕ್ಷಿಣ ಭಾರತಕ್ಕೆ 24ಕ್ಕಿಂತ ಹೆಚ್ಚು ಬಾರಿ ಬಂದಿದ್ದಾರೆ. ಅಭಿವೃದ್ಧಿ ಯೋಜನೆಗಳಿಗೆ



ಮೋದಿ ಗ್ಯಾರಂಟಿ ಪ್ರಯೋಗ

ಚಾಲನೆ, ಶಂಕುಸ್ಥಾಪನೆ, ಎನ್‌ಡಿಎ ಅಭ್ಯರ್ಥಿಗಳ ಪರ ರ‍್ಯಾಲಿ ನಡೆಸಲು ದಕ್ಷಿಣ ಭಾರತಕ್ಕೆ ಹಿಂದೆಂದಿಗಿಂತಲೂ ಹೆಚ್ಚೇ ಭೇಟಿ ನೀಡಿದ್ದು, ಡಿಎಂಕೆ, ಕಾಂಗ್ರೆಸ್, ಬಿಆರ್‌ಎಸ್ ಹಾಗೂ ಎಡಪಕ್ಷಗಳ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಮೋದಿ ಅಷ್ಟೇ ಅಲ್ಲದೇ ಕೇಂದ್ರದ ಇತರೆ ಸಚಿವರು, ಬಿಜೆಪಿಯ ಹಿರಿಯ ನಾಯಕರು ಕೂಡ ದಕ್ಷಿಣ ಭಾರತಕ್ಕೆ ನಿಯಮಿತವಾಗಿ ಭೇಟಿ ನೀಡಿ ಪ್ರಚಾರದಲ್ಲಿ ತೊಡಗಿಕೊಂಡಿದ್ದಾರೆ.

ಸಂಸತ್‌ನ ಚಳಿಗಾಲದ ಅಧಿವೇಶನದ ಬೆನ್ನಲ್ಲೇ ದಕ್ಷಿಣ ಭಾರತದ 84 ಕ್ಷೇತ್ರಗಳನ್ನು ಗುರುತಿಸಿ ಅಲ್ಲಿಗೆ ವಿಸ್ತಾರಕರನ್ನು ಕಳುಹಿಸಿತ್ತು. ಈ ಮೂಲಕ ಕಳಪೆ ಸಾಧನೆ ಮಾಡಿದ ಕ್ಷೇತ್ರಗಳಲ್ಲಿ ತನ್ನ ನೆಲೆಯನ್ನು ಗಟ್ಟಿಮಾಡಿಕೊಳ್ಳುವ ಪ್ರಯತ್ನವನ್ನು ಮಾಡಿತ್ತು. ಅದಲ್ಲದೇ ದಕ್ಷಿಣ ಭಾರತದ ಬಹುತೇಕ ಬಿಜೆಪಿ ಅಭ್ಯರ್ಥಿಗಳು ಪ್ರಧಾನಿ ನರೇಂದ್ರ ಮೋದಿ ಅವರ ನಾಮಬಲವನ್ನೇ ನೆಚ್ಚಿಕೊಂಡಿದ್ದು, ಅವರ ಹೆಸರಲ್ಲಿಯೇ ಚುನಾವಣೆ ಎದುರಿಸುತ್ತಿದ್ದಾರೆ.

### ಕೇರಳದಲ್ಲಿ ಬಿಜೆಪಿ ಕಥೆ ಏನು?

**ದೇವರ ನಾಡು ಕೇರಳದ ರಾಜಕೀಯದಲ್ಲಿ ಯುಡಿಎಫ್ ಮತ್ತು ಎಲ್‌ಡಿಎಫ್ ಪ್ರಾಬಲ್ಯವಿದ್ದು, ಇಲ್ಲಿ ಬಿಜೆಪಿಗೆ ನೆಲೆಯೇ ಇಲ್ಲ. ಈ ನಿಟ್ಟಿನಲ್ಲಿ ಈ ಬಾರಿ ಏನಾದರೂ ಮಾಡಿ ಬದಲಾವಣೆ ತರಬೇಕೆಂದುಕೊಂಡಿರುವ ಬಿಜೆಪಿ ಕೇಂದ್ರ ಸಚಿವ ರಾಜೀವ್ ಚಂದ್ರಶೇಖರ್ ಅವರನ್ನು ತಿರುವನಂತಪುರಂನಲ್ಲಿ ಮೂರು ಬಾರಿಯ ಸಂಸದ ಶಶಿ ತರೂರ್ ಎದುರು ಕಣಕ್ಕಿಳಿಸಿದೆ.**

**ದ್ರಾವಿಡರ ನೆಲದಲ್ಲಿ ಕದನ:** ಉತ್ತರ ಭಾರತದಲ್ಲಿ ದಿನದಿಂದ ದಿನಕ್ಕೆ ಗಣನೀಯ ಪ್ರಮಾಣದಲ್ಲಿ ವೋಟ್ ಬ್ಯಾಂಕ್ ಅನ್ನು ಹೆಚ್ಚಿಸಿಕೊಳ್ಳುತ್ತಿರುವ ಬಿಜೆಪಿಯ ವೋಟ್ ಶೇರ್ ತಮಿಳುನಾಡಿನಲ್ಲಿ ಶೇ.5ಕ್ಕಿಂತ ಕಡಿಮೆ ಇದೆ. ಇಲ್ಲಿ ಪ್ರಾದೇಶಿಕ ಪಕ್ಷಗಳ ಪ್ರಾಬಲ್ಯ ಇದ್ದು, ಬಿಜೆಪಿಯ ಪ್ಯಾನ್ ಇಂಡಿಯಾ ಪಕ್ಷದ ಕನಸಿಗೆ ತಮಿಳುನಾಡು ಅಡ್ಡಿಯಾಗಿದೆ. ಆದರೆ, ಈ ಬಾರಿ ಹೊಸ ಮುಖ ಅಣ್ಣಾಮಲೈ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರ ಪ್ರಚಾರದಿಂದ ತಮಿಳುನಾಡಿನಲ್ಲಿ ಬಿಜೆಪಿಗೆ ಹೊಸ ನಿರೀಕ್ಷೆ ಸೃಷ್ಟಿಯಾಗಿದೆ. ಮತಗಳಿಕೆ ಪ್ರಮಾಣ ಹೆಚ್ಚಳ ಮಾಡುವುದರೊಂದಿಗೆ ಒಂದಿಷ್ಟು ಕ್ಷೇತ್ರಗಳನ್ನು ಬಾಚಿಕೊಳ್ಳುವ ನಿಟ್ಟಿನಲ್ಲಿ ಕೇಸರಿ ಪಡೆ ಕೆಲಸ ಮಾಡಿದೆ.

### ದಕ್ಷಿಣ ಭಾರತಕ್ಕಾಗಿ ಬಿಜೆಪಿ ಬಿಗ್ ರಣತಂತ್ರ!

**ಕಳೆದ ಬಾರಿಯ ಚುನಾವಣೆಯಲ್ಲಿ ಬಿಜೆಪಿ ದಕ್ಷಿಣ ಭಾರತದ 130 ಕ್ಷೇತ್ರಗಳ ಪೈಕಿ ಕೇವಲ 29 ಕ್ಷೇತ್ರಗಳಲ್ಲಿ ಮಾತ್ರ ವಿಜಯದ ನಗೆ ಬೀರಿತ್ತು. ಅದರಲ್ಲಿ 25 ಕರ್ನಾಟಕ, ಉಳಿದ 4 ತೆಲಂಗಾಣದಿಂದ ಬಂದಿದ್ದವು. ತಮಿಳುನಾಡು, ಆಂಧ್ರಪ್ರದೇಶ ಹಾಗೂ ಕೇರಳದಲ್ಲಿ ಬಿಜೆಪಿಯ ಸಾಧನೆ ಶೂನ್ಯ ಆಗಿತ್ತು. ಈ ಹಿನ್ನೆಲೆ ದಕ್ಷಿಣ ಭಾರತದಲ್ಲಿ ಕೇಸರಿ ನೆಲೆಯನ್ನು ವಿಸ್ತರಿಸುವ ಶತಪ್ರಯತ್ನವನ್ನು ಬಿಜೆಪಿ ಮಾಡುತ್ತಿದೆ. ಕರ್ನಾಟಕದಲ್ಲಿ ಬಿಜೆಪಿಗೆ ನೆಲೆ ಇದ್ದು, ತೆಲಂಗಾಣ ಹಾಗೂ ಆಂಧ್ರಪ್ರದೇಶದಲ್ಲಿ ಜನಬೆಂಬಲ ನಿಧಾನವಾಗಿ ಹೆಚ್ಚಾಗುತ್ತಿದೆ. ಆದರೆ, ಬಿಜೆಪಿಗೆ ನಿಜವಾದ ಸವಾಲು ಎದುರಾಗಿರುವುದು ತಮಿಳುನಾಡು ಮತ್ತು ಕೇರಳದಲ್ಲಿ.**

ತಮಿಳುನಾಡಿಗೆ ಈ ವರ್ಷ ಬರೋಬ್ಬರಿ 8 ಬಾರಿ ಪ್ರಧಾನಿ ನರೇಂದ್ರ ಮೋದಿ ಆಗಮಿಸಿದ್ದು, ತಮಿಳಿಗರ ಮತಗಳನ್ನು ಸೆಳೆಯಲು ಹಲವು ಕೆಲಸಗಳನ್ನು ಮಾಡಿದ್ದಾರೆ. ದೇವಸ್ಥಾನಕ್ಕೆ ಭೇಟಿ, ತಮಿಳು ಭಾಷೆಗೆ ಆದ್ಯತೆ, ತಿರುವಳ್ಳುವರ್‌ರಂತಹ ವ್ಯಕ್ತಿಗಳ ಸ್ಮರಣೆ, ಕಚ್ಚತೀವು ಪ್ರದೇಶದ ವಿವಾದಗಳನ್ನು ನೆನಪಿಸುವ ಮೂಲಕ ಮತ ಸೆಳೆಯುವ ಪ್ರಯತ್ನವನ್ನು ಮೋದಿ ಮಾಡಿದ್ದಾರೆ. ಅದಲ್ಲದೇ ಅಣ್ಣಾಮಲೈ ಅವರ ತಳಹಂತದ ಹೋರಾಟ ಆಡಳಿತಾರೂಢ ಡಿಎಂಕೆಗೆ ಒಂದಿಷ್ಟು ಸವಾಲನ್ನು ತಂದಿದೆ. ಈ ಸಲ ಸಾಂಪ್ರದಾಯಿಕ ಮಿತ್ರ ಪಕ್ಷ ಎಐಎಡಿಎಂಕೆ ಜೊತೆ ಮೈತ್ರಿ ಮಾಡಿಕೊಳ್ಳದೇ 6 ಸಣ್ಣ ಸಣ್ಣ ಪಕ್ಷಗಳೊಂದಿಗೆ ಮೈತ್ರಿ ಮಾಡಿಕೊಂಡು ಚುನಾವಣೆ ಎದುರಿಸಿರುವುದು ಮತ್ತೊಂದು ವಿಶೇಷ. ಚುನಾವಣೆಗೂ ಮುನ್ನ ಈ ವರ್ಷ ಕೇರಳಕ್ಕೆ ಪ್ರಧಾನಿ ನರೇಂದ್ರ ಮೋದಿ ಒಟ್ಟು 7 ಸಲ ಬಂದಿದ್ದಾರೆ.

ರಾಮ ಮಂದಿರವನ್ನು ವಿಶು ಉಡುಗೊರೆ ಎಂದು ಪ್ರಣಾಳಿಕೆಯಲ್ಲಿ ಬಿಜೆಪಿ ಉಲ್ಲೇಖಿಸಿದೆ. ಜೊತೆಗೆ ನಾರಾಯಣಗುರು ಅವರಂತಹ ಸ್ಥಳೀಯ ಗಣ್ಯರನ್ನು ಸ್ಮರಣೆ ಮಾಡುವ ಕೆಲಸವನ್ನು ಮೋದಿ ಮಾಡಿದ್ದು, ಕೇರಳ ಸಿಎಂ ಪಿಣರಾಯಿ ವಿಜಯನ್ ವಿರುದ್ಧ ಭ್ರಷ್ಟಾಚಾರದ ಆರೋಪ ಮಾಡಿದ್ದಾರೆ. ಅದಲ್ಲದೇ ಎಸ್‌ಡಿಪಿಐ ಬೆಂಬಲ ಪಡೆಯುವ ಕಾಂಗ್ರೆಸ್ ನಡೆಯನ್ನು ಕೂಡ ಮೋದಿ ವಿರೋಧಿಸಿದ್ದು, ಮತದಾರರನ್ನು ಸೆಳೆಯಲು ಎಲ್ಲಾ ರೀತಿಯ ಪ್ರಯತ್ನವನ್ನು ಮಾಡಿದ್ದಾರೆ. ಚುನಾವಣಾ ಫಲಿತಾಂಶ ಬಂದ ದಿನವೇ ಎಷ್ಟು ಕ್ಷೇತ್ರಗಳಲ್ಲಿ ಬಿಜೆಪಿ ಗೆಲ್ಲು ಎಂಬುದನ್ನು ಕಾದು ನೋಡಬೇಕಿದೆ.

---

## ಗುಲಾಮರಾಗುವುದು ಬೇಡ, ಹಿಂದೂ ಎಂದು ಹೆಮ್ಮೆಯಿಂದ ಹೇಳಿ

**ನಾಗ್ಪುರ:** ದೇಶವಾಸಿಗಳಲ್ಲಿ ನಮ್ಮ ಅಸ್ಮಿತೆಯ ಅರಿವಿನ ಕೊರತೆಯಿದೆ ಎಂದು ಗಂಭೀರ ಆರೋಪ ಮಾಡಿರುವ ರಾಷ್ಟ್ರೀಯ ಸ್ವಯಂಸೇವಕ ಸಂಘದ ಮುಖ್ಯಸ್ಥ ಮೋಹನ್ ಭಾಗವತ್ ಅವರು ಜನರು ತಮ್ಮ ಗುರುತನ್ನು ಹಿಂದೂ ಎಂದು ಹೆಮ್ಮೆಯಿಂದ ಒಪ್ಪಿಕೊಳ್ಳಬೇಕು ಎಂದು ಕರೆ ನೀಡಿದ್ದಾರೆ.

ಮಹಾರಾಷ್ಟ್ರದ ನಾಗ್ಪುರದಲ್ಲಿ ನಡೆದ ರಾಷ್ಟ್ರೀಯ ಸ್ವಯಂಸೇವಕ ಸಂಘ ಎಂಬ ಪುಸ್ತಕದ ಬಿಡುಗಡೆ ಸಮಾರಂಭದಲ್ಲಿ ಆರ್‌ಎಸ್‌ಎಸ್ ಮುಖ್ಯಸ್ಥರು ಮಾತನಾಡಿದರು. ಮತ್ತೆ ಮತ್ತೆ ಯಾರಾದರೂ ಬಂದರೆ ನಮ್ಮ ತಪ್ಪುಗಳಿಂದ ನಾವು ಗುಲಾಮರಾಗುತ್ತೇವೆ. ಇದನ್ನು ಪರಿಹರಿಸಬೇಕಾಗಿದೆ. ಈ ಕಾಯಿಲೆಗೆ ಚಿಕಿತ್ಸೆ ನೀಡಬೇಕು, ಇಲ್ಲದಿದ್ದರೆ, ಅಂತಹವುಗಳು ನಡೆಯುತ್ತಲೇ ಇರುತ್ತವೆ. ನಾವು ಕೆಲವರಿಗೆ ಚಿಕಿತ್ಸೆ ನೀಡಬೇಕಾಗಿದೆ ಎಂದು ಅವರು ಹೇಳಿದರು.



ದೇಶವು ಇಡೀ ಸಮಾಜವನ್ನು ಸಾಮಾನ್ಯ ಥ್ರೆಡ್‌ನೊಂದಿಗೆ ಸಂಘಟಿಸುವ ಅಗತ್ಯವಿದೆ ಆದ್ದರಿಂದ ನಾವು ನಮ್ಮ ಗುರುತನ್ನು ಸ್ಪಷ್ಟಪಡಿಸಬಹುದು ಎಂದು ಅವರು ಹೇಳಿದರು.

ಧಿಕ್ಕರಣೆಯಿಂದಾಗಿ, ನಮ್ಮ ದೇಶದಲ್ಲಿ ನಾವು ಯಾರು ಮತ್ತು ನಮ್ಮವರು, ನಮ್ಮ ಗುರುತಿನ ಬಗ್ಗೆ ಜ್ಞಾನದ ಕೊರತೆಯಿದೆ ಮತ್ತು ಅದರ ಬಗ್ಗೆ ಸ್ಪಷ್ಟತೆ ಇಲ್ಲ. ಹಲವಾರು ವರ್ಷಗಳ ಗುಲಾಮಗಿರಿಯಿಂದಾಗಿ ಮಾನಸಿಕ ನಿಗ್ರಹವಿದೆ ಎಂದು ಅವರು ಆರೋಪಿಸಿದರು.

> **ನಾವು ನಮ್ಮೆಲ್ಲರನ್ನೂ ಒಂದುಗೂಡಿಸುವ ಸಾಮಾನ್ಯ ಸೂತ್ರದೊಂದಿಗೆ ಇಡೀ ಸಮಾಜವನ್ನು ಸಂಘಟಿಸಬೇಕಾಗಿದೆ. ನಾವು ನಮ್ಮ ಗುರುತನ್ನು ಸ್ಪಷ್ಟವಾಗಿ ತಿಳಿದುಕೊಳ್ಳಬೇಕು ಮತ್ತು ಜಗತ್ತಿಗೆ ತಿಳಿಸಬೇಕು. ನಾವು ಯಾರೆಂದು ನಮಗೆ ತಿಳಿದಿದ್ದರೆ ಆಗ ನಮಗೆ ಯಾರು ನಮ್ಮದು ಮತ್ತು ನಮ್ಮ ಗುರುತು ಎಂದು ತಿಳಿಯುತ್ತದೆ. ಹಿಂದೂಗಳು ಮತ್ತು ನಾವು ಹಿಂದೂಗಳು ಎಂದು ಹೆಮ್ಮೆಯಿಂದ ಹೇಳಬೇಕು**
> **-ಮೋಹನ್ ಭಾಗವತ್, ಮುಖ್ಯಸ್ಥ**

---

## ಡಿಎಂಕೆ, ಎಐಎಡಿಎಂಕೆಯಿಂದ 1,000 ಕೋಟಿ ರೂ. ಖರ್ಚು

**ಚೆನ್ನೈ:** ಮತದಾರರ ಮೇಲೆ ಪ್ರಭಾವ ಬೀರಲು ಡಿಎಂಕೆ ಮತ್ತು ಎಐಎಡಿಎಂಕೆ ಕೊಯಮತ್ತೂರಿನಲ್ಲಿ 1,000 ಕೋಟಿ ರೂ.ಗೂ ಹೆಚ್ಚು ಖರ್ಚು ಮಾಡಿದೆ ಎಂದು ತಮಿಳುನಾಡು ಬಿಜೆಪಿ ಅಧ್ಯಕ್ಷ ಮತ್ತು ಕೊಯಮತ್ತೂರು ಅಭ್ಯರ್ಥಿ ಕೆ.ಅಣ್ಣಾಮಲೈ ಆರೋಪಿಸಿದ್ದಾರೆ. ಲೋಕಸಭೆ ಚುನಾವಣೆಯ ಮೊದಲ ಹಂತದ ಮತದಾನದಲ್ಲಿ ಕರೂರಿನ ಉತ್ತುಪಟ್ಟಿಯಲ್ಲಿನ ಮತಗಟ್ಟೆಯಲ್ಲಿ ವೋಟ್ ಮಾಡಿದ ನಂತರ ಮಾತನಾಡಿದ ಅವರು, ಬಿಜೆಪಿಯ ವ್ಯಕ್ತಿಯೊಬ್ಬರು ತಮ್ಮ ಮೇಲೆ ಪ್ರಭಾವ ಬೀರಲು ಪ್ರಯತ್ನಿಸುತ್ತಿದ್ದಾರೆ ಎಂದು ಹೇಳುವ ಯಾವುದೇ ವ್ಯಕ್ತಿಯನ್ನು ವಿರೋಧ ಪಕ್ಷಗಳು ಕರೆತರಲು ಸಾಧ್ಯವಾದರೆ, ಅವರು ಆ ದಿನವೇ ರಾಜಕೀಯವನ್ನು ತೊರೆಯುತ್ತೇನೆ ಎಂದು ಸವಾಲು ಹಾಕಿದ್ದಾರೆ.

ತಮಿಳುನಾಡಿನ ಎಲ್ಲಾ 39 ಸ್ಥಾನಗಳಲ್ಲಿ ಮತದಾನ ನಡೆಯುತ್ತಿದೆ. ಕೊಯಮತ್ತೂರಿನಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಅಣ್ಣಾಮಲೈ ವಿರುದ್ಧ ಡಿಎಂಕೆ ನಾಯಕ ಗಣಪತಿ ಪಿ.ರಾಜ್ ಕುಮಾರ್ ಮತ್ತು ಅಖಿಲ ಭಾರತ ಅಣ್ಣಾ ದ್ರಾವಿಡ ಮುನ್ನೇತ್ರ ಕಳಗಂ ಎಐಎಡಿಎಂಕೆಯ ಸಿಂಗೈ ರಾಮಚಂದ್ರನ್ ಪ್ರಶ್ನಿದ್ದಾರೆ. ಕೊಯಮತ್ತೂರಿನಲ್ಲಿ ಡಿಎಂಕೆ, ಎಐಎಡಿಎಂಕೆ ನಾಯಕರು ಏನು ಮಾಡುತ್ತಿದ್ದಾರೆ ಎಂಬುದನ್ನು ಎಲ್ಲರೂ ನೋಡುತ್ತಿದ್ದಾರೆ. ಕೊಯಮತ್ತೂರಿನಲ್ಲಿ 1,000 ಕೋಟಿ ರೂ.ಗೂ ಹೆಚ್ಚು ಖರ್ಚು ಮಾಡಿವೆ. ಆದರೆ, ಬಿಜೆಪಿಯವರು ತಮ್ಮ ಮೇಲೆ ಪ್ರಭಾವ ಬೀರಲು ಪ್ರಯತ್ನಿಸುತ್ತಿದ್ದಾರೆ ಎಂದು ಯಾರಾದರೂ ಒಬ್ಬ ಮತದಾರನನ್ನು ಮಾಧ್ಯಮದ ಮುಂದೆ ಕರೆತಂದು ಹೇಳಿಸಿದರೆ, ನಾನು ಅದೇ ದಿನ ರಾಜಕೀಯ ತೊರೆಯುತ್ತೇನೆ ಎಂದು ಸವಾಲು ಹಾಕಿದ್ದಾರೆ.

ನಾನು ಈ ಚುನಾವಣೆಯಲ್ಲಿ ನಿಯಮದ ಪ್ರಕಾರ ಸ್ಪರ್ಧೆ ಮಾಡಿದ್ದೇನೆ. ಹಣದಿಂದ ಜನರನ್ನು ಖರೀದಿಸಬಹುದು ಎಂದು ಡಿಎಂಕೆ ಭಾವಿಸುತ್ತದೆ. ಎಐಎಡಿಎಂಕೆ ಕೂಡ ಅದೇ ದೋಣಿಯಲ್ಲಿ ಸಾಗಿದೆ ಎಂದು ದೂರಿದ್ದಾರೆ. ನಮ್ಮ ಜನರು ಪದೇ ಪದೇ ಜಿಲ್ಲಾಧಿಕಾರಿಗಳಿಗೆ ದೂರು ನೀಡಿದ್ದಾರೆ. ಆದರೂ ಸೂಕ್ತ ಕ್ರಮ ಕೈಗೊಂಡಿಲ್ಲ ಎಂದು ಅವರು ಕಿಡಿಕಾರಿದ್ದಾರೆ.

---

## ದುಬೈನಲ್ಲಿ ಭಾರಿ ಮಳೆ: ಪ್ರಯಾಣ ಮುಂದೂಡುವಂತ ಭಾರತೀಯರಿಗೆ ರಾಯಭಾರ ಕಚೇರಿ ಸಲಹೆ

**ಅಬುಧಾಬಿ:** ಅರಬ್ ಸಂಯುಕ್ತ ಸಂಸ್ಥಾನದಲ್ಲಿ ಭಾರಿ ಮಳೆ ಸುರಿಯುತ್ತಿದ್ದು, ಹಲವೆಡೆ ಪ್ರವಾಹದ ರೀತಿಯ ವಾತಾವರಣ ಸೃಷ್ಟಿಯಾಗಿದೆ. ಈ ಹಿನ್ನೆಲೆಯಲ್ಲಿ ಯುಎಇಗೆ ಪ್ರಯಾಣಿಸುವ ಮತ್ತು ಆ ಮೂಲಕ ಹಾದುಹೋಗುವ ವಿಮಾನಗಳಲ್ಲಿ ಪ್ರಯಾಣಿಸುವ ಭಾರತೀಯ ಪ್ರಯಾಣಿಕರು ವಿಮಾನಗಳ ಹಾರಾಟ ಸಾಮಾನ್ಯ ಸ್ಥಿತಿಗೆ ಮರಳುವವರೆಗೆ ಅನಿವಾರ್ಯವಲ್ಲದ ಪ್ರಯಾಣವನ್ನು ಮುಂದೂಡುವಂತೆ ಅಬುಧಾಬಿಯ ಭಾರತೀಯ ರಾಯಭಾರ ಕಚೇರಿ ಸಲಹೆ ನೀಡಿದೆ. ದುಬೈನ ಭಾರತೀಯ ಕಾನ್ಸುಲೇಟ್, ಪ್ರಯಾಣಿಕರ ಅನುಕೂಲದ ದೃಷ್ಟಿಯಿಂದ ಈಗಾಗಲೇ ಸಹಾಯವಾಣಿಯನ್ನೂ ಆರಂಭಿಸಿದ್ದಾರೆ.

ಅನಿಶ್ಚಿತತೆಯ ವಾತಾವರಣದ ಹಿನ್ನೆಲೆಯಲ್ಲಿ ವಿಮಾನಗಳ ಹಾರಾಟಕ್ಕೆ ತೊಡಕಾಗಿದ್ದು, ದುಬೈ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸುವ ವಿಮಾನಗಳ ಸಂಖ್ಯೆಯನ್ನು ಮಿತಿಗೊಳಿಸಲಾಗಿದೆ ಎಂದೂ ರಾಯಭಾರ ಕಚೇರಿ ತಿಳಿಸಿದೆ.

ಸದ್ಯದ ಪರಿಸ್ಥಿತಿ ಅನಿಶ್ಚಿತತೆಯಿಂದ ಕೂಡಿದ್ದು, ವಿಮಾನ ನಿಲ್ದಾಣದ ಕಾರ್ಯಾಚರಣೆಯನ್ನು ಸಾಮಾನ್ಯ ಸ್ಥಿತಿಗೆ ತರಲು ಅಧಿಕಾರಿಗಳು 24 ಗಂಟೆ ಶ್ರಮಿಸುತ್ತಿದ್ದಾರೆ.'ಆಯಾ ವಿಮಾನಗಳ ನಿರ್ಗಮನ ದಿನಾಂಕ ಮತ್ತು ಸಮಯದ ಬಗ್ಗೆ ವಿಮಾನಯಾನ ಸಂಸ್ಥೆಗಳಿಂದ ಅಂತಿಮ ದೃಢೀಕರಣದ ನಂತರವೇ ಪ್ರಯಾಣಿಕರು ವಿಮಾನ ನಿಲ್ದಾಣಕ್ಕೆ ಆಗಮಿಸಬಹುದು ಎಂದು ವಿಮಾನ ನಿಲ್ದಾಣದ ಅಧಿಕಾರಿಗಳು ಸಲಹೆ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ, ದುಬೈ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಪ್ರಯಾಣಿಸುವ, ಆ ಮಾರ್ಗದಲ್ಲಿ ಹಾದು ಹೋಗುವ ವಿಮಾನಗಳಲ್ಲಿ ಪ್ರಯಾಣಿಸುವ ಭಾರತೀಯ ಪ್ರಯಾಣಿಕರು ವಿ ಮಾನಗಳ ಕಾರ್ಯಾಚರಣೆಗಳು ಸಾಮಾನ್ಯ ಸ್ಥಿತಿಗೆ ಬರುವವರೆಗೂ ಅನಿವಾರ್ಯವಲ್ಲದ ಪ್ರಯಾಣವನ್ನು ಮರುಹೊಂದಿಸಲು ಸೂಚಿಸಲಾಗಿದೆ' ರಾಯಭಾರ ಕಚೇರಿ ತಿಳಿಸಿದೆ.

---

## ಫಿಲಿಫೈನ್ಸ್ ತಲುಪಿದ ಭಾರತದ ಬ್ರಹ್ಮೋಸ್ ಸೂಪರ್-ಸೋನಿಕ್ ಕ್ರೂಸ್ ಕ್ಷಿಪಣಿಗಳು

**ನವದೆಹಲಿ:** ಆಗ್ನೇಯ ಏಷ್ಯಾದ ದೇಶದೊಂದಿಗೆ ಶಸ್ತ್ರಾಸ್ತ್ರ ವ್ಯವಸ್ಥೆಗಳನ್ನು ಪೂರೈಸಲು 375 ಮಿಲಿಯನ್ ಅಮೆರಿಕನ್ ಡಾಲರ್ ಒಪ್ಪಂದಕ್ಕೆ ಸಹಿ ಹಾಕಿದ ಎರಡು ವರ್ಷಗಳ ನಂತರ ಇಂದು ಫಿಲಿಪ್ಪೀನ್ಸ್‌ಗೆ ಮೊದಲ ಬ್ಯಾಚ್ ಬ್ರಹ್ಮೋಸ್ ಸೂಪರ್‌ಸಾನಿಕ್ ಕ್ರೂಸ್ ಕ್ಷಿಪಣಿಗಳನ್ನು ತಲುಪಿಸಲು ಭಾರತ ಸಜ್ಜಾಗಿದೆ ಎಂದು ತಿಳಿದು ಬಂದಿದೆ. ಭಾರತೀಯ ವಾಯುಪಡೆಯ ಮಿಲಿಟರಿ ಸಾರಿಗೆ ವಿಮಾನವು ಕ್ಷಿಪಣಿ ಮತ್ತು ಲಾಂಚರ್‌ಗಳನ್ನು ದೇಶದ ಸಾಗರ ಪಡೆಗಳಿಗೆ ತಲುಪಿಸಲು ಫಿಲಿಪೈನ್ಸ್‌ಗೆ ಸಾಗಿಸುವ ಸಾಧ್ಯತೆಯಿದೆ ಎಂದು ಅವರು ಹೇಳಿದರು. ಜನವರಿ 2022 ರಲ್ಲಿ, ಕ್ಷಿಪಣಿಯ ಮೂರು ಬ್ಯಾಟರಿಗಳನ್ನು ಪೂರೈಸಲು ಭಾರತವು ಫಿಲಿಪೈನ್ಸ್‌ನೊಂದಿಗೆ ಒಪ್ಪಂದವನ್ನು ಮಾಡಿಕೊಂಡಿತು. ಇದು ಭಾರತದಿಂದ ಬ್ರಹ್ಮೋಸ್ ಕ್ಷಿಪಣಿಯ ಮೊದಲ ರಫ್ತು ಎಂಬುದು ವಿಶೇಷವಾಗಿದೆ.

ಅರ್ಜೆಂಟೀನಾ ಸೇರಿದಂತೆ ಇತರ ಕೆಲವು ದೇಶಗಳು ಭಾರತದಿಂದ ಬ್ರಹ್ಮೋಸ್ ಕ್ಷಿಪಣಿಗಳನ್ನು




ಪಡೆಯಲು ಆಸಕ್ತಿ ತೋರಿಸಿವೆ.

ಬ್ರಹ್ಮೋಸ್ ಏರೋಸ್ಪೇಸ್ ಪ್ರೈ ವೇಟ್ ಲಿಮಿಟೆಡ್ ಭಾರತ-ರಷ್ಯಾದ ಜಂಟಿ ಉದ್ಯಮವಾಗಿದ್ದು, ಜಲಾಂತರ್ಗಾಮಿ ನೌಕೆಗಳು, ಹಡಗುಗಳು, ವಿಮಾನಗಳು, ಭೂ ವೇದಿಕೆಗಳಿಂದ ಉಡಾವಣೆ ಮಾಡಬಹುದಾದ ಸೂಪರ್‌ಸಾನಿಕ್ ಕ್ರೂಸ್ ಕ್ಷಿಪಣಿಗಳನ್ನು ಉತ್ಪಾದಿಸುತ್ತದೆ.

ದಕ್ಷಿಣ ಚೀನಾ ಸಮುದ್ರದಲ್ಲಿ ಚೀನಾದ ಹೆಚ್ಚುತ್ತಿರುವ ಮಿಲಿಟರಿ ದೃಢೀಕರಣದ ಬಗ್ಗೆ ಜಾಗತಿಕ ಕಳವಳಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಭಾರತವು ಫಿಲಿಪೈನ್ಸ್‌ನೊಂದಿಗೆ ರಕ್ಷಣಾ ಸಂಬಂಧಗಳನ್ನು ಮತ್ತಷ್ಟು ವಿಸ್ತರಿಸಲು ನೋಡುತ್ತಿದೆ.

### ಪೋಸ್ಟ್ ಮಾಡಲು ನಿರ್ಧಾರ

**ಹೈಡ್ರೋಕಾರ್ಬನ್‌ಗಳ ಬೃಹತ್ ಮೂಲವಾದ ದಕ್ಷಿಣ ಚೀನಾ ಸಮುದ್ರದ ಮೇಲೆ ಚೀನಾದ ಸಾರ್ವಭೌಮತ್ವದ ವ್ಯಾಪಕ ಹಕ್ಕುಗಳ ಬಗ್ಗೆ ಜಾಗತಿಕ ಕಳವಳಗಳು ಹೆಚ್ಚುತ್ತಿವೆ. ವಿಯೆಟ್ನಾಂ, ಫಿಲಿಪೈನ್ಸ್ ಮತ್ತು ಬ್ರೂನಿ ಸೇರಿದಂತೆ ಹಲವಾರು ದೇಶಗಳು ಪ್ರತಿವಾದವನ್ನು ಹೊಂದಿವೆ. ಫಿಲಿಪೈನ್ಸ್‌ನೊಂದಿಗೆ ಮಿಲಿಟರಿ ಬಾಂಧವ್ಯವನ್ನು ಹೆಚ್ಚಿಸುವ ಪ್ರಯತ್ನಗಳ ಭಾಗವಾಗಿ, ಇಥಿಯೋಪಿಯಾ, ಮೊಜಾಂಬಿಕ್, ಪೋಲೆಂಡ್, ಐವರಿ ಕೋಸ್ಟ್ ನೊಂದಿಗೆ ಆ ದೇಶಕ್ಕೆ ರಕ್ಷಣಾ ಅಟ್ಯಾಚ್ ಅನ್ನು ಪೋಸ್ಟ್ ಮಾಡಲು ಭಾರತ ನಿರ್ಧರಿಸಿದೆ.**

---

## ಮತದಾನ ಕೇಂದ್ರದ ವಾಶ್‌ರೂಮ್‌ನಲ್ಲಿ ಸಿಆರ್‌ಪಿಎಫ್ ಸೈನಿಕ ಶವವಾಗಿ ಪತ್ತೆ

**ಕೂಚ್‌ಬೆಹಾರ್:** ಪಶ್ಚಿಮ ಬಂಗಾಳದಲ್ಲಿ ಮತದಾನ ಕೇಂ ದ್ರದ ವಾಶ್‌ರೂಮ್‌ನಲ್ಲಿ ಕಾಲು ಜಾರಿ ಬಿದ್ದು ಅರೆ ಸೈನಿಕ ಸಿಬ್ಬಂದಿ ಸಾವನ್ನಪ್ಪಿದ್ದಾರೆ ಎಂದು ಮೂಲಗಳು ಇಂದು ಬೆಳಿಗ್ಗೆ ತಿಳಿಸಿವೆ. ಮತದಾನ ನಡೆಯಲಿರುವ ಕೂಚ್‌ಬೆಹರ್ನ ಮತಭಂಗದಲ್ಲಿರುವ ಮತಗಟ್ಟೆಯಲ್ಲಿ ಈ ಘಟನೆ ಸಂಭವಿಸಿದ್ದು, ಅವರ ಸಾವು ಹಲವಾರು ಅನುಮಾನಗಳಿಗೆ ಎಡೆ ಮಾಡಿಕೊಟ್ಟಿದೆ. ಮತದಾನ ಆರಂಭವಾಗುವ ಮುನ್ನವೇ ಸಿಆರ್‌ಪಿಎಫ್ ಸಿಬ್ಬಂದಿ ನಿರ್ಜೀವ ಸ್ಥಿತಿಯಲ್ಲಿ ಪತ್ತೆಯಾಗಿದ್ದರು. ಕೂಡಲೇ ಅವರನ್ನು ಆಸ್ಪತ್ರೆಗೆ ಸಾಗಿಸಲಾಯಿತು ಅಲ್ಲಿ ವೈದ್ಯರು ಮೃತಪಟ್ಟಿರುವುದಾಗಿ ಘೋಷಿಸಿದರು.

ಅವರು ವಾಶ್ ರೂಂನಲ್ಲಿ ಜಾರಿ ಬಿದ್ದು ತಲೆಗೆ ಗಾಯ ಮಾಡಿಕೊಂಡಿದ್ದಾರೆ ಎಂದು ಪ್ರಾಥಮಿಕ ಮಾಹಿತಿಗಳನ್ನು ಉಲ್ಲೇಖಿಸಿ ಆಸ್ಪತ್ರೆಯ ಮೂಲಗಳು ತಿಳಿಸಿವೆ. ಯಾವುದೇ ಅಪರಾಧದ ಕೋನವನ್ನು



ಶಂಕಿಸಲಾಗಿಲ್ಲ, ಆದರೆ ಶವಪರೀಕ್ಷೆ ನಡೆದ ನಂತರ ಅವರ ಸಾವಿನ ಹಿಂದಿನ ನಿಜವಾದ ಕಾರಣವನ್ನು ಕಂಡುಹಿಡಿಯಬಹುದು. ಕೂಚ್‌ಬೆಹಾರ್ನಲ್ಲಿ ಶುಕ್ರವಾರ ಬೆಳಗ್ಗೆ ಭಾರೀ ಭದ್ರತೆಯಲ್ಲಿ ಮತದಾನ ಆರಂಭವಾಗಿದೆ. ಬಿಜೆಪಿಯು ಹಾಲಿ ಸಂಸದ ನಿಸಿತ್ ಪ್ರಮಾಣಿಕ್ ಅವರನ್ನು ಇಲ್ಲಿಂದ ಪುನರಾವರ್ತನೆ ಮಾಡಿದ್ದು, ತೃಣಮೂಲ ಜಗದೀಶ್ ಬಸುನಿಯಾ ಎದುರಾಳಿಯಾಗಿದ್ದಾರೆ.

ಬಂಗಾಳದ ಅಲಿಪುರ್ದುವಾರ್ಸ್, ಜಲ್ಪೈಗುರಿ ಸ್ಥಾನಗಳಿಗೆ ಚುನಾವಣೆಗಳು ನಡೆಯುತ್ತಿವೆ, ಇವೆರಡೂ 2019 ರಲ್ಲಿ ಬಿಜೆಪಿ ಗೆದ್ದಿವೆ. ಪಶ್ಚಿಮ ಬಂಗಾಳದಲ್ಲಿ ಆಡಳಿತಾರೂಢ ತೃಣಮೂಲ ಒಟ್ಟು 22 ಸ್ಥಾನಗಳನ್ನು ಗೆದ್ದಿದ್ದರೆ, ಬಿಜೆಪಿ 18 ಸ್ಥಾನಗಳನ್ನು ಗಳಿಸಿತು.

### ನಾಲ್ವರು ಗುಂಡು ಹಾರಿಸಿ ಕೊಲೆ

**ಉತ್ತರ ಬಂಗಾಳದ ಕೂಚ್‌ಬೆಹರ್ 2021 ರಲ್ಲಿ ನಡೆದ ರಾಜ್ಯ ಚುನಾವಣೆಯ ಸಮಯದಲ್ಲಿ ಘರ್ಷಣೆಯನ್ನು ಕಂಡಿತ್ತು. ಸಿತಾಲ್ಕುಚಿಯ ಮತಗಟ್ಟೆಯ ಹೊರಗೆ ಭದ್ರತಾ ಪಡೆಗಳೊಂದಿಗೆ ನಡೆದ ಘರ್ಷಣೆಯಲ್ಲಿ ನಾಲ್ವರು ಗುಂಡು ಹಾರಿಸಿ ಕೊಲ್ಲಲಾಗಿತ್ತು. ಆ ನಂತರ ಚುನಾವಣಾ ಆಯೋಗವು ಮತದಾನವನ್ನು ನಿಲ್ಲಿಸಿತು.**

---

## ತಾಂತ್ರಿಕ ದೋಷ: ಅಸ್ಸಾಂನಲ್ಲಿ 150 ಇವಿಎಂ, 400 ವಿವಿಪ್ಯಾಟ್ ಬದಲಾವಣೆ

**ಗುವಾಹಟಿ:** ಅಸ್ಸಾಂನ ಐದು ಲೋಕಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ತಾಂತ್ರಿಕ ದೋಷ ಕಂಡು ಬಂದ ಹಿನ್ನೆಲೆಯಲ್ಲಿ 150 ವಿದ್ಯುನ್ಮಾನ ಮತಯಂತ್ರಗಳು (ಇವಿಎಂ), 400ಕ್ಕೂ ಹೆಚ್ಚು ವಿವಿಪ್ಯಾಟ್‌ಗಳನ್ನು (ಮತದಾನ ದೃಢೀಕರಣ ರಸೀದಿ ಯಂತ್ರ) ಬದಲಾವಣೆ ಮಾಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.



ಶುಕ್ರವಾರ ಬೆಳಿಗ್ಗೆ ಮತದಾನ ಆರಂಭವಾಗುವುದಕ್ಕೂ ಮುನ್ನ ಇವಿಎಂಗಳನ್ನು ಪರಿಶೀಲನೆ ನಡೆಸಲಾಯಿತು. ಈ ವೇಳೆ ತಾಂತ್ರಿಕ ದೋಷ ಕಂಡು ಬಂದ ಬೆನ್ನಲ್ಲೇ ಎಚ್ಚೆತ್ತ ಚುನಾವಣಾಧಿಕಾರಿಗಳು ಮತ ಯಂತ್ರಗಳು, ವಿವಿಪ್ಯಾಟ್‌ಗಳು ಸೇರಿದಂತೆ ವಿವಿಧ ಬ್ಯಾಲೆಟ್ ಯೂನಿಟ್‌ಗಳನ್ನು ಬದಲಾಯಿಸಿದ್ದಾರೆ ಎಂದು ಚುನಾವಣಾ ಆಯೋಗದ ಹಿರಿಯ ಅಧಿಕಾರಿಯೊಬ್ಬರು ಪಿಟಿಐಗೆ ತಿಳಿಸಿದ್ದಾರೆ. ಯಾವ ಕ್ಷೇತ್ರದಲ್ಲಿ ಎಷ್ಟು ಇವಿಎಂಗಳಲ್ಲಿ ತಾಂತ್ರಿಕ ದೋಷ ಕಂಡು ಬಂದಿತ್ತು ಎಂಬುದರ ಕುರಿತು ಮಾಹಿತಿ ಹಂಚಿಕೊಳ್ಳಲು ಅಧಿಕಾರಿ ನಿರಾಕರಿಸಿದ್ದಾರೆ.

ಲಖಿಂಪುರದ ಬಿಚ್ಚುರಿಯ ಮೂರು ಮತಗಟ್ಟೆಗಳು, ದಿಬ್ರುಗಢದ ನಹರ್ಕಟಿಯಾ, ಹೊಜೈ, ಕಲಿಯಾಬೋರ್, ಬೊಕಾಖಾಟ್‌ನಲ್ಲಿ ತಲಾ ಒಂದು ಇವಿಎಂನಲ್ಲಿ ತಾಂತ್ರಿಕ ದೋಷ ಕಂಡು ಬಂದಿದೆ ಎಂದು ಮತ್ತೊಬ್ಬ ಅಧಿಕಾರಿ ತಿಳಿಸಿದ್ದಾರೆ.

---

# ನಾಗಾಲ್ಯಾಂಡ್‌ನ ಬರೋಬ್ಬರಿ 6 ಜಿಲ್ಲೆಗಳಲ್ಲಿ 0% ಮತದಾನ

## • ಈಶಾನ್ಯ ರಾಜ್ಯದಲ್ಲಿ ನಡೆಯುತ್ತಿರುವ ಲೋಕಸಭೆ ಚುನಾವಣೆಯ ಮೊದಲ ಹಂತದ ಮತದಾನ ನೀರಸ

**ಹೊಸದಿಲ್ಲಿ:** ಶುಕ್ರವಾರ ದೇಶದಲ್ಲಿ ಮೊದಲ ಹಂತದ ಲೋಕಸಭೆ ಚುನಾವಣೆಯ ಮತದಾನ ನಡೆಯುತ್ತಿದ್ದು, ನಾಗಾಲ್ಯಾಂಡ್‌ನ 6 ಜಿಲ್ಲೆಗಳಲ್ಲಿ ಹೆಚ್ಚು ಕಡಿಮೆ ಶೂನ್ಯ ಮತದಾನ ವರದಿಯಾಗಿದೆ. ಹೆಚ್ಚಿನ ಆರ್ಥಿಕ ಸ್ವಾಯತ್ತತೆಯೊಂದಿಗೆ ಪ್ರತ್ಯೇಕ ಆಡಳಿತಕ್ಕೆ ಆಗ್ರಹಿಸುತ್ತಿರುವ ಈಸ್ಟರ್ನ್ ನಾಗಾಲ್ಯಾಂಡ್ ಪೀಪಲ್ಸ್ ಆರ್ಗನೈಸೇಷನ್ (ಇಎನ್‌ಪಿಒ) 'ಸಾರ್ವಜನಿಕ ತುರ್ತು ಪರಿಸ್ಥಿತಿ' ಘೋಷಿಸಿ, ಈ ಚುನಾವಣೆಯನ್ನು ಬಹಿಷ್ಕರಿಸುವಂತೆ ಸ್ಥಳೀಯರಿಗೆ ಕರೆ ನೀಡಿತ್ತು.

ಇದಕ್ಕೆ ಜನರು ಅಭೂತಪೂರ್ವವಾಗಿ ಸ್ಪಂದಿಸಿದ್ದು, ಮತದಾನದಿಂದ ದೂರ ಉಳಿದಿದ್ದಾರೆ. ಈ ಹಿನ್ನೆಲೆಯಲ್ಲಿ ಚುನಾವಣಾ ಪ್ರಕ್ರಿಯೆಗೆ ಅಡ್ಡಿಪಡಿಸಿದ್ದಕ್ಕಾಗಿ ಈಶಾನ್ಯ ರಾಜ್ಯದ ಮುಖ್ಯ ಚುನಾವಣಾ ಅಧಿಕಾರಿ ಇಎನ್‌ಪಿಒಗೆ ನೋಟಿಸ್ ಕೂಡ ಜಾರಿ ಮಾಡಿದ್ದಾರೆ. ಪೂರ್ವ ನಾಗಾಲ್ಯಾಂಡ್ ಪ್ರದೇಶವು ಪ್ರಸ್ತುತ ಸಾರ್ವಜನಿಕ ತುರ್ತು ಪರಿಸ್ಥಿತಿಯಲ್ಲಿದೆ' ಎಂದಿರುವ ಇಎನ್‌ಪಿಒ, ಇದು ಜನರ 'ಸ್ವಯಂಪ್ರೇರಿತ ಕ್ರಮ' ಎಂದು ಹೇಳಿದೆ.




ಮಾರ್ಚ್ 30 ರಂದು ಇಎನ್‌ಪಿಒ 20 ಶಾಸಕರು ಮತ್ತು ಇತರ ಸಂಘಟನೆಗಳೊಂದಿಗೆ ಸುದೀರ್ಘವಾದ ಸಭೆ ನಡೆಸಿತ್ತು. ಇದರಲ್ಲಿ ಅದು ಲೋಕಸಭೆ ಚುನಾವಣೆಯಿಂದ ಸಂಪೂರ್ಣವಾಗಿ ದೂರವಿರುವ ತನ್ನ ನಿರ್ಧಾರವನ್ನು ಪುನರುಚ್ಚರಿಸಿತ್ತು. 20 ಶಾಸಕರನ್ನು ಒಳಗೊಂಡ ಪೂರ್ವ ನಾಗಾಲ್ಯಾಂಡ್ ಶಾಸಕರ ಒಕ್ಕೂಟವು ತನ್ನ ನಿರ್ಧಾರವನ್ನು ಮರುಪರಿಶೀಲಿಸುವಂತೆ ಇಎನ್‌ಪಿಒಗೆ ಮನವಿ ಮಾಡಿತ್ತು. ಮರುದಿನ ಚುನಾವಣೆಯಲ್ಲಿ ಮತ ಚಲಾಯಿಸದಿರುವ ತಮ್ಮ ನಿರ್ಧಾರದ ಬಗ್ಗೆ ಇಎನ್‌ಪಿಒ ಚುನಾವಣಾ ಆಯೋಗಕ್ಕೆ ಮಾಹಿತಿ ನೀಡಿತ್ತು. 'ಇದು ಪ್ರಜಾಪ್ರಭುತ್ವದ ಚೌಕಟ್ಟಿನೊಳಕ್ಕೆ ನಡೆಯುತ್ತಿರುವ ಹೋರಾಟ, ಇದು ಪ್ರಜಾಪ್ರಭುತ್ವವನ್ನು ಧಿಕ್ಕರಿಸುವ ಕ್ರಮವಲ್ಲ' ಎಂದು ಈ ವೇಳೆ ಸ್ಪಷ್ಟನೆ ನೀಡಿತ್ತು.

- **ಹೆಚ್ಚಿನ ಆರ್ಥಿಕ ಸ್ವಾಯತ್ತತೆಯೊಂದಿಗೆ ಪ್ರತ್ಯೇಕ ಆಡಳಿತಕ್ಕೆ ಆಗ್ರಹಿಸುತ್ತಿದೆ ಈಸ್ಟರ್ನ್ ನಾಗಾಲ್ಯಾಂಡ್ ಪೀಪಲ್ಸ್ ಆರ್ಗನೈಸೇಷನ್**
- **ಸಾರ್ವಜನಿಕ ತುರ್ತು ಪರಿಸ್ಥಿತಿ ಘೋಷಿಸಿ, ಈ ಚುನಾವಣೆಯನ್ನು ಬಹಿಷ್ಕರಿಸುವಂತೆ ಕರೆ ನೀಡಿರುವ ಸಂಘಟನೆ**
- **ಈ ಹಿನ್ನೆಲೆಯಲ್ಲಿ ನಾಗಾಲ್ಯಾಂಡ್‌ನ 6 ಜಿಲ್ಲೆಗಳಲ್ಲಿ ಹೆಚ್ಚು ಕಡಿಮೆ ಶೂನ್ಯ ಮತದಾನ**

ಸಂಘಟನೆಯು ಮಾರ್ಚ್ 8ರಂದು ಸಾರ್ವಜನಿಕ ತುರ್ತು ಪರಿಸ್ಥಿತಿ' ಘೋಷಿಸಿತ್ತು. ಇಎನ್‌ಪಿಒ ಈ ಭಾಗದ ಏಳು ನಾಗಾ ಬುಡಕಟ್ಟುಗಳ ಅತ್ಯುಚ್ಚ ಸಂಘಟನೆಯಾಗಿದ್ದು, ಈ ಭಾಗದಲ್ಲಿ ಚುನಾವಣಾ ಪ್ರಚಾರಕ್ಕೂ ಅನುಮತಿ ನೀಡಿರಲಿಲ್ಲ. ಕಳೆದ ವರ್ಷದ ವಿಧಾನಸಭೆ ಚುನಾವಣೆಯ ಮೊದಲೂ ಇಎನ್‌ಪಿಒ ಇದೇ ರೀತಿಯ ಕರೆ ನೀಡಿತ್ತು. ಆದರೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಭರವಸೆ ಯ ನಂತರ ಇದನ್ನು ಹಿಂಪಡೆಯಲಾಗಿತ್ತು. ನಾಗಾಲ್ಯಾಂಡ್ ಒಂದು ಲೋಕಸಭಾ ಸ್ಥಾನವನ್ನು ಹೊಂದಿದ್ದು, 2018ರ ಉಪಚುನಾವಣೆಯಿಂದ ನ್ಯಾಷನಲಿಸ್ಟ್ ಡೆಮಾಕ್ರಟಿಕ್ ಪ್ರೋಗ್ರೆಸಿವ್ ಪಾರ್ಟಿಯ ಟೋಖೆಹೋ ಯೆಪ್ಥೋಮಿ ಇದನ್ನು ಪ್ರತಿನಿಧಿಸುತ್ತಿದ್ದಾರೆ. ಇದು ಬಿಜೆಪಿಯ ಮಿತ್ರಪಕ್ಷವಾಗಿದೆ.

### ಈಶಾನ್ಯ ರಾಜ್ಯದಲ್ಲಿ ನೀರಸ

**ಹೆಚ್ಚಿನ ಆರ್ಥಿಕ ಸ್ವಾಯತ್ತತೆಯೊಂದಿಗೆ ಪ್ರತ್ಯೇಕ ಆಡಳಿತಕ್ಕೆ ಆಗ್ರಹಿಸುತ್ತಿರುವ ಈಸ್ಟರ್ನ್ ನಾಗಾಲ್ಯಾಂಡ್ ಪೀಪಲ್ಸ್ ಆರ್ಗನೈಸೇಷನ್ 'ಸಾರ್ವಜನಿಕ ತುರ್ತು ಪರಿಸ್ಥಿತಿ' ಘೋಷಿಸಿ, ಈ ಚುನಾವಣೆಯನ್ನು ಬಹಿಷ್ಕರಿಸುವಂತೆ ಕರೆ ನೀಡಿದೆ. ಈ ಹಿನ್ನೆಲೆಯಲ್ಲಿ ನಾಗಾಲ್ಯಾಂಡ್‌ನ 6 ಜಿಲ್ಲೆಗಳಲ್ಲಿ ಹೆಚ್ಚು ಕಡಿಮೆ ಶೂನ್ಯ ಮತದಾನ ವರದಿಯಾಗಿದೆ. ಈ ಮೂಲಕ ಶುಕ್ರವಾರ ನಡೆಯುತ್ತಿರುವ ಲೋಕಸಭೆ ಚುನಾವಣೆಯ ಮೊದಲ ಹಂತದ ಮತದಾನ ಈಶಾನ್ಯ ರಾಜ್ಯದಲ್ಲಿ ನೀರಸವಾಗಿದೆ.**

### ಶೋಕಾಸ್ ನೋಟಿಸ್

**ಇಎನ್‌ಪಿಒ ಪೂರ್ವ ನಾಗಾಲ್ಯಾಂಡ್ ಪ್ರದೇಶಗಳಲ್ಲಿ ವಾಸಿಸುವ ಜನರಿಗೆ ಸಾರ್ವತ್ರಿಕ ಚುನಾವಣೆಯಲ್ಲಿ ಮತ ಚಲಾಯಿಸದಂತೆ ತಡೆಯುವ ಮೂಲಕ ಮುಕ್ತ ಸ್ವಾತಂತ್ರ್ಯಕ್ಕೆ ಅಡ್ಡಿಪಡಿಸಿದ್ದು, ಅನಗತ್ಯ ಪ್ರಭಾವವನ್ನು ಬಳಸಲು ಪ್ರಯತ್ನಿಸಿದೆ, ಎಂದು ಚುನಾವಣಾಧಿಕಾರಿ ಹೇಳಿದ್ದಾರೆ. ಆದ್ದರಿಂದ ಭಾರತೀಯ ದಂಡ ಸಂಹಿತೆಯ ಸೆಕ್ಷನ್ 171ಸಿಯ ಸಬ್ ಸೆಕ್ಷನ್ ಅಡಿಯಲ್ಲಿ ಏಕೆ ಕ್ರಮ ಜರುಗಿಸಬಾರದು ಎಂದು ಕೇಳಿ ಇಎನ್‌ಪಿಒಗೆ ಶೋಕಾಸ್ ನೋಟಿಸ್ ನೀಡಿದ್ದಾರೆ.**

---

## ಮಿನಿ ನ್ಯೂಸ್

### ದಾಖಲೆ ಪ್ರಮಾಣದಲ್ಲಿ ಮತದಾನ ಮಾಡುವಂತೆ ಮೋದಿ ಮನವಿ

**ನವದೆಹಲಿ:** ದೇಶದ 102 ಕ್ಷೇತ್ರಗಳಲ್ಲಿ ಲೋಕಸಭಾ ಚುನಾವಣೆಯ ಮೊದಲ ಹಂತದ ಮತದಾನ ಆರಂಭವಾಗಿದ್ದು, ದಾಖಲೆ ಪ್ರಮಾಣದಲ್ಲಿ ಮತ ದಾನ ಮಾಡುವಂತೆ ಪ್ರಧಾನಿಮಂತ್ರಿ, ನರೇಂದ್ರ ಮೋದಿ ಅವರು ಮತದಾರರಲ್ಲಿ ಮನವಿ ಮಾಡಿಕೊಂಡಿದ್ದಾರೆ. ಲೋಕಸಭೆ ಚುನಾವಣೆ 2024 ಇಂದಿನಿಂದ ಆರಂಭವಾಗಿದೆ.

21 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳೂ ಸೇರಿ ದಂತೆ 102 ಕ್ಷೇತ್ರಗಳಿಗೆ ಮತದಾನ ನಡೆಯುತ್ತಿದ್ದು, ಈ ಕ್ಷೇತ್ರಗಳಲ್ಲಿರುವ ಎಲ್ಲಾ ಮತದಾರರು ದಾಖಲೆ ಸಂಖ್ಯೆಯಲ್ಲಿ ಮತದಾನದ ಹಕ್ಕನ್ನು ಚಲಾಯಿಸುವಂತೆ ನಾನು ವಿನಂತಿಸುತ್ತೇನೆ. ವಿಶೇಷವಾಗಿ ಮೊದಲ ಬಾರಿಗೆ ಮತ ಚಲಾಯಿಸಲಿರುವ ನನ್ನ ಯುವ ಮಿತ್ರರಲ್ಲಿ ವಿಶೇಷ ಮನವಿ ಮಾಡುತ್ತೇನೆ. ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಮಾಡಬೇಕು. ಪ್ರಜಾಪ್ರಭುತ್ವದಲ್ಲಿ, ಪ್ರತಿ ಮತವೂ ಅಮೂಲ್ಯವಾಗಿದೆ, ಪ್ರತಿ ಧ್ವನಿಯೂ ಮುಖ್ಯವಾಗಿದೆ ಎಂದು ವಿವಿಧ ಭಾಷೆಗಳಲ್ಲಿ ಪೋಸ್ಟ್ ಮಾಡಿದ್ದಾರೆ.

### ನೈಜೀರಿಯಾದಲ್ಲಿ 10 ವರ್ಷದ ಹಿಂದೆ ಅಪಹರಣವಾಗಿದ್ದ ಬಾಲಕಿ ರಕ್ಷಣೆ

**ಅಬುಜಾ:** ಈಶಾನ್ಯ ನೈಜೀರಿಯಾದಲ್ಲಿ 10 ವರ್ಷಗಳ ಹಿಂದೆ ಉಗ್ರಗಾಮಿಗಳಿಂದ ಅಪಹರಣಕ್ಕೆ ಒಳಗಾಗಿದ್ದ ಬಾಲಕಿಯನ್ನು ಅವರ ಮೂವರು ಮಕ್ಕಳೊಂದಿಗೆ ರಕ್ಷಿಸಲಾಗಿದೆ ಎಂದು ನೈಜೀರಿಯಾದ ಸೇನೆ ತಿಳಿಸಿದೆ. ಐದು ತಿಂಗಳ ಗರ್ಭಿಣಿಯೂ ಆಗಿರುವ ಲಿಡಿಯಾ ಸೈಮನ್ ಅವರನ್ನು ಸೈನಿಕರು, ಬೋರ್ನೊ ರಾಜ್ಯದ ಗೋಜಾ ಕೌನ್ಸಿಲ್ ಪ್ರದೇಶದಲ್ಲಿ ರಕ್ಷಿಸಿದ್ದಾರೆ. ಇದು 15 ವರ್ಷಗಳಿಂದ ಇಸ್ಲಾಮಿಕ್ ಉಗ್ರರ ಪೀಡಿತ ಪ್ರದೇಶವಾಗಿದೆ ಎಂದು ಸೇನೆ ಹೇಳಿದೆ.

2014ರ ಏಪ್ರಿಲ್‌ನಲ್ಲಿ ಉಗ್ರರು ಚಿಬೊಕ್ ಹಳ್ಳಿಯ ಶಾಲೆಯಿಂದ 276 ಬಾಲಕಿಯನ್ನು ಅಪರಹರಿಸಿದ್ದರು. ಅವರಲ್ಲಿ ಸೈಮನ್ ಕೂಡ ಒಬ್ಬರು. ಈ ಪೈಕಿ ಇನ್ನೂ 82 ಮಂದಿ ಉಗ್ರರ ಸೆರೆಯಲ್ಲಿದ್ದಾರೆ.

ಸೈಮನ್ ತನ್ನ 2ರಿಂದ 4 ವರ್ಷದ ಮಕ್ಕಳ ಜತೆಗಿರುವ ಚಿತ್ರವನ್ನು ಸೇನೆ ಬಿಡುಗಡೆ ಮಾಡಿದೆ. ಆದರೆ ಅವರಿನ್ನೂ ತಮ್ಮ ಕುಟುಂಬವನ್ನು ಸೇರಿಲ್ಲ. ಸೈಮನ್ ಅವರನ್ನು ಹೇಗೆ ರಕ್ಷಿಸಲಾಯಿತು ಎಂಬುದರ ಬಗ್ಗೆ ಸೇನೆ ಮಾಹಿತಿ ಹಂಚಿಕೊಂಡಿಲ್ಲ.

### ಕೆಲಸ ಮಾಡುವ ಸಂಸ್ಥೆಯಲ್ಲಿ ಜಾತಿ ತಾರತಮ್ಯ: ಮಾಲೀಕರ ವಿರುದ್ಧ ಪ್ರಕರಣ

**ಮುಂಬೈ:** ಕೆಲಸ ಮಾಡುವ ಸಂಸ್ಥೆಯಲ್ಲಿ ಜಾತಿ ತಾರತಮ್ಯ ಮಾಡಲಾಗುತ್ತಿದೆ ಎಂದು ಉದ್ಯೋಗಿಯೊಬ್ಬರು ಆರೋಪಿಸಿದ ಬೆನ್ನಲ್ಲೇ, ಇವೆಂಟ್ ಮ್ಯಾನೇಜ್‌ಮೆಂಟ್ ಸಂಸ್ಥೆಯೊಂದರ ಮಾಲೀಕರ ವಿರುದ್ಧ ಪೊಲೀಸರು ದೂರು ದಾಖಲಿಸಿಕೊಂಡಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದರು. ಗೋರೆಗಾಂವ್ ಪ್ರದೇಶದಲ್ಲಿರುವ ಸಂಸ್ಥೆಯ ಮಾಲೀಕರು ಏಪ್ರಿಲ್ 14ರಂದು ಜಾತಿ ಆಧಾರಿತವಾಗಿ ಚುಚ್ಚು ಮಾತನಾಡಿದರು ಎಂದು 23 ವರ್ಷದ ಉದ್ಯೋಗಿ ದೂರು ನೀಡಿದ್ದಾರೆ.

ತಾವು ಪರಿಶಿಷ್ಟ ಜಾತಿಗೆ (ಎಸ್‌ಸಿ) ಸೇರಿದವರೇ ಎಂದು ಮಾಲೀಕರು ವಾಟ್ಸ್ಆ್ಯಪ್ ಮೂಲಕ ಸಂದೇಶ ಕಳುಹಿಸಿದ್ದರು. ಇದಕ್ಕೆ ಸಕಾರಾತ್ಮಕವಾಗಿ ಪ್ರತಿಕ್ರಿಯಿಸಿದಾಗ, ಅವರು, ಹಿಂದುಳಿದ ಸಮುದಾಯಗಳಿಗೆ ಕೆಲಸ ನೀಡುವುದಿಲ್ಲ' ಎಂದು ಹೇಳಿದರು' ಎಂದು ದೂರಿನಲ್ಲಿ ತಿಳಿಸಲಾಗಿದೆ. ಉದ್ಯೋಗಿ ತಮಗಾದ ಅನುಭವವನ್ನು ಅವರ ಪೋಷಕರ ಬಳಿ ಹಂಚಿಕೊಂಡರು. ಬಳಿಕ ಠಾಣೆಗೆ ದೂರು ನೀಡಿದರು ಎಂದು ಅಧಿಕಾರಿಗಳು ತಿಳಿಸಿದರು.

ಕಂಪನಿ ಮಾಲೀಕರ ಮೇಲೆ ಪರಿಶಿಷ್ಟ ಜಾರಿ, ಪರಿಶಿಷ್ಟ ಪಂಗಡ ದೌರ್ಜನ್ಯ ತಡೆ ಕಾಯ್ದೆ-1989 ಮತ್ತು ನಾಗರಿಕ ಹಕ್ಕುಗಳ ರಕ್ಷಣೆ ಕಾಯ್ದೆ 1955ರ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಳ್ಳಲಾಗಿದೆ.

### ಬಿಜೆಪಿಗೆ ಸೇರಿದ್ದ ಮೇಯರ್ ಮತದಾನದ ದಿನ ಯೂ- ಟರ್ನ್

**ಮಧ್ಯಪ್ರದೇಶ:** ಮಧ್ಯಪ್ರದೇಶದ ಛಿಂದವಾಡ ನಗರದ ಮೇಯರ್ ವಿಕ್ರಮ್ ಅಹಾಕೆ ಅವರು ಮತದಾನದ ದಿನ 'ಉಲ್ಟಾ' ಹೊಡೆದಿದ್ದು, ಕಾಂಗ್ರೆಸ್‌ಗೆ ಬೆಂಬಲ ನೀಡುವಂತೆ ಮತದಾರರಿಗೆ ಮನವಿ ಮಾಡಿದ್ದಾರೆ.

ಛಿಂದವಾಡ ಲೋಕಸಭಾ ಕ್ಷೇತ್ರದ ಮತದಾನ ಶುಕ್ರವಾರ ನಡೆಯಿತು. ಇಲ್ಲಿ ಕಾಂಗ್ರೆಸ್‌ನ ನಕುಲ್‌ನಾಥ್ (ಮಧ್ಯಪ್ರದೇಶದ ಮಾಜಿ ಮುಖ್ಯಮಂತ್ರಿ ಕಮಲ್‌ನಾಥ್ ಅವರ ಪುತ್ರ) ಮತ್ತು ಬಿಜೆಪಿಯ ವಿವೇಕ್ ಬಂಟಿ ಸಾಹು ಮಧ್ಯೆ ಪೈಪೋಟಿಯಿದೆ. ವಿಕ್ರಮ್ ಅವರು ಮಧ್ಯಪ್ರದೇಶ ಮುಖ್ಯಮಂತ್ರಿ ಮೋಹನ್ ಯಾದವ್ ಸಮ್ಮುಖದಲ್ಲಿ ಏಪ್ರಿಲ್ 1ರಂದು ಬಿಜೆಪಿ ಸೇರಿದ್ದರು. ಆದರೆ ಶುಕ್ರವಾರ ಅವರು ಕಾಂಗ್ರೆಸ್ ಅಭ್ಯರ್ಥಿ ನಕುಲ್‌ನಾಥ್‌ಗೆ ಮತ ನೀಡಿ ಎಂದುಮನವಿ ಮಾಡಿದ ವಿಡಿಯೋವನ್ನು ಸಾಮಾಜಿಕ ಮಾಧ್ಯಮಗಳಲ್ಲಿ ಹಂಚಿಕೊಂಡಿದ್ದಾರೆ. ಬಿಜೆಪಿ ಸೇರಿದ ಬಳಿಕ ನನಗೆ ಉಸಿರು ಕಟ್ಟಿದಂತಹ ಅನುಭವ ಉಂಟಾಗಿದೆ. ಛಿಂದವಾಡದ ಅಭಿವೃದ್ಧಿಗೆ ಶ್ರಮಿಸಿದ ಕಮಲ್‌ನಾಥ್ ಮತ್ತು ನಕುಲ್‌ನಾಥ್ ಅವರ ಪರ ನಾನು ನಿಲ್ಲುತ್ತೇನೆ. ನಕುಲ್‌ನಾಥ್ ಅವರ ಗೆಲುವನ್ನು ಖಾತರಿಪಡಿಸುವಂತೆ ಮತದಾರರಲ್ಲಿ ಮನವಿ ಮಾಡುತ್ತೇನೆ' ಎಂದು ಸಂದೇಶದಲ್ಲಿ ತಿಳಿಸಿದ್ದಾರೆ.

### ರಾಹುಲ್ ಗಾಂಧಿಗೆ ವಂಶಪಾರಂಪರ್ಯ ರಾಜಕಾರಣದಲ್ಲಿ ನಂಬಿಕೆ: ನಡ್ಡಾ ಟೀಕೆ

**ಕೇರಳ:** ವಯನಾಡ್ ಲೋಕಸಭಾ ಕ್ಷೇತ್ರದ ಅಭ್ಯರ್ಥಿ, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವಂಶಪಾರಂಪರ್ಯ ರಾಜಕಾರಣದಲ್ಲಿ ನಂಬಿಕೆ ಹೊಂದಿದ್ದಾರೆ. ಇದು ಪ್ರಜಾಪ್ರಭುತ್ವಕ್ಕೆ ಹಾನಿಕಾರಕವಾಗಿದೆ ಎಂದು ಬಿಜೆಪಿ ಅಧ್ಯಕ್ಷ ಜೆ. ಪಿ ನಡ್ಡಾ ವಾಗ್ದಾಳಿ ನಡೆಸಿದ್ದಾರೆ. ವಯನಾಡ್ ಕ್ಷೇತ್ರದ ಸುಲ್ತಾನ್ ಬತ್ತೇರಿಯಲ್ಲಿ ಆಯೋಜಿಸಲಾಗಿದ್ದ ರೋಡ್ ಶೋನಲ್ಲಿ ಮಾತನಾಡಿದ ಅವರು, ರಾಹುಲ್ ಗಾಂಧಿ ತುಷ್ಟಿಕರಣದ ರಾಜಕೀಯವನ್ನು ನಂಬುವುದರ ಜತೆಗೆ ವೋಟ್ ಬ್ಯಾಂಕ್ ರಾಜಕೀಯದಲ್ಲಿ ತೊಡಗಿದ್ದಾರೆ. ರಾಹುಲ್ ವಂಶಪಾರಂಪರ್ಯ ರಾಜಕಾರಣದಲ್ಲಿ ನಂಬಿಕೆ ಹೊಂದಿದ್ದು, ಇದು ಭಾರತೀಯ ಪ್ರಜಾಪ್ರಭುತ್ವಕ್ಕೆ ಹಾನಿಕಾರಕವಾಗಿದೆ' ಎಂದು ಹೇಳಿದ್ದಾರೆ.

ಎಸ್‌ಡಿಪಿಐ, ಸಾರ್ವತ್ರಿಕ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಮತ್ತು ಸ್ಥಳೀಯಾಡಳಿತದಲ್ಲಿ ಸಿಪಿಐ (ಎಂ)ಗೆ ಬೆಂಬಲ ನೀಡುತ್ತಿದೆ. ಈ ಎರಡೂ ಪಕ್ಷಗಳು ದೇಶ ವಿರೋಧಿ ಶಕ್ತಿಗಳಿಗೆ ಸಹಕಾರ ನೀಡುತ್ತವೆ ಎಂದು ನಡ್ಡಾ ಆರೋಪಿಸಿದ್ದಾರೆ. ಬಿಜೆಪಿ ನೇತೃತ್ವದ ಎನ್‌ಡಿಎ ಅಭ್ಯರ್ಥಿ ಕೆ. ಸುರೇಂದ್ರನ್ ಮಾತನಾಡಿ, ರಾಹುಲ್ ಗಾಂಧಿ ಅವರು ದೇಶವನ್ನು ಒಡೆದು ಆಳುವ ನೀತಿ, ವೋಟ್ ಬ್ಯಾಂಕ್ ರಾಜಕಾರಣ ಮಾಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

# ಜೈಂಟ್ಸ್' ಎದುರು ನಡೆಯಲಿಲ್ಲ 'ಕಿಂಗ್ಸ್' ಆಟ!

## ■ ರಾಹುಲ್ ರಣಾರ್ಭಟಕ್ಕೆ ಚೆನ್ನೈ ಚಿತಾಲ್ ಪತಾಲ್! ■ ಚೆನ್ನೈ ವಿರುದ್ಧ ಲಕ್ನೊ ತಂಡಕ್ಕೆ 8 ವಿಕೆಟ್ ಭರ್ಜರಿ ಗೆಲುವು

ಕೆ.ಎಲ್. ರಾಹುಲ್ (82 ರನ್, 53 ಎಸೆತ, 9 ಫೋರ್, 3 ಸಿಕ್ಸರ್) ಹಾಗೂ ಕ್ವಿಂಟನ್ ಡಿ ಕಾಕ್ (54 ರನ್, 43 ಎಸೆ, 5 ಫೋರ್, 1 ಸಿಕ್ಸರ್) ಜೋಡಿಯ ಅರ್ಧ ಶತಕಗಳ ನೆರವು ಪಡೆದ ಲಕ್ನೊ ಸೂಪರ್ ಜೈಂಟ್ಸ್ ತಂಡ ಐಪಿಎಲ್‌ನ 2024ನೇ ಆವೃತ್ತಿಯ 34ನೇ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ 8 ವಿಕೆಟ್‌ಗಳಿಂದ ಗೆಲುವು ಸಾಧಿಸಿದೆ. ಈ ಮೂಲಕ ಸತತ ಎರಡು ಸೋಲುಗಳ ಬಳಿಕ ಗೆಲವಿನ ಟ್ರ್ಯಾಕ್‌ಗೆ ಮರಳಿದೆ. ಲಕ್ನೊ ತಂಡಕ್ಕೆ ಹಾಲಿ ಆವೃತ್ತಿಯಲ್ಲಿ ಆಡಿದ ಏಳು ಪಂದ್ಯಗಳಲ್ಲಿ ನಾಲ್ಕನೇ ಗೆಲುವಾಗಿದೆ. ಅತ್ತ ಚೆನ್ನೈ ತಂಡ ಆಡಿರುವ ಏಳರಲ್ಲಿ ಮೂರನೇ ಸೋಲಿಗೆ ಒಳಗಾಯಿತು. ಭಾರತ ರತ್ನ ಶ್ರೀ ಅಟಲ್‌ಬಿಹಾರಿ ವಾಜಪೇಯಿ ಏಕನಾ ಕ್ರಿಕೆಟ್ ಸ್ಟೇಡಿಯಮ್‌ನಲ್ಲಿ ನಡೆದ ಪಂದ್ಯದಲ್ಲಿ ಟಾಸ್ ಗೆದ್ದ ಲಕ್ನೊ ತಂಡ ಮೊದಲು ಫೀಲ್ಡಿಂಗ್ ಮಾಡಿತು. ಅಂತೆಯೇ ಮೊದಲು ಬ್ಯಾಟ್ ಮಾಡಿದ ಚೆನ್ನೈ ತಂಡ ಆರಂಭಿಕ ವಿಕೆಟ್‌ಗಳ ನಷ್ಟದ ಹೊರತಾಗಿಯೂ ಕೊನೇ ಹಂತದಲ್ಲಿ ಉತ್ತಮವಾಗಿ ಆಡಿ ನಿಗದಿತ 20 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 176 ರನ್ ಬಾರಿಸಿತು. ಪ್ರತಿಯಾಗಿ ಆಡಿದ ಲಕ್ನೊ ತಂಡ 19 ಓವರ್‌ಗಳಲ್ಲಿ 2 ವಿಕೆಟ್ ನಷ್ಟಕ್ಕೆ 180 ರನ್ ಬಾರಿಸಿ ಗೆಲುವು ಸಾಧಿಸಿತು.

### ರಾಹುಲ್-ಡಿಕಾಕ್ ಅಬ್ಬರ

**ಲಕ್ನೋ ಸೂಪರ್‌ಜೈಂಟ್ಸ್‌ಗೆ ನಾಯಕ ಕೆಎಲ್ ರಾಹುಲ್ ಮತ್ತು ಕ್ವಿಂಟನ್ ಡಿ ಕಾಕ್ ಸ್ಥಿರ ಆರಂಭ ನೀಡಿದ್ದರು. ನಾಯಕ ಕೆಎಲ್ ರಾಹುಲ್ ಕ್ವಿಂಟನ್ ಡಿ ಕಾಕ್ ಲಕ್ನೋಗೆ ಉತ್ತಮ ಆರಂಭ ನೀಡಿದ್ದು, ಪವರ್‌ಪ್ಲೇ ಅಂತ್ಯಕ್ಕೆ ಲಕ್ನೋ ವಿಕೆಟ್ ನಷ್ಟವಿಲ್ಲದೆ 54 ರನ್ ಗಳಿಸಿತ್ತು. ಲಕ್ನೋ ನಾಯಕ ಕೆಎಲ್ ರಾಹುಲ್ ಸಿಎಸ್ ಕೆ ವಿರುದ್ಧ ಭರ್ಜರಿ ಬ್ಯಾಟಿಂಗ್ ನಡೆಸಿ ಅರ್ಧಶತಕ ಬಾರಿಸಿದ್ದಾರೆ. ಅಲ್ಲದೆ ಕ್ವಿಂಟನ್ ಡಿ ಕಾಕ್ ಅವರೊಂದಿಗೆ ಮೊದಲ ವಿಕೆಟ್‌ಗೆ ಶತಕದ ಜೊತೆಯಾಟವನ್ನು ಪೂರ್ಣಗೊಳಿಸಿದ್ರು. ಡಿಕಾಕ್ 54 ರನ್‌ಗಳಿಸಿ ಔಟಾದ್ರು. ಕೆಲ್ ರಾಹುಲ್ 53 ಬಾಲ್‌ಗಳಲ್ಲಿ 82 ರನ್‌ಗಳಿಸಿ ಕೊನೆಯಲ್ಲಿ ಜಡೇಜಾಗೆ ಕ್ಯಾಚ್ ನೀಡಿ ಔಟಾದ್ರು. ಕೈ ಕೊಟ್ಟ ಸ್ಟಾರ್ ಪ್ಲೇಯರ್ ದುಬೆ: ಚೆನ್ನೈ ಸೂಪರ್ ಕಿಂಗ್ಸ್ ಬ್ಯಾಟ್ಸ್‌ಮನ್ ಅಜಿಂಕ್ಯ ರಹಾನೆ 36 ರನ್ ಗಳಿಸಿ ಪೆವಿಲಿಯನ್‌ಗೆ ಮರಳಿದರು. ತಂಡದ ಸ್ಟಾರ್ ಬ್ಯಾಟರ್ ಶಿವಂ ದುಬೆ ಕೂಡ ಕೇವಲ 3 ರನ್‌ಗಳಿಗೆ ಔಟಾಗಿದ್ದಾರೆ. ಇಂಪ್ಯಾಕ್ಟ್ ಪ್ಲೇಯರ್ ಸಮೀರ್ ರಿಜ್ವಿ ಕೂಡ ಒಂದೇ ರನ್‌ಗೆ ಔಟಾದ್ರು.**

ಸ್ಪರ್ಧಾತ್ಮಕ ಗುರಿ ಬೆನ್ನಟ್ಟಲು ಆರಂಭಿಸಿದ ಲಕ್ನೊ ತಂಡದ ಪರ ಆರಂಭಿಕರಾದ ಕ್ವಿಂಟನ್ ಡಿ ಕಾಕ್ ಕೆ. ಎಲ್ ರಾಹುಲ್ ಉತ್ತಮವಾಗಿ ಆಡಿದರು. ಈ ಜೋಡಿ ಮೊದಲ ವಿಕೆಟ್‌ಗೆ 134 ರನ್ ಬಾರಿಸಿತು. ಅಷ್ಟರಲ್ಲಿ ಅವರಿಬ್ಬರೂ ಅರ್ಧ ಶತಕಗಳನ್ನು ದಾಖಲಿಸಿದ್ದರು. ನಿಧಾನಗತಿಯ ಪಿಚ್‌ನಲ್ಲಿ ಲಕ್ನೊ ಆಟಗಾರರು ಇನಿಂಗ್ಸ್ ಕಟ್ಟಿದರು. ಸ್ಟ್ರೈಕ್ ರೇಟ್ ಕಡಿಮೆ ಇದ್ದ ಹೊರತಾಗಿಯೂ ಗೆಲುವಿನಗೆ ಪೂರಕವಾದ ರನ್‌ಗಳನ್ನು ಬಾರಿಸಿದರು. ಕ್ವಿಂಟನ್ ಚೆನ್ನೈ ಬೌಲರ್ ಮುಸ್ತಾಫಿಜುರ್ ಎಸೆತಕ್ಕೆ ಔಟಾದರೆ, ರಾಹುಲ್ ಪತಿರಾಣಾಗೆ ವಿಕೆಟ್ ಒಪ್ಪಿಸಿದರು. ನಿಕೋಲಸ್ ಪೂರನ್ 23 ರನ್ ಸೇರಿಸಿದರು. ಮೊದಲು ಬ್ಯಾಟ್ ಮಾಡಲು ಆಹ್ವಾನ ಪಡೆದ ಚೆನ್ನೈ ತಂಡ ಬ್ಯಾ ಟಿಂಗ್ ವೈಫಲ್ಯ ಎದುರಿಸಿತು. ಅಜಿಂಕ್ಯ ರಹಾನೆ 36 ರನ್ ಬಾರಿಸಿದ ಹೊರತಾಗಿಯೂ ರಚಿನ್ ರವಿಂದ್ರ ಶೂನ್ಯಕ್ಕೆ ನಿರ್ಗಮಿಸಿದರು. ನಾಯಕ ಋತುರಾಜ್ 17 ರನ್‌ಗೆ ಸೀಮಿತಗೊಂಡರು. ನಾಲ್ಕನೇ ಕ್ರಮಾಂಕದಲ್ಲಿ ಆಡಲು ಬಂದ ರವಿಂದ್ರ ಜಡೇಜಾ ನಿಧಾನವಾಗಿ ಇನಿಂಗ್ಸ್ ಕಟ್ಟಿದರು. ಅವರು 40 ಎಸೆತ ಬಳಸಿಕೊಂಡು 57 ರನ್ ಬಾರಿಸಿ ತಂಡಕ್ಕೆ ಉಪಯುಕ್ತ ಕೊಡುಗೆ ನೀಡಿದರು. ಚೆನ್ನೈ ತಂಡದ ಆಪತ್ಬಾಂಧವ ಶಿವಂ ದುಬೆ 3 ರನ್‌ಗೆ ಸೀಮಿತಗೊಂಡರೆ ರಿಜ್ವಿ ಕೇವಲ 1 ರನ್‌ಗೆ ಔಟಾದರು. 90 ರನ್‌ಗೆ 5 ವಿಕೆಟ್ ಕಳೆದುಕೊಂಡ ಚೆನ್ನೈಗೆ ಕೊನೆ ಯಲ್ಲಿ ಮೊಯಿನ್ ಅಲಿ 30 ರನ್ ಮಹೇಂದ್ರ ಸಿಂಗ್ ಧೋನಿ 28 ರನ್ ಬಾರಿಸಿದರು.



53 ಬಾಲ್‌ಗಳಲ್ಲಿ 82 ರನ್

### ಐಪಿಎಲ್‌ನಲ್ಲಿ ಚರಿತ್ರೆ ಸೃಷ್ಟಿಸಿದ ಧೋನಿ...!

**ಐಪಿಎಲ್‌ನಲ್ಲಿ ಮತ್ತೊಮ್ಮೆ ಹೊಡಿಬಡಿ ಆಟ ಪ್ರದರ್ಶಿಸಿದ ಸಿಎಸ್‌ಕೆ ತಂಡದ ಮಾಜಿ ನಾಯಕ ಮಹೇಂದ್ರ ಸಿಂಗ್ ಧೋನಿ ತಮ್ಮ ಹೆಸರಿನಲ್ಲಿ ಹೊಸ ದಾಖಲೆ ಬರೆದುಕೊಂಡಿದ್ದಾರೆ. ಕೇವಲ 9 ಎಸೆತಗಳಲ್ಲಿ ಧೋನಿ 311.11 ಸ್ಟ್ರೈಕ್ ರೇಟ್‌ನಲ್ಲಿ 28 ರನ್ ಗಳಿದರು. 150ನ್ನೂ ದಾಟದ ಸ್ಥಿತಿಯಲ್ಲಿದ್ದ ತಂಡದ ಮೊತ್ತವನ್ನ 176 ಕ್ಕೆ ಕೊಂಡೊಯ್ದರು. ಐಪಿಎಲ್ 34ನೇ ಪಂದ್ಯದಲ್ಲಿ ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧ ಚೆನ್ನೈ ಸೂಪರ್ ಕಿಂಗ್ಸ್ ಸೆಣಸಾಡುತ್ತಿದೆ, ಮೊದಲು ಬ್ಯಾಟಿಂಗ್ ಮಾಡಿದ ಸಿಎಸ್‌ಕೆ 20 ಓವರ್ ಗಳಲ್ಲಿ 6 ವಿಕೆಟ್ ಕಳೆದುಕೊಂಡು 176 ರನ್ ಗಳಿಸಿದೆ. ಶ್ರೀಮಂತ ಕ್ರಿಕೆಟ್ ಲೀಗ್‌ನಲ್ಲಿ ಈ ಸಾಧನೆ ಮಾಡಿದ ಮೊದಲ ವಿಕೆಟ್ ಕೀಪರ್ ಬ್ಯಾಟರ್ ಎನಿಸಿಕೊಂಡರು. 2ನೇ ಸ್ಥಾನದಲ್ಲಿ ದಿನೇಶ್ ಕಾರ್ತಿಕ್ 4369 ರನ್ ಗಳಿಸಿದರೆ, ರಾಬಿನ್ ಉತ್ತಪ್ಪ 3011, ರಿಷಭ್ ಪಂತ್ 2850 ಹಾಗೂ ಕ್ವಿಂಟನ್ ಡಿ ಕಾಕ್ 2812 ರನ್‌ಗಳಿಸಿ ಟಾಪ್ 5 ಲಿಸ್ಟ್‌ನಲ್ಲಿದ್ದಾರೆ. ಧೋನಿ ಐಪಿಎಲ್‌ನಲ್ಲಿ 5,000 ರನ್ ಪೂರ್ಯೆಸಿದರು. ಶ್ರೀಮಂತ ಕ್ರಿಕೆಟ್ ಲೀಗ್‌ನಲ್ಲಿ ಈ ಸಾಧನೆ ಮಾಡಿದ ಮೊದಲ ವಿಕೆಟ್‌ಕೀಪರ್ ಬ್ಯಾಟರ್ ಎನಿಸಿಕೊಂಡರು. ಇನ್ನಿಂಗ್ಸ್‌ನ ಕೊನೆಯ ಓವರ್‌ನಲ್ಲಿ ಧೋನಿ 53 ಬೌಂಡರಿ ಹಾಗೂ 65 ಸಿಕ್ಸರ್ ಗಳನ್ನು ಬಾರಿಸಿದ್ದಾರೆ. ಈ ಋತುವಿನಲ್ಲೇ ಧೋನಿ 16 ಎಸೆತಗಳಲ್ಲಿ 4 ಬೌಂಡರಿ ಮತ್ತು 6 ಸಿಕ್ಸರ್ ಗಳಿಂದ 57 ರನ್ ಗಳಿಸಿದ್ದಾರೆ. ಅವರ ಸ್ಟ್ರೈಕ್ ರೇಟ್ 356.25. 20ನೇ ಓವರ್‌ನಲ್ಲಿ ಹೆಚ್ಚು ಸಿಕ್ಸರ್ ಸಿಡಿಸಿದ 2ನೇ ಬ್ಯಾಟರ್ ಎಂದರೆ ಕೀರನ್ ಪೊಲಾರ್ಡ್. ಮಾಜಿ ಮುಂಬೈ ಬ್ಯಾಟರ್ 33 ಸಿಕ್ಸರ್ ಸಿಡಿಸಿದ್ದಾರೆ. ಲಕ್ನೋದ ಏಕಾನಾ ಸ್ಟೇಡಿಯಂನಲ್ಲಿ ನಡೆದ ಪಂದ್ಯದಲ್ಲಿ 18ನೇ ಓವರ್‌ನಲ್ಲಿ ಧೋನಿ ಬ್ಯಾಟಿಂಗ್ ಇಳಿದಿದ್ದರು. ಕೊನೆಯಲ್ಲಿ ಅಬ್ಬರಿಸಿದ ಮಹಿ 9 ಎಸೆತಗಳಲ್ಲಿ 3 ಬೌಂಡರಿ ಮತ್ತು ಎರಡು ಸಿಕ್ಸರ್‌ಗಳನ್ನು ಬಾರಿಸಿದರು. ಇದರಲ್ಲಿ ಒಂದು ಸಿಕ್ಸರ್ 101 ಮೀಟರ್ ದೂರಕ್ಕೆ ಹಾರಿತು. ಪಂದ್ಯದ ಒಂದು ಸಮಯದಲ್ಲಿ ಅಖಿಖ ಸ್ಕೋರ್ 160 ರ ಆಸುಪಾಸಿನಲ್ಲಿ ಇನ್ನಿಂಗ್ಸ್ ಮುಗಿ ಸಬಹುದು ಎಂದು ನಿರೀಕ್ಷಿಸಲಾಗಿತ್ತು.**



## ಮೂರು ಕೆರೆಗಳನ್ನೂ ಅಭಿವೃದ್ಧಿ ಮಾಡಿದ ಆರ್‌ಸಿಬಿ

ಇಂಡಿಯಾ ಕೇರ್ಸ್ ಫೌಂಡೇಶನ್‌ನ ಇತ್ತೀಚಿನ ವರದಿಯ ಪ್ರಕಾರ, ರಾಯಲ್ ಚಾಲೆಂಜರ್ಸ್ ಬೆಂಗಳೂರು ಬೆಂಗಳೂರಿನ ಎರಡು ಪ್ರಮುಖ ಕೆರೆಗಳ ಪುನರುಜ್ಜೀವನ ಕಾರ್ಯವನ್ನು ಪೂರ್ಣಗೊಳಿಸಿದೆ, ಈ ಕೆರೆಗಳ ನೀರು ಹಿಡಿದಿಟ್ಟುಕೊಳ್ಳುವ ಸಾಮರ್ಥ್ಯವನ್ನು ಹೆಚ್ಚಿಸಿದೆ ಮತ್ತು ಮೂರನೇ ಕೆರೆ ಪಕ್ಕದಲ್ಲಿ ನಾಗರಿಕ ಸೌಲಭ್ಯಗಳನ್ನು ಸೇರಿಸಿದೆ.

ರಾಜಾನುಕುಂಟೆ ಸಮೀಪದ ಇಟ್ಟಗಲ್ಲಪುರ ಕೆರೆ ಮತ್ತು ಸಾದೇನಹಳ್ಳಿ ಕೆರೆಯಲ್ಲಿ ಆರ್‌ಸಿಬಿ ಹೂಳೆತ್ತುವ ಮತ್ತು ಅಭಿವೃದ್ಧಿಪಡಿಸುವ ಕೆಲಸ ಮಾಡಿದೆ. ಅಕ್ಟೋಬರ್ 2023 ರಲ್ಲಿ ಆರ್‌ಸಿಬಿ ಈ ಯೋಜನೆ ಪ್ರಾರಂಭಿಸಿತ್ತು. ಈ ಪ್ರದೇಶದಲ್ಲಿ ನೀರಿನ ಸಮಸ್ಯೆ ಹೆಚ್ಚಾಗಿದ್ದು ಬೋರ್‌ವೆಲ್‌ಗಳನ್ನು 1000 ರಿಂದ 1500 ಅಡಿಗಳವರೆಗೆ ಕೊರೆಸಬೇಕಾಗಿದೆ. ಈ ಪ್ರದೇಶಗಳು ಕಾವೇರಿ ನದಿಯ ನೀರಿನ ಲಭ್ಯತೆಯನ್ನು ಹೊಂದಿಲ್ಲ. ಹೀಗಾಗಿ ಈ ಕೆರೆಗಳನ್ನು ಅಭಿವೃದ್ಧಿ ಮಾಡಲಾಗಿದೆ.

ವರದಿಯ ಪ್ರಕಾರ, ಇಟ್ಟಗಲ್ಲಪುರ ರ ಕೆರೆ ಮತ್ತು ಸಾದೇನಹಳ್ಳಿ ಕೆರೆಯಿಂದ 1.20 ಲಕ್ಷ ಟನ್ ಹೂಳು ಮತ್ತು ಮರಳನ್ನು ತೆಗೆಯಲಾಗಿದೆ. ಇದನ್ನು ಕೆರೆಗಳಿಗೆ ಅಡ್ಡಲಾಗಿ ಕಟ್ಟೆಗಳು ಮತ್ತು ಮಾರ್ಗಗಳನ್ನು ನಿರ್ಮಿಸಲು ಬಳಸಲಾಗಿದೆ. 52 ರೈತರು ತಮ್ಮ ಹೊಲಗಳಿಗೆ ಮೇಲ್ಮಣ್ಣು ಬಳಸಲು ಮಣ್ಣನ್ನು ತೆಗೆದುಕೊಂಡಿದ್ದಾರೆ.

ಒಟ್ಟು ಒಂಬತ್ತು ಎಕರೆ ಕೆರೆ ಭೂಮಿಯನ್ನು ವಶಪಡಿಸಿಕೊಳ್ಳಲಾಗಿದೆ. ಇದರ ಪರಿಣಾಮವಾಗಿ ಕೊಳಗಳು ಮತ್ತು ಗದ್ದೆಗಳು ಸೃಷ್ಟಿಯಾಗಿವೆ. ಈ ವೈಶಿಷ್ಟ್ಯಗಳು ಸರೋವರಗಳಲ್ಲಿ ವಾಸಿಸುವ ಪಕ್ಷಿಗಳು ಮತ್ತು ಪ್ರಾಣಿಗಳಿಗೆ ಪ್ರಯೋಜನವನ್ನು ನೀಡುತ್ತಿವೆ ಕೆರೆಗಳ ನೀರು ಹಿಡಿದಿಟ್ಟುಕೊಳ್ಳುವ ಸಾಮರ್ಥ್ಯವೂ 17 ಎಕರೆಗಳವರೆಗೆ ಹೆಚ್ಚಾಗಿದೆ. ಈ ಸರೋವರಗಳು ಅಂತರ್ಜಲ ಮರುಪೂರಣಕ್ಕೆ ಅನುಕೂಲವಾಗುವುದಲ್ಲದೆ, ಕುಡಿಯುವ ನೀರಿನ ಪ್ರಮುಖ ಮೂಲಗಳಾಗಿ ಕಾರ್ಯನಿರ್ವಹಿಸುತ್ತವೆ. ಸುತ್ತಮುತ್ತಲಿನ ಪ್ರದೇಶದಲ್ಲಿ ಕೃಷಿ ಚಟುವಟಿಕೆಗಳನ್ನು ಬೆಂಬಲಿಸುತ್ತವೆ. ಇದು ಎರಡು ಸರೋವರಗಳ ಮೀನುಗಾರರು ಮತ್ತು ರೈತರಿಗೆ ಹೆಚ್ಚುವರಿ ಜೀವನೋಪಾಯದ ಅವಕಾಶಗಳನ್ನು ನೀಡುತ್ತದೆ. ಈಗ ಮೊದಲಿಗಿಂತ ಮೂರು ಪಟ್ಟು ಹೆಚ್ಚು ಮೀನು ಪಡೆಯಬಹುದು. ಪ್ರಸ್ತುತ ಕೃಷಿಗಾಗಿ ಕೊಳವೆಬಾವಿಗಳನ್ನು ಅವಲಂಬಿಸಿರುವ ರೈತರು ಈಗ ಈ ಪುನರುಜ್ಜೀವನಗೊಂಡ ಸರೋವರಗಳನ್ನು ಕೃಷಿ ಮತ್ತು ಇತರ ಉದ್ದೇಶಗಳಿಗಾಗಿ ಬಳಸಬಹುದು.

ಕಣ್ಣೂರು ಕರೆಯ ವ್ಯಾಪ್ತಿಯಲ್ಲಿ ನಾಗರಿಕ ಸೌಲಭ್ಯಗಳನ್ನು ನೀಡಲಾಗಿದೆ. ಎಲ್ಲಾ ಮೂರು ಸರೋವರಗಳಲ್ಲಿ ಜನಾಂಗೀಯ-ಔಷಧೀಯ ಸಸ್ಯಗಳ ಉದ್ಯಾನವನಗಳು, ಬಿದಿರು ಉದ್ಯಾನಗಳು ಮತ್ತು ಚಿಟ್ಟೆ ಉದ್ಯಾನಗಳನ್ನು ನಿರ್ಮಿಸಲಾಗಿದೆ. ಏಕೆಂದರೆ ಈ ಉಪಕ್ರಮವು ಸರೋವರಗಳ ಜೀವವೈವಿಧ್ಯತೆಯನ್ನು ಸುಧಾರಿಸುವ ಮತ್ತು ಸುಸ್ಥಿರಗೊಳಿಸುವ ಗುರಿ ಹೊಂದಿದೆ, ಪರಿಸರ ವ್ಯವಸ್ಥೆಯನ್ನು ಅರ್ಥಮಾಡಿಕೊಳ್ಳಲು ಮಕ್ಕಳಿಗೆ ಶೈಕ್ಷಣಿಕ ಕೇಂದ್ರಗಳಾಗಿ ಕಾರ್ಯನಿರ್ವಹಿಸುತ್ತದೆ.



## ರಾಜ್ ಕುಂದ್ರಾ, ಶಿಲ್ಪಾ ಶೆಟ್ಟಿ ದಂಪತಿ ಪ್ರತಿಕ್ರಿಯೆ



ಬಾಲಿವುಡ್ ನಟಿ ಶಿಲ್ಪಾ ಶೆಟ್ಟಿ ಮತ್ತು ಪತಿ ರಾಜ್ ಕುಂದ್ರಾಗೆ ಸೇರಿದ ಅಂದಾಜು 97 ಕೋಟಿ ರೂಪಾಯಿ ಮೌಲ್ಯದ ಆಸ್ತಿಯನ್ನು ಏ.18ರಂದು ಇಡಿ ಅಧಿಕಾರಿಗಳು ಜಪ್ತಿ ಮಾಡಿದ್ದಾರೆ. ಜಪ್ತಿ ಮಾಡಿದ ಆಸ್ತಿಯಲ್ಲಿ ಮುಂಬೈನ ಪ್ರತಿಷ್ಠಿತ ಜುಹುವಿನಲ್ಲಿರುವ ಅಪಾರ್ಟ್ ಮೆಂಟ್ ಕೂಡ ಸೇರಿದೆ. ಇಡಿ ದಾಳಿ ಬಳಿಕ ರಾಜ್ ಕುಂದ್ರಾ-ಶಿಲ್ಪಾ ಶೆಟ್ಟಿ ದಂಪತಿ ಸೋಶಿಯಲ್ ಮೀಡಿಯಾದಲ್ಲಿ ಪ್ರತಿಕ್ರಿಯೆ ನೀಡಿದ್ದಾರೆ.

ನಿಮಗೆ ಅಗೌರವ ತೋರುತ್ತಿರುವಾಗಲೂ ಶಾಂತವಾಗಿ ಇರುವುದನ್ನು ಕಲಿಯುವುದು ಒಂದು ಬೇರೆ ರೀತಿಯ ಬೆಳವಣಿಗೆ ಎಂದು ರಾಜ್ ಕುಂದ್ರಾ ಅವರು ಸೋಶಿಯಲ್ ಮೀಡಿಯಾದಲ್ಲಿ ಬರೆದುಕೊಂಡಿದ್ದಾರೆ. ಇಡಿ ದಾಳಿ ಮಾಡಿದ ಬಳಿಕ ಅವರ ಕಡೆಯಿಂದ ಬಂದಿರುವ ಮೊದಲ ಪ್ರತಿಕ್ರಿಯೆ ಇದಾಗಿದೆ. ಸಾಯಿ ಬಾಬ ದೇವರ ಫೋಟೋ ಶೇರ್ ಮಾಡಿ ದೇವರಿಗೆ ಶರಣು ಎಂಬರ್ಥದಲ್ಲಿ ಶಿಲ್ಪಾ ಶೆಟ್ಟಿ ಪೋಸ್ಟ್ ಮಾಡಿದ್ದಾರೆ.2022ರ ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದಿ ಅಡಿ ಇಡಿ ಪ್ರಕರಣವನ್ನು ದಾಖಲಿಸಿದ್ದು, ಜಾರಿ ನಿರ್ದೇಶನಾಲಯವು 97.97 ಕೋಟಿ ರೂಪಾಯಿ ಮೊತ್ತದ ಸ್ಥಿರ ಹಾಗೂ ಚರಾಸ್ತಿಯನ್ನು ಜಪ್ತಿ ಮಾಡಿದೆ. ಜಪ್ತಿಯಾದ ಆಸ್ತಿಗಳಲ್ಲಿ ಪುಣೆಯಲ್ಲಿರುವ ಬಂಗ್ಲೆ, ಫ್ಲಾಟ್ ಹಾಗೂ ಇಕ್ವಿಟಿ ಷೇರು ಕೂಡ ಹೊಂದಿವೆ.

ಈ ಹಿಂದೆ ಅಕ್ರಮ ಹಣ ವರ್ಗಾವಣೆಗೆ ಸಂಬಂಧಿಸಿದಂತೆ ವೇರಿಯಬಲ್ ಟೆಕ್ ಪ್ರೈವೇಟ್ ಲಿಮಿಟೆಡ್ ಹೆಸರಿನ ಸಂಸ್ಥೆಯ ವಿರುದ್ಧ ಮುಂಬೈ ಪೊಲೀಸರು ಪ್ರಕರಣ ದಾಖಲಿಸಿದ್ದರು. ಈ ಸಂಸ್ಥೆಯ ಮೂಲಕ ಅಮಿತ್ ಭಾರದ್ವಾಜ್, ವಿವೇಕ್, ಅಜಯ್, ಮಹೇಂದರ್ ಹೀಗೆ ಹಲವಾರು ಏಜೆಂಟರ್ ಗಳು ಬಿಟ್ ಕಾಯಿನ್ ರೂಪದಲ್ಲಿ 2017ರಲ್ಲಿ 6,600 ಕೋಟಿ ರೂ. ಹಣ ಸಂಗ್ರಹಿಸಿದ್ದರು. ಇವರ ಜೊತೆ ಶಿಲ್ಪಾ ಶೆಟ್ಟಿ ಮತ್ತು ರಾಜ್ ಕುಂದ್ರಾ ವ್ಯವಹಾರ ಮಾಡಿದ್ದರು ಎನ್ನುವ ಆರೋಪವಿದೆ.

ಅಕ್ರಮ ಹಣ ವರ್ಗಾವಣೆ

ಉಕ್ರೇನ್‌ನಲ್ಲಿ ಬಿಟ್ ಕಾಯಿನ್ ಮೈನಿಂಗ್ ಫಾರ್ಮ್ ಶುರು ಮಾಡುವುದಕ್ಕೆ ಶಿಲ್ಪಾ ಮತ್ತು ರಾಜ್ ಕುಂದ್ರಾ ದಂಪತಿ ಅಮಿತ್ ಭಾರದ್ವಾಜ್ ಬಳಿ 285 ಬಿಟ್ ಕಾಯಿನ್ ಪಡೆದಿದ್ದಾರೆ. ಸದ್ಯ ಈ ಬಿಟ್ ಕಾಯಿನ್ ಮೌಲ್ಯ ಸುಮಾರು 150 ಕೋಟಿ ರೂ. ಎಂದು ಎಂದು ತನಿಖಾ ಸಂಸ್ಥೆ ಹೇಳಿದೆ.

## ಮತ್ತೆ ಶಿವರಾಜ್‌ಕುಮಾರ್‌ಗೆ ಭಾವನಾ ಮೆನನ್ ನಾಯಕಿ



ಸಂದರ್ಶನವೊಂದರಲ್ಲಿ ಭಾವನಾ ಮಾಹಿತಿ

ಹ್ಯಾಟ್ರಿಕ್ ಹೀರೋ ಶಿವರಾಜ್‌ಕುಮಾರ್ ಮತ್ತು ಭಾವನಾ ಮೆನನ್ ಜೋಡಿಯಾಗಿ ನಟಿಸಿರುವ ಟಗರು, ಭಜರಂಗಿ-2 ಸಿನಿಮಾಗಳಿಗೆ ಅಪಾರ ಅಭಿಮಾನಿಗಳಿದ್ದಾರೆ. ಇವರಿಬ್ಬರ ಕಾಂಬಿನೇಷನ್‌ನಲ್ಲಿ ಅದ್ಯಾವಾಗ ಸಿನಿಮಾ ಬರಲಿದೆ ಎಂದು ಕಾಯುತ್ತಿದ್ದ ಅಭಿಮಾನಿಗಳಿಗೆ ಈಗ ಸಿಹಿಸುದ್ದಿ ಸಿಕ್ಕಿದೆ. ಹೊಸ ಚಿತ್ರಕ್ಕಾಗಿ ಶಿವಣ್ಣ ಮತ್ತು ಭಾವನಾ ಮತ್ತೆ ಜೋಡಿಯಾಗಿ ನಟಿಸಲಿದ್ದಾರೆ.

ಸದ್ಯ 'ಜಾಕಿ' ಭಾವನಾ ಕನ್ನಡದ ಜೊತೆಗೆ ಮಲಯಾಳಂ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಕನ್ನಡದ ಹೊಸ ಸಿನಿಮಾದಲ್ಲಿ ನಟಿಸುವ ಬಗ್ಗೆ ಸ್ವತಃ ಸಂದರ್ಶನವೊಂದರಲ್ಲಿ ಭಾವನಾ ಮಾಹಿತಿ ನೀಡಿದ್ದಾರೆ. ಬಹುನಿರೀಕ್ಷಿತ 'ಉತ್ತರಕಾಂಡ' ಚಿತ್ರದಲ್ಲಿ ಶಿವಣ್ಣ ಜೊತೆ ತೆರೆಹಂಚಿಕೊಳ್ಳುವ ಬಗ್ಗೆ ಸಿಹಿಸುದ್ದಿ ನೀಡಿದ್ದಾರೆ. ಜನವರಿಯಲ್ಲಿ 'ಉತ್ತರಕಾಂಡ' ಚಿತ್ರದಲ್ಲಿ ಪಾತ್ರಕ್ಕಾಗಿ ತಮ್ಮ ಸಂಪರ್ಕಿಸಿರೋದಾಗಿ ತಿಳಿಸಿದ್ದಾರೆ. ಏಪ್ರಿಲ್‌ನಲ್ಲಿ ಶೂಟಿಂಗ್ ಅಂದಿದ್ದರು. ನನ್ನ ಭಾಗದ ಚಿತ್ರೀಕರಣ ಮೇನಲ್ಲಿ ಶುರುವಾಗಲಿದೆ ಎಂದು ನಟಿ ಮಾಹಿತಿ ನೀಡಿದ್ದಾರೆ. 'ಉತ್ತರಕಾಂಡ' ಚಿತ್ರದಲ್ಲಿ ಶಿವರಾಜ್‌ಕುಮಾರ್ ಅವರ ಪತ್ನಿಯ ಪಾತ್ರದಲ್ಲಿ ಭಾವನಾ ನಟಿಸಿಲಿದ್ದಾರೆ ಎನ್ನಲಾಗುತ್ತಿದೆ. 20 ದಿನಗಳ ಶೂಟಿಂಗ್ ಇರಲಿದೆ ಭಾವನಾ ನಟಿಸಲಿರುವ ಪಾತ್ರದ ಶೂಟಿಂಗ್ ಇರಲಿದೆ ಎನ್ನಲಾಗಿದೆ. ಅಧಿಕೃತ ಮಾಹಿತಿ ಚಿತ್ರತಂಡದ ಕಡೆಯಿಂದ ಸಿಗುವವರೆಗೂ ಕಾಯಬೇಕಿದೆ. ಶಿವಣ್ಣ ಮತ್ತು ಡಾಲಿ ನಟನೆಯ ಈ ಸಿನಿಮಾದ ಚಿತ್ರೀಕರಣ ಸದ್ಯ ಬಿಜಾಪುರದಲ್ಲಿ ಭರದಿಂದ ನಡೆಯುತ್ತಿದೆ. ಚೈತ್ರ ಆಚಾರ್, ದಿಗಂತ್, ಯೋಗರಾಜ್ ಭಟ್, ಮಲಯಾಳಂ ನಟ ವಿಜಯ್ ಬಾಬು ಸೇರಿದಂತೆ ಹಲವು ನಟಿಸುತ್ತಿದ್ದಾರೆ.

## ಸಿನಿಮಾ ಸೆಟ್‌ನಲ್ಲಿ ಸುದೀಪ್ ಭೇಟಿಯಾದ ಕಾರ್ತಿಕ್ ಮಹೇಶ್



ಬಿಗ್ ಬಾಸ್ ಕನ್ನಡ ಸೀಸನ್ 10ರ ವಿನ್ನರ್ ಕಾರ್ತಿಕ್ ಮಹೇಶ್ ಇದೀಗ ಕಿಚ್ಚ ಸುದೀಪ್‌ರನ್ನು ಭೇಟಿಯಾಗಿದ್ದಾರೆ. ಚೆನ್ನೈನಲ್ಲಿ ನಡೆಯುತ್ತಿರುವ ಸುದೀಪ್ ನಟನೆಯ 'ಮ್ಯಾಕ್ಸ್' ಸಿನಿಮಾ ಸೆಟ್‌ಗೆ ಕಾರ್ತಿಕ್ ಆಗಮಿಸಿದ್ದು, ಕಿಚ್ಚನ ಜೊತೆಯಿರುವ ಫೋಟೋವನ್ನು ಕ್ಲಿಕ್ ಮಾಡಿದ್ದಾರೆ. ದೊಡ್ಮನೆ ಆಟ ಮುಗಿದ ಮೇಲೆ ಸುದೀಪ್‌ರನ್ನು ಕಾರ್ತಿಕ್ ಮಹೇಶ್ ಭೇಟಿಯಾಗಿರಲಿಲ್ಲ. ಬಹುದಿನಗಳ ನಂತರ ಚೆನ್ನೈ ಮಹಾಬಲಿಪುರಂನಲ್ಲಿ ಸುದೀಪ್‌ರನ್ನು ಭೇಟಿಯಾಗಿ ಕೆಲ ಕಾಲ ಸಮಯ ಕಳೆದಿದ್ದಾರೆ. 'ಮ್ಯಾಕ್ಸಿಮಮ್ ಲವ್' ಎಂದು ಅಡಿಬರಹ ನೀಡಿ ಕಿಚ್ಚನ ಜೊತೆಗಿನ ಫೋಟೋ ಶೇರ್ ಮಾಡಿ ಕಾರ್ತಿಕ್ ಮಹೇಶ್ ಸಂಭ್ರಮಿಸಿದ್ದಾರೆ. ಕಣ್ಣಿಗೆ ಸ್ಟೈಲೀಶ್ ಸನ್‌ಗ್ಲಾಸ್ ತೊಟ್ಟು ಸುದೀಪ್ ಸಖತ್ ಸ್ಮಾರ್ಟ್ ಆಗಿ ಕಾಣಿಸಿಕೊಂಡಿದ್ದಾರೆ. ಮ್ಯಾಕ್ಸ್ ಚಿತ್ರದ ಲುಕ್ ಲೀಕ್ ಆಗದೇ ಇರುವ ಹಾಗೇ ಎಚ್ಚರ ಕೂಡ ವಹಿಸಿದ್ದಾರೆ.

'ವಿಕ್ರಾಂತ್‌ರೋಣ' ಚಿತ್ರದ ನಂತರ ಸುದೀಪ್ ನಟನೆಯ 'ಮ್ಯಾಕ್ಸ್' ಸಿನಿಮಾ ಮೇಲೆ ಫ್ಯಾನ್ಸ್‌ಗೆ ಭಾರೀ ನಿರೀಕ್ಷೆಯಿದೆ. ಈ ಸಿನಿಮಾಗೆ ವಿಜಯ್ ಕಾರ್ತಿಕೇಯ ನಿರ್ದೇಶನ ಮಾಡಿದ್ದಾರೆ. ಈ ಸಿನಿಮಾಗಾಗಿ ಅಭಿಮಾನಿಗಳು ಎದುರು ನೋಡ್ತಿದ್ದಾರೆ.

## 18 ವರ್ಷಗಳ ಒಂದಾದ ಸೂರ್ಯ, ಜ್ಯೋತಿಕಾ

ತಮಿಳಿನ ಸ್ಟಾರ್ ಜೋಡಿ ಸೂರ್ಯ ಜ್ಯೋತಿಕಾ ತಮ್ಮ ಅಭಿಮಾನಿಗಳಿಗೆ ಗುಡ್ ನ್ಯೂಸ್ ಕೊಟ್ಟಿದ್ದಾರೆ. 18 ವರ್ಷಗಳ ನಂತರ ಮತ್ತೆ ಜೊತೆಯಾಗಿ ನಟಿಸಲು ಹೊಸ ಚಿತ್ರಕ್ಕಾಗಿ ಕೈಜೋಡಿಸಿದ್ದಾರೆ. ಈ ಸುದ್ದಿ ಕೇಳಿ ಅಭಿಮಾನಿಗಳು ಥ್ರಿಲ್ ಆಗಿದ್ದಾರೆ. ಸೂರ್ಯ ಮತ್ತು ಜ್ಯೋತಿಕಾ ಕಾಂಬಿನೇಷನ್‌ನಲ್ಲಿ ಸಾಕಷ್ಟು ಪ್ರೇಮ ಕಥೆಯ ಸಿನಿಮಾಗಳು ಈಗಾಗಲೇ ಬಂದಿದ್ದು, 7 ಸಿನಿಮಾಗಳು ಜೊತೆಯಾಗಿ ನಟಿಸಿದ್ದಾರೆ. ಹಾಗಾಗಿ ಈ ಜೋಡಿಯನ್ನು ಮತ್ತೆ ಸಿನಿಮಾಗಳಲ್ಲಿ ತೋರಿಸಬೇಕು ಅಂತ ಸ್ಟಾರ್ ಡೈರೆಕ್ಟರ್ ಒಬ್ಬರು ಪ್ಲ್ಯಾನ್ ಮಾಡಿದ್ದಾರೆ. ಅದಕ್ಕಾಗಿ ಸೂರ್ಯ ದಂಪತಿಯನ್ನು ಭೇಟಿಯಾಗಿ ಕಥೆ ಕೂಡ ಹೇಳಿದ್ದಾರೆ ಎನ್ನಲಾಗಿದೆ. ವಿಭಿನ್ನ ಕಥೆ ಎನಿಸಿ ಸಿನಿಮಾ ಮಾಡಲು ಗ್ರೀನ್ ಸಿಗ್ನಲ್ ನೀಡಿದ್ದಾರೆ ಎಂಬ ಮಾತುಗಳು ಹರಿದಾಡುತ್ತಿವೆ. ಚಿತ್ರತಂಡವಾಗಲಿ, ಈ ಜೋಡಿಯಾಗಲಿ ಯಾವುದೇ ಅಧಿಕೃತ ಮಾಹಿತಿ ನೀಡಿಲ್ಲ. ಅಲ್ಲಿಯವರೆಗೂ ಕಾದುನೋಡಬೇಕಿದೆ. ಈ ಹಿಂದೆ ಪೂವೆಲ್ಲಂ ಕೆಟ್ಟುಪ್ಪರ್, ಉಯಿರಿಲೆ ಕಲಂಥಾತು, ಕಾಖಾ ಕಾಖಾ, ಪೆರಳಗನ್, ಮಾಯಾವಿ, ಜೂನ್ ಆರ್ ಮತ್ತು ಸಿಲ್ಲುನ್ನು ಒರು ಕಾದಲ್ ಸಿನಿಮಾಗಳಲ್ಲಿ ಸೂರ್ಯ ಮತ್ತು ಜ್ಯೋತಿಕಾ ಜೊತೆಯಾಗಿ ನಟಿಸಿದ್ದಾರೆ.



## ಕಳವಳ ವ್ಯಕ್ತ ಪಡಿಸಿದ ಫ್ಯಾನ್ಸ್



ಇತ್ತೀಚೆಗಷ್ಟೇ ತಾನು ತಾಯಿ ಆಗುತ್ತಿರುವ ಕುರಿತಂತೆ ದೀಪಿಕಾ ಪಡುಕೋಣೆ ಹೇಳಿಕೊಂಡಿದ್ದರು. ಪ್ರೆಗ್ನೆಂಟ್ ಅಂತ ಹೇಳಿ ಇದೀಗ ಸಿನಿಮಾವೊಂದರ ಚಿತ್ರೀಕರಣದಲ್ಲಿ ತೊಡಗಿದ್ದಾರೆ ನಟಿ. ಈ ನಡೆಗೆ ಫ್ಯಾನ್ಸ್ ಆತಂಕ ವ್ಯಕ್ತ ಪಡಿಸಿದ್ದಾರೆ. ಈ ಸಮಯದಲ್ಲಿ ಚಿತ್ರೀಕರಣದಲ್ಲಿ ಪಾಲ್ಗೊಳ್ಳೋದು ಸರಿಯಲ್ಲ ಎಂದು ತಿಳುವಳಿಕೆ ಹೇಳಿದ್ದಾರೆ. ಯಾವುದಕ್ಕೂ ಹುಷಾರಾಗಿ ಕೆಲಸ ಮಾಡಿ ಎಂದು ಸಲಹೆಯನ್ನೂ ನೀಡಿದ್ದಾರೆ. ದೀಪಿಕಾ ಪಡುಕೋಣೆ ಸದ್ಯ 'ಸಿಂಗಂ ಅಗ್ಯೆನ್' ಸಿನಿಮಾದಲ್ಲಿ ಬ್ಯುಸಿಯಾಗಿದ್ದಾರೆ. ಕಾಯಕವೇ ಕೈಲಾಸ ಅಂತ ಈಗಾಗಲೇ ಒಪ್ಪಿಕೊಂಡಿರುವ ಸಿನಿಮಾಗಳಿಗೆ ಗರ್ಭಿಣಿ ದೀಪಿಕಾ ಸಾಥ್ ನೀಡುತ್ತಿದ್ದಾರೆ. ಸದ್ಯ ಚಿತ್ರೀಕರಣಕ್ಕೆ ಹಾಜರಿ ಹಾಕಿರುವ ದೀಪಿಕಾ ಫೋಟೋ ಸಾಮಾಜಿಕ ಜಾಲತಾಣದಲ್ಲಿ ಸದ್ದು ಮಾಡುತ್ತಿದೆ. 'ಪಠಾಣ್' ಮತ್ತು 'ಜವಾನ್' ಸಿನಿಮಾಗಳ ಸಕ್ಸಸ್ ನಂತರ ದೀಪಿಕಾ ಪಡುಕೋಣೆ ಸದ್ಯ ಬಾಲಿವುಡ್‌ನ ಟಾಪ್ ನಟಿಯಾಗಿದ್ದಾರೆ. ಕೈತುಂಬಾ ಸಿನಿಮಾಗಳು ಅವರ ಲಿಸ್ಟ್‌ನಲ್ಲಿದೆ. ಇದರ ನಡುವೆ ಇತ್ತೀಚೆಗೆ ತಾವು ತಾಯಿಯಾಗಿರುವ ಗುಡ್ ನ್ಯೂಸ್ ಕೊಟ್ಟಿದ್ದಾರೆ. ಆದರೆ ಈಗಾಗಲೇ ಒಪ್ಪಿಕೊಂಡಿರುವ ಚಿತ್ರಗಳನ್ನು ನಟಿ ಕೈಬಿಟ್ಟಿಲ್ಲ. 'ಸಿಂಗಂ ಅಗ್ಯೆನ್' ಚಿತ್ರದಲ್ಲಿ ದೀಪಿಕಾ ಪೊಲೀಸ್ ಅಧಿಕಾರಿ ನಟಿಸುತ್ತಿದ್ದಾರೆ. ಕಳೆದ ವರ್ಷದ ಅಂತ್ಯದಿಂದಲೇ ಅವರ ಭಾಗದ ಚಿತ್ರೀಕರಣ ಶುರುವಾಗಿತ್ತು. ಪ್ರೆಗ್ನೆಂಟ್ ಆಗಿರುವ ದೀಪಿಕಾ ವಿಶ್ರಾಂತಿ ಪಡೆಯಬೇಕಿತ್ತು. ಆದರೆ ಸಿನಿಮಾಗೆ ತೊಂದರೆ ಆಗಬಾರದು ಎಂದು ಕೊಟ್ಟ ಮಾತಿನಂತೆ, ತಮ್ಮ ಭಾಗದ ಚಿತ್ರೀಕರಣವನ್ನು ಮುಗಿಸಿ ಕೊಡಲು ಮತ್ತೆ ಶೂಟಿಂಗ್‌ಗೆ ನಟಿ ಭಾಗಿಯಾಗಿದ್ದಾರೆ. ಇದೀಗ ನಟಿಯ ಶೂಟಿಂಗ್ ಫೋಟೋಗಳು ಗಮನ ಸೆಳೆಯುತ್ತಿವೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966